KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫ | ಬೆಂಗಳೂರು, ಗುರುವಾರ, ಏಪ್ರಿಲ್ ೮, ೨೦೧೦ (ಚೈತ್ರ ೧೮, ಶಕವರ್ಷ ೧೯೩೨) | ಸಂಚಿಕೆ ೧೪

ವಿಷಯಸೂಚಿ

ವಿಶೇಷ ರಾಜ್ಯಪತ್ರಗಳು

ವಿ.ರಾ. ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ, ದಿನಾಂಕ ಮತ್ತು ವಿವರ
303	29.3.2010	ಸಂ. ಸಂವ್ಯಶಾಇ 16 ಶಾಸನ 2010, ದಿ. 29.3.2010 – ಕರ್ನಾಟಕ ಧನವಿನಿಯೋಗ (ಲೇಖಾನುದಾನ) ಅಧಿನಿಯಮ, 2010
304	29.3.2010	ಸಂ. ನಅಇ 95 ಎಂಎಲ್ಆರ್ 2008, ದಿ. 25.3.2010 – ದಿನಾಂಕ 1.1.2008ಕ್ಕೆ ಇರುವಂತೆ ಕರ್ನಾಟಕ ಪೌರಸೇವಾ ವೃಂದದ ಸಹಾಯಕ ಅಭಿಯಂತರರ ವೃಂದದ ಅಂತಿಮ ಜೇಷ್ಠತಾ ಪಟ್ಟಿ.
305	29.3.2010	ಸಂ. ಸಿಐ 151 ಎಸ್‌ಪಿಕ್ಯೂ 2010, ದಿ. 26.3.2010 – ಕೆ.ಐ.ಎ.ಡಿ. ಕಾಯ್ದೆ ಕಲಂ 3(1) 1(3) 28(1)ರಡಿ ಚಿಕ್ಕಬಳ್ಳಾಪುರ ಜಿಲ್ಲೆಯ ಕುಡುಮಲಕುಂಟೆ ಗ್ರಾಮಕ್ಕೆ ಸಂಬಂಧಿಸಿದಂತೆ ಅಧಿಸೂಚನೆ.
306	30.3.2010	ಸಂ. ಸಿಐ 150 ಎಸ್‌ಪಿಕ್ಯೂ 2010, ದಿ. 26.3.2010 – ಕೆ.ಐ.ಎ.ಡಿ. ಕಾಯ್ದೆ ಕಲಂ 3(1) 1(3) 28(1)ರಡಿ ತುಮಕೂರು ಜಿಲ್ಲೆಯ ಕುಪ್ಪೂರು ಗ್ರಾಮಕ್ಕೆ ಸಂಬಂಧಿಸಿದಂತೆ ಅಧಿಸೂಚನೆ.
307	30.3.2010	ಸಂ. ಸಿಐ 89 ಎಸ್‌ಪಿಕ್ಯೂ 2010, ದಿ. 28.3.2010 – ಕೆ.ಐ.ಎ.ಡಿ. ಕಾಯ್ದೆ 28(4)ರಡಿ ಉಡುಪಿ ಜಿಲ್ಲೆಯ ನಡ್ಸಾಲು ಗ್ರಾಮಕ್ಕೆ ಸಂಬಂಧಿಸಿದಂತೆ ಅಧಿಸೂಚನೆ.
308	30.3.2010	No. UDD 452 MNU 2009, Dt. 30.3.2010 - Karnataka Municipal Corporations (Recovery of improvement expenses) (Amendment) Rules, 2010.
309	30.3.2010	ಸಂ. ಸಂವ್ಯಶಾಇ 13 ಶಾಸನ 2010, ದಿ. 30.3.2010 – ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2010
310	30.3.2010	ಸಂ. ಸಂವ್ಯಶಾಇ 12 ಶಾಸನ 2010, ದಿ. 30.3.2010 – THE KARNATAKA TAXATION LAWS (AMENDMENT) ACT, 2010
311	30.3.2010	ಸಂ. ಸಂವ್ಯಶಾಇ 50 ಶಾಸನ 2009, ದಿ. 30.3.2010 – THE KARNATAKA CO-OPERATIVE SOCIETIES (AMENDMENT) ACT, 2010.
312	30.3.2010	ಸಂ. ಸಿಐ 429 ಎಸ್‌ಪಿಕ್ಯೂ 2009, ದಿ. 26.3.2010 – ಕೆ.ಐ.ಎ.ಡಿ. ಕಾಯ್ದೆ 28(4)ರಡಿ ರಾಮನಗರ ಜಿಲ್ಲೆಯ ತಗಚಗೆರೆ ಗ್ರಾಮಕ್ಕೆ ಸಂಬಂಧಿಸಿದಂತೆ ಅಧಿಸೂಚನೆ.
313	30.3.2010	ಸಂ. ಸಇ 115 ಎಂಆರ್ಇ (1) 2008 (ಭಾಗ), ದಿ. 30.3.2010 – ಗಂಗಾವತಿ ಕೃ.ಉ.ಮಾ. ಸಮಿತಿಯ ಮಾರುಕಟ್ಟೆ ಕ್ಷೇತ್ರದಲ್ಲಿನ ಕಾರಟಗಿಯಲ್ಲಿ ಸ್ವತಂತ್ರ ಮಾರುಕಟ್ಟೆ ಸ್ಥಾಪಿಸುವ ಬಗ್ಗೆ.
314	30.3.2010	ಸಂ. ಸಇ 115 ಎಂಆರ್ಇ (2) 2008 (ಭಾಗ), ದಿ. 30.3.2010 – ಕೃ.ಉ.ಮಾ. ಸಮಿತಿಯ ಹೆಸರನ್ನು ನಿರ್ದಿಷ್ಟಪಡಿಸುವ ಬಗ್ಗೆ.
315	30.3.2010	ಸಂ. ಸಇ 115 ಎಂಆರ್ಇ (3) 2008 (ಭಾಗ), ದಿ. 30.3.2010 – ಭತ್ತ ಮತ್ತು ಅಕ್ಕಿ ಉತ್ಪನ್ನಗಳ ಗಂಗಾವತಿ ಕೃ.ಉ.ಮಾ. ಸಮಿತಿಯ ಮಾರುಕಟ್ಟೆ ಕ್ಷೇತ್ರದಲ್ಲಿನ ಕಾರಟಗಿಯಲ್ಲಿ ಸ್ವತಂತ್ರ ಮಾರುಕಟ್ಟೆ ಸ್ಥಾಪಿಸುವ ಬಗ್ಗೆ.
316	31.3.2010	ಸಂ. ಸಿಐ 87 ಎಸ್‌ಪಿಕ್ಯೂ 2010, ದಿ. 29.3.2010 – ಕೆ.ಐ.ಎ.ಡಿ. ಕಾಯ್ದೆ ವಿಧಿ 4ರ ಮೇರೆಗೆ ಬೆಂಗಳೂರು ಜಿಲ್ಲೆಯ ಗಿಡ್ಡೇನಹಳ್ಳಿ ಗ್ರಾಮಕ್ಕೆ ಸಂಬಂಧಿಸಿದ ಅಧಿಸೂಚನೆ.
317	31.3.2010	No. FD 82 CSL 10, Dt. 31.3.2010 - Notification I to VI - Under Value Added Tax Act, 2003.
318	31.3.2010	No. FD 86 CSL 10, Dt. 31.3.2010 - Under Karnataka Tax on Entry of Goods Act, 1979.
319	31.3.2010	No. FD 94 CSL 10, Dt. 31.3.2010 - Under Sub-section (3) of Section 4 of the KVAT Act, 2003.
320	31.3.2010	ಸಂ. ಸಂವ್ಯಶಾಇ 14 ಶಾಸನ 2010, ದಿ. 31.3.2010 – THE KARNATAKA MOTOR VEHICLES TAXATION (AMENDMENT) ACT, 2010.
321	31.3.2010	ಸಂ. ಸಂವ್ಯಶಾಇ 15 ಶಾಸನ 2010, ದಿ. 31.3.2010 – THE KARNATAKA STAMP (SECOND AMENDMENT) ACT, 2010.
322	31.3.2010	ಸಂ. ನಅಇ 46 ಎಂಎಲ್ಆರ್ 2010(4), ದಿ. 29.3.2010 – ಹುಬ್ಬಳ್ಳಿ - ಧಾರವಾಡ ಮಹಾನಗರಪಾಲಿಕೆಯ ಚುನಾವಣೆ ಫಲಿತಾಂಶ.

ವಿ.ರಾ. ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ, ದಿನಾಂಕ ಮತ್ತು ವಿವರ
323	31.3.2010	No. HD 27 POSAE 2007, Dt. 9.3.2010 - Draft - Karnataka Government (Allotment of Quarters to Police Officers of and above the rank of Assistant Superintendents of Police) Rules, 2010.
324	1.4.2010	No. DPAR 21 SRR 2009, Dt. 30.3.2010 - Karnataka Civil Services (General Recruitment) (70th Amendment) Rules, 2010.
325	1.4.2010	ಸಂ. ಸಇ 331 ಎಂಆರ್‌ಇ 2008, ದಿ. 30.3.2010 – ಬಾಗಲಕೋಟೆ ಮಾರುಕಟ್ಟೆ ಸಮಿತಿಯನ್ನು ವಿಭಜಿಸಿ ಬೀಳಗಿ ತಾಲ್ಲೂಕಿಗೆ ಸ್ವತಂತ್ರ ಮಾರುಕಟ್ಟೆ ಸಮಿತಿಯನ್ನು ಸ್ಥಾಪಿಸುವ ಕುರಿತು.
326	1.4.2010	ಸಂ. ವಿಸಸ:ಶಾರಶಾ:ನಿಸ:58:2009–10, ದಿ. 12.3.2010 - ಕ.ವಿ. ಕಾರ್ಯವಿಧಾನ ಮತ್ತು ನಡವಳಿಕೆ ನಿಯಮಗಳಿಗೆ ತಿದ್ದುಪಡಿ.
327	1.4.2010	No. UDD 42 MLR 2010, Dt. 31.3.2010 - Draft - Karnataka Municipal Corporations (Election) (Amendment) Rules, 2010.
328	3.4.2010	ಸಂ. ಮುದ್ರಾಂಕ. 21/2009–10, ದಿ. 29.3.2010 – ಕೋಲಾರ ಉಪನೋಂದಣಿ ಕಛೇರಿಯ ಪರಿಷ್ಕರಿಸಿದ ಮಾರುಕಟ್ಟೆ ಬೆಲೆ ಪಟ್ಟಿ.
329	3.4.2010	ಸಂ. ಮುದ್ರಾಂಕ. 21/2009–10, ದಿ. 29.3.2010 – ಬಂಗಾರಪೇಟೆ ಉಪನೋಂದಣಿ ಕಛೇರಿಯ ಪರಿಷ್ಕರಿಸಿದ ಮಾರುಕಟ್ಟೆ ಬೆಲೆ ಪಟ್ಟಿ.
330	3.4.2010	ಸಂ. ಮುದ್ರಾಂಕ. 21/2009–10, ದಿ. 29.3.2010 – ಮಾಲೂರು ಉಪನೋಂದಣಿ ಕಛೇರಿಯ ಪರಿಷ್ಕರಿಸಿದ ಮಾರುಕಟ್ಟೆ ಬೆಲೆ ಪಟ್ಟಿ.
331	3.4.2010	ಸಂ. ಮುದ್ರಾಂಕ. 21/2009–10, ದಿ. 29.3.2010 – ಶ್ರೀನಿವಾಸಪುರ ಉಪನೋಂದಣಿ ಕಛೇರಿಯ ಪರಿಷ್ಕರಿಸಿದ ಮಾರುಕಟ್ಟೆ ಬೆಲೆ ಪಟ್ಟಿ.
332	3.4.2010	ಸಂ. ಮುದ್ರಾಂಕ. 21/2009–10, ದಿ. 29.3.2010 – ಮುಳಬಾಗಿಲು ಉಪನೋಂದಣಿ ಕಛೇರಿಯ ಪರಿಷ್ಕರಿಸಿದ ಮಾರುಕಟ್ಟೆ ಬೆಲೆ ಪಟ್ಟಿ.
333	3.4.2010	ಸಂ. ಸಿಐ 203 ಎಸ್‌ಪಿಕ್ಯೂ 2007, ದಿ. 3.4.2010 – ಕೆ.ಐ.ಎ.ಡಿ. ಕಾಯ್ದೆ 28(4)ರಡಿ ಬೆಂಗಳೂರು ಜಿಲ್ಲೆಯ ಹೂಡಿ ಗ್ರಾಮಕ್ಕೆ ಸಂಬಂಧಿಸಿದ ಅಧಿಸೂಚನೆ.
334	3.4.2010	No. LCS/ADM-1/134/C&R/2003, Dt. 26.3.2010 - Karnataka Legislative Council Secretariat (Recruitments and Conditions of service) (Amendment) Rules, 2009.
335	3.4.2010	ಸಂ. ಸಿಐ 266 ಎಸ್‌ಪಿಕ್ಯೂ 2007 (ಭಾಗ), ದಿ. 29.3.2010 - ಕೆ.ಐ.ಎ.ಡಿ. ಕಾಯ್ದೆ 28(4)ರಡಿ ಬೆಂಗಳೂರು ಜಿಲ್ಲೆಯ ಉಣಸೂರು ಗ್ರಾಮಕ್ಕೆ ಸಂಬಂಧಿಸಿದ ಅಧಿಸೂಚನೆ.
336	3.4.2010	ಸಂ. ಸಂವ್ಯಶಾಇ 26 ಶಾಸನ 2009, ದಿ. 3.4.2010 – ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2009
337	3.4.2010	ಸಂ. ಸಂವ್ಯಶಾಇ 27 ಶಾಸನ 2009, ದಿ. 3.4.2010 – ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2009.
338	3.4.2010	ಸಂ. ಸಂವ್ಯಶಾಇ 34 ಶಾಸನ 2009, ದಿ. 3.4.2010 - THE KARNATAKA STAMP (AMENDMENT) ACT, 2010
339	3.4.2010	ಸಂ. ಸಂವ್ಯಶಾಇ 45 ಶಾಸನ 2009, ದಿ. 3.4.2010 – ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2010
340	3.4.2010	No. RD 40 MUNOMU 2010, Dt. 1.4.2010 - Under Clause (a) of sub-section (1) of section 9 of the Karnataka Stamp Act, 1957.
341	3.4.2010	No. RD 58 MUNOMU 2010, Dt. 1.4.2010 - Under Section 78 of the Registration Act, 1908.

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು.
http//www.Kar.nic.in/gazette.

೨೦೧೦-೨೦೧೧ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪರಿಷ್ಕೃತ ಚಂದಾ ದರ

ಕ್ರಮ ಸಂಖ್ಯೆ	ರಾಜ್ಯಪತ್ರದ ಭಾಗಗಳು		ಪ್ರತಿ ಒಂದಕ್ಕೆ ರೂ. ಪೈ.	ವಾರ್ಷಿಕ ಚಂದಾ ದರ ರೂ. ಪೈ.
1.	ಭಾಗ - 1		22-00	880-00
2.	ಭಾಗ - 2		6-00	244-00
3.	ಭಾಗ - 3		26-00	1061-00
4.	ಭಾಗ - 4		4-00	175-00
5.	ಭಾಗ - 4ಎ		5-00	220-00
6.	ಭಾಗ - 5		22-00	879-00
7.	ಭಾಗ - 6	(ಬೆಂಗಳೂರು)	9-00	357-00
8.	ಭಾಗ - 6ಎ	(ಮೈಸೂರು)	32-00	1300-00
9.	ಭಾಗ - 6ಬಿ	(ಧಾರವಾಡ)	45-00	1790-00
10.	ಭಾಗ - 6ಸಿ	(ಗುಲ್ಬರ್ಗ)	30-00	1194-00
11.	ಸಂಪೂರ್ಣ ಕರ್ನಾಟಕ ರಾಜ್ಯಪತ್ರ ಕ್ರ.ಸ. 1 ರಿಂದ 7 (ಭಾಗ-1 ರಿಂದ 6) ವಿಶೇಷ ರಾಜ್ಯಪತ್ರವನ್ನು ಹೊರತುಪಡಿಸಿ		94-00	3816-00
12.	ವಿಶೇಷ ರಾಜ್ಯಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆಯಿರಿ ಮತ್ತು ಸರ್ಕಾರಿ ಪುಸ್ತಕ ಮಳಿಗೆಗಳಲ್ಲಿ ಮಾರಾಟಕ್ಕೆ ಲಭ್ಯವಿರುತ್ತವೆ.			

೨೦೧೦-೨೦೧೧ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪ್ರಕಟಣೆ ದರ

ಕ್ರಮ ಸಂಖ್ಯೆ	ಪ್ರಕಟಣೆ ದರಗಳು	ಮೊತ್ತ ರೂ. ಪೈ.
1.	ಸ್ಥಳೀಯ / ಸ್ಥಾನಿಕ ಸಂಸ್ಥೆ ಮತ್ತು ಸರ್ಕಾರದ ಇಲಾಖೆ ಎ-4 ಅಳತೆಯ ಪ್ರತಿ ಪುಟಕ್ಕೆ ...	500-00
2.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್ ...	11-00
3.	ಖಾಸಗಿ ಸಂಸ್ಥೆ ಮತ್ತು ವಾಣಿಜ್ಯಕ್ಕೆ ಸಂಬಂಧಿಸಿದಂತೆ (ಕೆಪಿಟಿಸಿಎಲ್, ಕೆಎಸ್‌ಆರ್‌ಟಿಸಿ ತರಹ ಇತ್ಯಾದಿ ಪ್ರತಿ ಪುಟಕ್ಕೆ) ...	750-00
4.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್ ...	16-50
5.	ಅರ್ಧ ಪುಟಕ್ಕೆ ಅಥವಾ ಕಾಲು ಪುಟಕ್ಕೆ ಬರುವ ವಿಷಯ ...	½ ಅಥವಾ ¼ ಪುಟಕ್ಕೆ ದರ ನಿಗಧಿ
6.	ಕಾಲು ಪುಟಕ್ಕಿಂತ ಕಡಿಮೆ ಇರುವ ವಿಷಯಕ್ಕೆ ...	ಕ್ರಮ ಸಂಖ್ಯೆ 1 ಮತ್ತು 3 ಕ್ರಮ ಸಂಖ್ಯೆ 2 ಮತ್ತು 4ರಲ್ಲಿ ನಮೂದಿಸಿರುವಂತೆ ಪ್ರತಿ ಸಾಲಿಗೆ ದರ ನಿಗದಿಪಡಿಸಿರುವುದು
7.	ಹೆಚ್ಚಾಗಿ ಬೇಕಾಗಿರುವ ಪ್ರತಿ ಹಾಳೆಯ ಬೆಲೆ (ಮುದ್ರಿಸಿರುವ ಹಾಳೆಯ ಅಳತೆಯನ್ನು ನಿರೂಪಿಸಿ) ...	1-00

ಸೂಚನೆ :- 1. ಚಂದಾ ಹಣದ / ಪ್ರಕಟಣಾ ವೆಚ್ಚದ ಮೊತ್ತವನ್ನು **"0058 ಲೇಖನ ಸಾಮಗ್ರಿ ಮತ್ತು ಮುದ್ರಣ (1) ರಾಜ್ಯಪತ್ರ ಮತ್ತು ಇತರ ಪ್ರಕಟಣಾ ವೆಚ್ಚಗಳು"** ಖಜಾನೆಗೆ ಸಲ್ಲಿಸಿ, ಮೂಲ ಚಲನನ್ನು ಮುಂದಿನ ಕ್ರಮಕ್ಕಾಗಿ ಈ ಕಛೇರಿಗೆ ಕಳುಹಿಸಬೇಕು.

2. ಭಾಗ VI-ಎ, VI-ಬಿ, VI-ಸಿ ಗಳನ್ನು ಅನುಕ್ರಮವಾಗಿ ಮೈಸೂರು, ಧಾರವಾಡ ಮತ್ತು ಗುಲ್ಬರ್ಗಾದ ಶಾಖಾ ಮುದ್ರಣಾಲಯಗಳಿಂದ ಪಡೆಯಬಹುದು.

3. ಕರ್ನಾಟಕ ರಾಜ್ಯಪತ್ರಕ್ಕಾಗಿ ಈ ಕೆಳಕಂಡ ವಿಳಾಸದಲ್ಲಿ ಪತ್ರ ವ್ಯವಹರಿಸತಕ್ಕದ್ದು.

ಸಂಕಲನಾಧಿಕಾರಿಗಳು,
ಕರ್ನಾಟಕ ರಾಜ್ಯಪತ್ರ,
ಸರ್ಕಾರಿ ಹೊರವಲಯ ಮುದ್ರಣಾಲಯ,
ಮೈಸೂರು ರಸ್ತೆ, ಬೆಂಗಳೂರು-59

ಮುದ್ರಕರು :-ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು-59

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೮, ೨೦೧೦ (ಚೈತ್ರ ೧೮, ಶಕ ವರ್ಷ ೧೯೩೨)	ಸಂಚಿಕೆ ೧೪

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕಂದಾಯ ಸಚಿವಾಲಯ

ವಿಷಯ : 2009–10ನೇ ಸಾಲಿನ ಲೆಕ್ಕಶೀರ್ಷಿಕೆ 2030 ಮುದ್ರಾಂಕ ಮತ್ತು ನೋಂದಣಿ ಅಡಿಯಲ್ಲಿ ಪುನರ್ ವಿನಿಯೋಗ ಮಾಡುವ ಕುರಿತು.

ಓದಲಾಗಿದೆ : ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ : ಬಿಯುಡಿ/28/2009–10 ದಿನಾಂಕ : 21–12–2009.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ : 21–12–2009ರ ಪತ್ರದಲ್ಲಿ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಅಯುಕ್ತರವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2030ರಡಿ ಕಟ್ಟಡ ವೆಚ್ಚ, ಸಾರಿಗೆ ವೆಚ್ಚ, ಪ್ರಯಾಣ ವೆಚ್ಚದ ಉಪ ಲೆಕ್ಕ ಶೀರ್ಷಿಕೆಗಳ ಆಯವ್ಯಯದಲ್ಲಿ ನೀಡಿರುವ ಅನುದಾನ ಸಂಪೂರ್ಣ ವೆಚ್ಚವಾಗಿದ್ದು, ಈಗ ಸದರಿ ಶೀರ್ಷಿಕೆಯಡಿ ಅನುದಾನ ಅವಶ್ಯಕತೆ ಇರುವುದರಿಂದ ಸದರಿ ಲೆಕ್ಕ ಶೀರ್ಷಿಕೆಯಡಿ ಪೂರಕ ವೆಚ್ಚದ ಉಪ ಲೆಕ್ಕ ಶೀರ್ಷಿಕೆಯಲ್ಲಿನ ರೂ. 50.00 ಲಕ್ಷಗಳನ್ನು ಪುನರ್ ಹೊಂದಾಣಿಕೆ ಮಾಡಿ ಆದೇಶ ಹೊರಡಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಕುಲಂಕಷವಾಗಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಕಂಇ 6 ಮುನೋಮು 2010, ಬೆಂಗಳೂರು, ದಿನಾಂಕ : 5ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 2009–10ನೇ ಸಾಲಿನ ಲೆಕ್ಕ ಶೀರ್ಷಿಕೆ 2030–02–102–0–00–015 ಪೂರಕ ವೆಚ್ಚ (ಯೋಜನೇತರ) ಈ ಲೆಕ್ಕ ಶೀರ್ಷಿಕೆಯಿಂದ ರೂ. 50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗೆ ಪುನರ್ ಹೊಂದಾಣಿಕೆ ಮಾಡಿ ಸರ್ಕಾರವು ಆದೇಶಿಸಿದೆ.

ಪುನರ್ ಹೊಂದಾಣಿಕೆ ಮೊತ್ತ
ರೂ. ಲಕ್ಷಗಳಲ್ಲಿ

ಲೆಕ್ಕ ಶೀರ್ಷಿಕೆ 2030–03–001–1–00–071 ಕಟ್ಟಡ ವೆಚ್ಚ (ಯೋಜನೇತರ)	30.50
ಉಪ ಲೆಕ್ಕ ಶೀರ್ಷಿಕೆ 195 – ಸಾರಿಗೆ ವೆಚ್ಚ (ಯೋಜನೇತರ)	16.50
ಉಪ ಲೆಕ್ಕ ಶೀರ್ಷಿಕೆ 041 – ಪ್ರಯಾಣ ವೆಚ್ಚ (ಯೋಜನೇತರ)	3.00
ಒಟ್ಟು	50.00

ಪುನರ್ ವಿನಿಯೋಗ ಪ್ರಪತ್ರ 22–ಎ–ಕೆ.ಎಫ್.ಸಿ. (ಅನುಚ್ಛೇದ 308) ನ್ನು ಅನುಬಂಧಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ : ಕಂಇ 3702 ಐಎಫ್ಎ 2010, ದಿನಾಂಕ : 21-01-2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ.ಕೆ. ರಾಮಚಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ.
(ನೋಂದಣಿ ಮತ್ತು ಮುದ್ರಾಂಕ)

ಪಿ.ಆರ್.465

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಮಾನ್ಯ ಗೃಹ ಸಚಿವರ ಅಧಿಕೃತ ನಿವಾಸ 'ಅನುಗ್ರಹ'ಕ್ಕೆ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು ಮರು ಅಳವಡಿಸಿರುವ ವೆಚ್ಚ ಪಾವತಿ ಮಾಡುವ ಬಗ್ಗೆ.

ಓದಲಾಗಿದೆ :
1) ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿಯವರ ಪತ್ರ, ದಿನಾಂಕ 05-10-2009
2) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 273 ಡಿಟಿಎನ್ 2008, ದಿನಾಂಕ 30-11-2009
3) ಸರ್ಕಾರದ ಪತ್ರ ಸಂಖ್ಯೆ : ಸಿಆಸುಇ 429 ಡಿಟಿಎನ್ 2009, ದಿನಾಂಕ 23-10-2009
4) ಮೆ॥ ಸ್ವಿಸ್ ಮಾರ್ಕೆಟಿಂಗ್ ಕಂ.,ಬೆಂಗಳೂರು ಸಂಸ್ಥೆಯ ಬಿಲ್ ಸಂಖ್ಯೆ:442,ದಿನಾಂಕ 06-01-2010

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಟಿಪ್ಪಣಿಯಲ್ಲಿ ಮಾನ್ಯ ಗೃಹ ಸಚಿವರ ಅಧಿಕೃತ ನಿವಾಸ ಅನುಗ್ರಹ, ಇಲ್ಲಿಗೆ ಇಪಿಎಬಿಎಕ್ಸ್ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು ಅಳವಡಿಸುವಂತೆ ಸಚಿವರ ಆಪ್ತ ಕಾರ್ಯದರ್ಶಿಯವರಿಂದ ಕೋರಿಕೆ ಬಂದಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಸಿ.ಆ.ಸು. ಇಲಾಖೆ (ಕಾರ್ಯಕಾರಿ) ಶಾಖೆಯ ವಶದಲ್ಲಿರುವ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು ಕೇಬ್ಲಿಂಗ್ ಮತ್ತು ಕೇಸಿಂಗ್ ವೆಚ್ಚವನ್ನು ಮೀಟರ್‌ಗೆ ರೂ. 14/- ರಂತೆ ನಿಗದಿಪಡಿಸಲಾಗಿದೆ. ಅದರಂತೆ ಮಾನ್ಯ ಗೃಹ ಸಚಿವರ ಅಧಿಕೃತ ನಿವಾಸಕ್ಕೆ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು (6+2) 8 ವಿಸ್ತೀರ್ಣಗಳೊಂದಿಗೆ ಒಂದು ಮೀಟರ್‌ಗೆ ರೂ. 14/- ವೆಚ್ಚದಲ್ಲಿ (ಕೇಬ್ಲಿಂಗ್ ಮತ್ತು ಕೇಸಿಂಗ್ ವೆಚ್ಚ ಸೇರಿ) ಅಳವಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಸದರಿ ಸಂಸ್ಥೆಯನ್ನು ಕೋರಲಾಗಿತ್ತು. ಅದರಂತೆ ಸಚಿವರ ಅಧಿಕೃತ ನಿವಾಸಕ್ಕೆ ಪ್ಯಾನಾಸೋನಿಕ್ ಕೀ ಟೆಲಿಫೋನ್ ವ್ಯವಸ್ಥೆಯನ್ನು ಮರು ಅಳವಡಿಸುವ ಒಟ್ಟು ವೆಚ್ಚ ರೂ. 13,300.00ನ್ನು ಪಾವತಿಸುವಂತೆ ಮೆ॥ ಸ್ವಿಸ್ ಮಾರ್ಕೆಟಿಂಗ್ ಕಂ., ಬೆಂಗಳೂರು ಸಂಸ್ಥೆಯು ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಬಿಲ್ಲನ್ನು ಪಾವತಿಗಾಗಿ ಸಲ್ಲಿಸಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 429 ಡಿಟಿಎನ್ 2009, ಬೆಂಗಳೂರು, ದಿನಾಂಕ 06ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿನ ವಿವರಣೆಯನ್ವಯ ಮಾನ್ಯ ಗೃಹ ಸಚಿವರ ಅಧಿಕೃತ ನಿವಾಸ ಅನುಗ್ರಹ ಇಲ್ಲಿಗೆ ಸಿ.ಆ.ಸು.ಇ. (ಕಾರ್ಯಕಾರಿ-ಎ) ಶಾಖೆಯ ದಾಸ್ತಾನಿನಲ್ಲಿದ್ದ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು 8 (6+2) ವಿಸ್ತರಣೆಗಳೊಂದಿಗೆ ಮರು ಅಳವಡಿಸಿರುವ (ಕೇಬ್ಲಿಂಗ್ ಮತು ಮರು ಅಳವಡಿಕೆ ವೆಚ್ಚ ಸೇರಿ) ವೆಚ್ಚ ರೂ. 13,300.00 (ರೂ. ಹದಿಮೂರು ಸಾವಿರದ ಮುನ್ನೂರು ಮಾತ್ರ) (ತೆರಿಗೆ ಸೇರಿ) ಗಳನ್ನು ಮೆ॥ ಸ್ವಿಸ್ ಮಾರ್ಕೆಟಿಂಗ್ ಕಂ/ ನಂ/ 277/14, ಪೋಸ್ಟ್ ಆಫೀಸ್ ಎದುರು, 10ನೇ ಕ್ರಾಸ್, ವಿಲ್ಸನ್ ಗಾರ್ಡನ್, ಬೆಂಗಳೂರು-27 ಸಂಸ್ಥೆಗೆ ಪಾವತಿ ಮಾಡಲು ಈ ಮೂಲಕ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "2013-ಮಂತ್ರಿಮಂಡಲ-800-ಇತರೆ ವೆಚ್ಚಗಳು-051-ಸಾಮಾನ್ಯ ವೆಚ್ಚಗಳು" ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 1996, ದಿನಾಂಕ 10-07-1996 ರಲ್ಲಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಕೆ. ಎಸ್. ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿ.ಆ.ಸು. ಇಲಾಖೆ (ಕಾರ್ಯಕಾರಿ)

ಪಿಆರ್-388

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರ ಅಧಿಕೃತ ನಿವಾಸಕ್ಕೆ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು ಮರು ಅಳವಡಿಸಿರುವ ವೆಚ್ಚ ಪಾವತಿ ಮಾಡುವ ಬಗ್ಗೆ.

ಓದಲಾಗಿದೆ :

1) ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ : ತೋಬಣಸ/1726/2009, ದಿನಾಂಕ 01-12-2009

2) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 273 ಡಿಟಿಎನ್ 2008, ದಿನಾಂಕ 30-11-2009

3) ಸರ್ಕಾರದ ಪತ್ರ ಸಂಖ್ಯೆ : ಸಿಆಸುಇ 493 ಡಿಟಿಎನ್ 2009, ದಿನಾಂಕ 22-12-2009

4) ಮೆ॥ ಸ್ವಿಸ್ ಮಾರ್ಕೆಟಿಂಗ್ ಕಂ., ಬೆಂಗಳೂರು ಸಂಸ್ಥೆ ಬಿಲ್ ಸಂಖ್ಯೆ 440 ದಿನಾಂಕ 05-01-2010

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಟಿಪ್ಪಣಿಯಲ್ಲಿ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರಿಗೆ ಸರ್ಕಾರದ ವತಿಯಿಂದ ಹಂಚಿಕೆಯಾಗಿರುವ ಮನೆ ನಂ. 80, 4ನೇ ಅಡ್ಡ ರಸ್ತೆ, 2ನೇ ಮುಖ್ಯ ರಸ್ತೆ, ಡಾಲರ್ಸ್ ಕಾಲೋನಿ, ಆರ್.ಎಂ.ವಿ. 2ನೇ ಹಂತ, ಬೆಂಗಳೂರು, ಇಲ್ಲಿನ ನಿವಾಸಕ್ಕೆ ಇಪಿಎಬಿಎಕ್ಸ್ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು ಅಳವಡಿಸುವಂತೆ ಸಚಿವರ ಆಪ್ತ ಕಾರ್ಯದರ್ಶಿಯವರಿಂದ ಕೋರಿಕೆ ಬಂದಿತ್ತು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಸಿ.ಆ.ಸು. ಇಲಾಖೆ (ಕಾರ್ಯಕಾರಿ) ಶಾಖೆಯ ವಶದಲ್ಲಿರುವ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯ ಕೇಬ್ಲಿಂಗ್ ಮತ್ತು ಕೇಸಿಂಗ್ ವೆಚ್ಚವನ್ನು ಮೀಟರ್‌ಗೆ ರೂ. 14/- ರಂತೆ ನಿಗದಿಪಡಿಸಲಾಗಿದೆ. ಅದರಂತೆ ಮಾನ್ಯ ತೋಟಗಾರಿಕೆ ಸಚಿವರ ಅಧಿಕೃತ ನಿವಾಸಕ್ಕೆ ಪ್ಯಾನಾಸೋನಿಕ್ ಕೀ ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು (3+1)4 ವಿಸ್ತೀರ್ಣಗಳೊಂದಿಗೆ ಒಂದು ಮೀಟರ್‌ಗೆ ರೂ. 14/- ವೆಚ್ಚದಲ್ಲಿ (ಕೇಬ್ಲಿಂಗ್ ಮತ್ತು ಕೇಸಿಂಗ್ ವೆಚ್ಚ ಸೇರಿ) ಅಳವಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಸದರಿ ಸಂಸ್ಥೆಯನ್ನು ಕೋರಲಾಗಿತ್ತು. ಅದರಂತೆ ಸಚಿವರ ಅಧಿಕೃತ ನಿವಾಸಕ್ಕೆ ಪ್ಯಾನಾಸೋನಿಕ್ ಕೀ ಟೆಲಿಫೋನ್ ವ್ಯವಸ್ಥೆಯನ್ನು ಮರು ಅಳವಡಿಸಿರುವ ಒಟ್ಟು ವೆಚ್ಚ ರೂ. 8,969.00ನ್ನು ಪಾವತಿಸುವಂತೆ ಮೆ॥ ಸ್ವಿಸ್ ಮಾರ್ಕೆಟಿಂಗ್ ಕಂ., ಬೆಂಗಳೂರು ಸಂಸ್ಥೆಯು ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಬಿಲ್ಲನ್ನು ಪಾವತಿಗಾಗಿ ಸಲ್ಲಿಸಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 493 ಡಿಟಿಎನ್ 2009, ಬೆಂಗಳೂರು, ದಿನಾಂಕ 06ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿನ ವಿವರಣೆಯನ್ವಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರ ಅಧಿಕೃತ ನಿವಾಸ ಸಂಖ್ಯೆ : 80. 4ನೇ ಅಡ್ಡ ರಸ್ತೆ, 3ನೇ ಮುಖ್ಯ ರಸ್ತೆ, ಡಾಲರ್ಸ್ ಕಾಲೋನಿ, ಆರ್.ಎಂ.ವಿ. 2ನೇ ಹಂತ, ಬೆಂಗಳೂರು ಇಲ್ಲಿಗೆ ಸಿ.ಆ.ಸು.ಇ. (ಕಾರ್ಯಕಾರಿ-ಎ) ಶಾಖೆಯ ದಾಸ್ತಾನಿನಲ್ಲಿದ್ದ ಪ್ಯಾನಾಸೋನಿಕ್ ಕೀ-ಟೆಲಿಫೋನ್ ಸಂಪರ್ಕ ವ್ಯವಸ್ಥೆಯನ್ನು 4 (3+1) ವಿಸ್ತರಣೆಗಳೊಂದಿಗೆ ಮರು ಅಳವಡಿಸಿರುವ (ಕೇಬ್ಲಿಂಗ್ ಮತ್ತು ಮರು ಅಳವಡಿಕೆ ವೆಚ್ಚ ಸೇರಿ) ವೆಚ್ಚ ರೂ. 8.960.00 (ರೂ. ಎಂಟು ಸಾವಿರದ ಒಂಭೈನೂರ ಅರವತ್ತು ಮಾತ್ರ) (ತೆರಿಗೆ-ಸೇರಿ) ಗಳನ್ನು ಮೇ॥ ಸ್ವಿಸ್ ಮಾರ್ಕೆಟಿಂಗ್ ಕಂ., ನಂ. 277/14. ಪೋಸ್ಟ್ ಆಫೀಸ್ ಎದುರು, 10ನೇ ಕ್ರಾಸ್ ವಿಲ್ಸನ್ ಗಾರ್ಡನ್, ಬೆಂಗಳೂರು-27 ಸಂಸ್ಥೆಗೆ ಪಾವತಿ ಮಾಡಲು ಈ ಮೂಲಕ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ಆಯವ್ಯಯ ಲೆಕ್ಕಶೀರ್ಷಿಕೆ "2013-ಮಂತ್ರಿಮಂಡಲ-800-ಇತರೆ ವೆಚ್ಚಗಳು-051-ಸಾಮಾನ್ಯ ವೆಚ್ಚಗಳು ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 1996, ದಿನಾಂಕ 10-07-1996 ರಲ್ಲಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ.

(ಕೆ. ಎಸ್. ಮಂಜುನಾಥ್)

ಸರ್ಕಾರದ ಅಧೀನ ಕಾರ್ಯದರ್ಶಿ

ಸಿ.ಆ.ಸು. ಇಲಾಖೆ (ಕಾರ್ಯಕಾರಿ)

ಪಿಆರ್-389

ಕಾರ್ಮಿಕ ಸಚಿವಾಲಯ

ವಿಷಯ : ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದ ತರಬೇತಿ ಅಧಿಕಾರಿಗಳಿಗೆ ಪ್ರಾಚಾರ್ಯರು ದರ್ಜೆ-2/ ಸಹಾಯಕ ನಿರ್ದೇಶಕರು ಹುದ್ದೆಗೆ ವೃತ್ತಿವಾರು ಜ್ಯೇಷ್ಠತೆಯನ್ವಯ ಬಡ್ತಿ ನೀಡಿರುವುದನ್ನು ಹಿಂಪಡೆಯುವ ಬಗ್ಗೆ.

ಓದಲಾಗಿದೆ : 1) ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 295 ಇಟಿಐ 2006, ದಿನಾಂಕ 22-12-2006

2) ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 347 ಇಟಿಐ 2007(1), ದಿನಾಂಕ 07-01-2008

3) ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 347 ಇಟಿಐ 2007(2), ದಿನಾಂಕ 07-01-2008

4) ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ 1495/97, 4466-4467/97 ಮತ್ತು 3761/98 ಮೇಲಿನ ಅಂತಿಮ ಆದೇಶ ದಿನಾಂಕ 24-03-2005.

5) ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ 4585-90/2005, 6765-66/2005 ಮತ್ತು 7437-54/2005ರ ದಿನಾಂಕ 17-09-2009ರ

ಅಂತಿಮ ಆದೇಶ

6) ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ನ್ಯಾಯಾಲಯ ನಿಂದನಾ ಅರ್ಜಿ ಸಂಖ್ಯೆ : 86-87/2009, 88-89/2009 ಮತ್ತು 90-91/2009

7) ಕಾರಣ ಕೇಳುವ ನೋಟೀಸ್ ಸಂಖ್ಯೆ ಕಾಇ 225 ಇಟಿಐ 2009, ದಿನಾಂಕ 20-05-2009

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದಲ್ಲಿ ಖಾಲಿಯಿದ್ದ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ಹುದ್ದೆಗಳಿಗೆ ತರಬೇತಿ ಅಧಿಕಾರಿಗಳಿಗೆ ವೃತ್ತಿವಾರು ಜ್ಯೇಷ್ಠತೆಯನ್ವಯ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ/ಉಚ್ಚ ನ್ಯಾಯಾಲಯವು ನೀಡಬಹುದಾದ ತೀರ್ಪಿನ ಷರತ್ತಿಗೊಳಪಟ್ಟು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32ರನ್ವಯ 21 ಅಧಿಕಾರಿಗಳನ್ನು ಸ್ವತಂತ್ರ ಪ್ರಭಾರದಲ್ಲಿ ನೇಮಕ ಮಾಡಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದಲ್ಲಿ ಖಾಲಿಯಿದ್ದ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ಹುದ್ದೆಗಳಿಗೆ ಮೇಲೆ (1)ರಲ್ಲಿ ಓದಲಾದ ಅಧಿಸೂಚನೆಯನ್ವಯ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32ರನ್ವಯ ಸ್ವತಂತ್ರ ಪ್ರಭಾರದಲ್ಲಿಟ್ಟ 17 ಅಧಿಕಾರಿಗಳೊಂದಿಗೆ ಅಧಿಸೂಚನೆ ಸಂಖ್ಯೆ : ಕಾಇ 165 ಇಟಿಐ 2001 ದಿನಾಂಕ 04-04-2003 ರಲ್ಲಿ ಪ್ರಾಚಾರ್ಯರು ದರ್ಜೆ-2 ಹುದ್ದೆಯ ಸ್ವತಂತ್ರ ಪ್ರಭಾರದಲ್ಲಿರಿಸಿದ ಶ್ರೀ ಟಿ. ಆರ್. ಲಕ್ಷ್ಮೀರಾಜಯ್ಯ ರವರಿಗೂ ಸಹ ಸ್ಥಾನಪನ್ನ ಮುಂಬಡ್ತಿಯನ್ನು ನೀಡಲಾಗಿತ್ತು.

ಮೇಲೆ (3) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದಲ್ಲಿ ಖಾಲಿಯಿದ್ದ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ಹುದ್ದೆಗಳಿಗೆ 03 ಅಧಿಕಾರಿಗಳಿಗೆ ಸ್ಥಾನಪನ್ನ ಮುಂಬಡ್ತಿಯನ್ನು ನೀಡಲಾಗಿತ್ತು.

ಮೇಲೆ (4)ರಲ್ಲಿ ಓದಲಾದ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅಂತಿಮ ಆದೇಶದಲ್ಲಿ ದಿನಾಂಕ 20-12-1996ರ ಕಿರಿಯ ತರಬೇತಿ ಅಧಿಕಾರಿಗಳ ವೃತ್ತಿವಾರು ಜ್ಯೇಷ್ಠತಾ ಪಟ್ಟಿಯನ್ನು ತಳ್ಳಿಹಾಕಿರುತ್ತದೆ.

ಮೇಲೆ (5)ರಲ್ಲಿ ಓದಲಾದ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮಧ್ಯಂತರ ಅದೇಶದಲ್ಲಿ ದಿನಾಂಕ 26-09-2005 ರಿಂದ ಯಥಾಸ್ಥಿತಿಯನ್ನು ಕಾಯ್ದುಕೊಳ್ಳುವಂತೆ ಆದೇಶಿಸಲಾಗಿತ್ತು.

ಮೇಲೆ (6)ರಲ್ಲಿ ಓದಲಾದ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ನಿಂದನಾ ಅರ್ಜಿಗಳಲ್ಲಿ ದಿನಾಂಕ 26-09-2005ರ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮಧ್ಯಂತರ ಆದೇಶವನ್ನು ಅನುಷ್ಠಾನಗೊಳಿಸದಿರುವ ಕ್ರಮವನ್ನು ಅರ್ಜಿದಾರರು ಪ್ರಶ್ನಿಸಿರುತ್ತಾರೆ.

ಮೇಲೆ (7)ರಲ್ಲಿ ಓದಲಾದ ಕಾರಣ ಕೇಳುವ ನೋಟೀಸುಗಳಲ್ಲಿ ವೃತ್ತಿವಾರು ಜ್ಯೇಷ್ಠತೆಯನುಸಾರ ತರಬೇತಿ ಅಧಿಕಾರಿ ಹುದ್ದೆಯಿಂದ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ವೃಂದಕ್ಕೆ ಮುಂಬಡ್ತಿ ಪಡೆದ ಅಧಿಕಾರಿಗಳಿಗೆ ನೀಡಲಾದ ಮುಂಬಡ್ತಿಯನ್ನು ಪೂರ್ವಾನ್ವಯವಾಗಿ ಹಿಂಪಡೆಯುವ ಬಗ್ಗೆ ಸಮಜಾಯಿಷಿ ನೀಡುವಂತೆ ಕೋರಲಾಗಿತ್ತು. ಸದರಿ ಅಧಿಕಾರಿಗಳು ನೀಡಿರುವ ಸಮಜಾಯಿಷಿಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಅಲ್ಲದೆ ಈ ಅಧಿಕಾರಿಗಳು ಉಲ್ಲೇಖ (4)ರ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಉಲ್ಲೇಖ (5)ರಲ್ಲಿ ವಜಾಗೊಳಿಸಲಾಗಿರುತ್ತದೆ ಹಾಗೂ ಈ ಕುರಿತು ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿ ಸಲ್ಲಿಸಲಾದ ರಿಟ್ ಅರ್ಜಿ ಸಂಖ್ಯೆ: 286740-28651/2009 ಮತ್ತು 28653/2009ಗಳನ್ನು ಮಾನ್ಯ ಉಚ್ಚ ನ್ಯಾಯಾಲಯವು ಸಹ ವಜಾಗೊಳಿಸಿರುತ್ತದೆ. ಆದಕಾರಣ ವೃತ್ತಿವಾರು ಜ್ಯೇಷ್ಠತೆಯನುಸಾರ ತರಬೇತಿ ಅಧಿಕಾರಿ ಹುದ್ದೆಯಿಂದ ಪ್ರಾಚಾರ್ಯರು ದರ್ಜೆ-2/ಸಮಾನಾಂತರ

ವೃಂದಕ್ಕೆ ಮುಂಬಡ್ತಿ ಪಡೆದ ಅಧಿಕಾರಿಗಳ ಮುಂಬಡ್ತಿ ಆದೇಶಗಳನ್ನು ಹಿಂಪಡೆಯುವ ಕುರಿತು ತೀರ್ಮಾನಿಸಲಾಗಿರುತ್ತದೆ. ಆದ್ಧರಿಂದ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ : ಕಾಇ 225 ಇಟಿಐ 2009, ಬೆಂಗಳೂರು, ದಿನಾಂಕ 08ನೇ ಫೆಬ್ರವರಿ 2010

ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದ ಈ ಕೆಳಕಂಡ ತರಬೇತಿ ಅಧಿಕಾರಿಗಳಿಗೆ ದಿನಾಂಕ 26-12-1996ರ ವೃತ್ತಿವಾರು ಜ್ಯೇಷ್ಠತೆಯನ್ವಯ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ವೃಂದಕ್ಕೆ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 32 ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿದ ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 295 ಇಟಿಐ 2006 ದಿನಾಂಕ 22-12-2006 ಹಾಗೂ ಪ್ರಾಚಾರ್ಯರು ದರ್ಜೆ-2/ಸಮಾನಾಂತರ ವೃಂದಕ್ಕೆ ಸ್ಥಾನಪನ್ನ ಮುಂಬಡ್ತಿ ನೀಡಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 347 ಇಟಿಐ 2007 (1) ದಿನಾಂಕ 07-01-2008 ಮತ್ತು ಕಾಇ 347 ಇಟಿಐ 2007(2) ದಿನಾಂಕ 07-01-2008ರ ಅಧಿಸೂಚನೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಹಿಂಪಡೆಯಲಾಗಿದೆ ಇವರಿಗೆ ತರಬೇತಿ ಅಧಿಕಾರಿ ವೃಂದದಲ್ಲಿ ಸೂಕ್ತ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸುವಂತೆ ಆಯುಕ್ತರು ಉದ್ಯೋಗ ಮತ್ತು ತರಬೇತಿ ಇಲಾಖೆ ಇವರಿಗೆ ತಿಳಿಸಿದೆ.

1. ಶ್ರೀ ಟಿ. ಆರ್. ಲಕ್ಷ್ಮೀರಾಜಯ್ಯ
2. ಶ್ರೀ ಎಂ. ಎಸ್. ಸುಬ್ರಹ್ಮಣ್ಯ
3. ಶ್ರೀ ಕೆ. ಶಂಕರಮೂರ್ತಿ
4. ಶ್ರೀ ಜಗದೀಶ್
5. ಶ್ರೀಮತಿ ಕಲ್ಪನಾ ಬಿ. ಗೋಗಲೆ
6. ಶ್ರೀ ಹೆಚ್.ಎಂ. ಜರೀಫುಲ್ಲಾ
7. ಶ್ರೀಮತಿ ಪಿ. ರಮಾ
8. ಶ್ರೀ ಯು.ಕೆ. ರಜಪೂತ
9. ಶ್ರೀ ಮುರಳೀಧರ ಟಿ. ಲಮಾಣಿ
10. ಶ್ರೀಮತಿ ಚೇತನಾ ವಿ. ಹಿರೇಮಠ
11. ಶ್ರೀ ಗಿರಿಧರಮೂರ್ತಿ
12. ಶ್ರೀಮತಿ ನಾಗರತ್ನ ವಿ. ಕೊಟೂರು
13. ಶ್ರೀ ಎ. ಬಾಲಕೃಷ್ಣ
14. ಶ್ರೀಮತಿ ಜಯಲಕ್ಷ್ಮಿ ಕೆ.
15. ಶ್ರೀ ಸಿ. ವಿ. ಹಲಕುರ್ಕಿ
16. ಶ್ರೀಮತಿ ಎಂ. ಸಿ. ನಾಗರತ್ನ
17. ಶ್ರೀಮತಿ ರೇವತಿ ವಿ.
18. ಶ್ರೀ ಎಂ. ಜಯೇಂದ್ರ
19. ಶ್ರೀಮತಿ ಎಸ್. ವನಜ
20. ಶ್ರೀ ಡಿ. ವಿ. ಸುರೇಶ್
21. ಶ್ರೀ ಸಿ. ಜಿ. ರವಿಶಂಕರ್

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎ. ಎಸ್. ವಿಶ್ವೇಶ್ವರಯ್ಯ)
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ,
(ಉದ್ಯೋಗ ಮತ್ತು ತರಬೇತಿ)

ಪಿಆರ್-390

ಕಾರ್ಮಿಕ ಸಚಿವಾಲಯ

ವಿಷಯ : ಉದ್ಯೋಗ ವಿನಿಮಯ ಕೇಂದ್ರಗಳ (ಖಾಲಿ ಹುದ್ದೆಗಳ ಕಡ್ಡಾಯ ಅಧಿಸೂಚನೆ) ಅಧಿನಿಯಮ ಜಾರಿ ಘಟಕ, ಗುಲ್ಬರ್ಗಾ, ಮೈಸೂರು ಮತ್ತು ಹುಬ್ಬಳ್ಳಿ ಇಲ್ಲಿಗೆ ಮಂಜೂರಾಗಿರುವ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಸ್ಥಳಾಂತರಿಸುವ ಬಗ್ಗೆ.

ಓದಲಾಗಿದೆ : ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆಯವರ ಪತ್ರ ಸಂ. ಉತಇ/ಉದ್ಯೋಗ/ಅಧಿಕಾರಿ-1/ಸಿಎ-65/2009-10 ದಿನಾಂಕ : 07-01-2010.

ಪ್ರಸ್ತಾವನೆ :

ಮೇಲೆ ಓದಲಾದ ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ಇವರ ಪತ್ರದಲ್ಲಿ ಉದ್ಯೋಗ ವಿನಿಮಯ ಕೇಂದ್ರಗಳ (ಖಾಲಿ ಹುದ್ದೆಗಳ ಕಡ್ಡಾಯ ಅಧಿಸೂಚನೆ) ಅಧಿನಿಯಮ ಜಾರಿ ಘಟಕ, ಮೈಸೂರು, ಹುಬ್ಬಳ್ಳಿ, ಮತ್ತು ಗುಲ್ಬರ್ಗಾ ಈ ಘಟಕ ಕಛೇರಿಗಳಿಗೆ ಮಂಜೂರಾಗಿದ್ದ 3 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಕ್ರಮವಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಮೈಸೂರು, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬೆಳಗಾವಿ ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಗುಲ್ಬರ್ಗಾ ಇಲ್ಲಿಗೆ ಸ್ಥಳಾಂತರಿಸಿ ಆಡಳಿತಾತ್ಮಕ ಅಧಿಕಾರ, ಹಣ ತೆಗೆಯುವ ಮತ್ತು ಬಟವಾಡೆ ಮಾಡುವ ಅಧಿಕಾರವನ್ನು ಮಂಜೂರು ಮಾಡಿ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿರುವರು.

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಕೆಳಗಿನಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಕಾಇ 3 ಇಟಿಎಕ್ಸ್ 2010, ಬೆಂಗಳೂರು, ದಿನಾಂಕ 04ನೇ ಫೆಬ್ರವರಿ 2010

ಉದ್ಯೋಗ ವಿನಿಮಯ ಕೇಂದ್ರಗಳ (ಖಾಲಿ ಹುದ್ದೆಗಳ ಕಡ್ಡಾಯ ಅಧಿಸೂಚನೆ)ಅಧಿನಿಯಮ ಜಾರಿ ಘಟಕ, ಮೈಸೂರು, ಹುಬ್ಬಳ್ಳಿ ಮತ್ತು ಗುಲ್ಬರ್ಗಾ ಈ ಘಟಕ ಕಛೇರಿಗಳಿಗೆ ಮಂಜೂರಾಗಿದ್ದ 3 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಕ್ರಮವಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಮೈಸೂರು, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬೆಳಗಾವಿ ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಗುಲ್ಬರ್ಗಾ ಇಲ್ಲಿಗೆ ಸ್ಥಳಾಂತರಿಸಿ ಹಣ ತೆಗೆಯುವ ಮತ್ತು ಬಟವಾಡೆ ಮಾಡುವ ಅಧಿಕಾರವನ್ನು ಪ್ರತ್ಯಾಯೋಜಿಸಿ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎ. ಎಸ್. ವಿಶ್ವೇಶ್ವರಯ್ಯ)
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ,
(ಉದ್ಯೋಗ ಮತ್ತು ತರಬೇತಿ)

ಪಿಆರ್-391

ಮೂಲಸೌಲಭ್ಯ ಅಭಿವೃದ್ಧಿ ಸಚಿವಾಲಯ

ವಿಷಯ : ತುಮಕೂರು ನಗರದ ಉಪ್ಪಾರಹಳ್ಳಿ ರೈಲು ನಿಲ್ದಾಣದ ಬಳಿ ಇರುವ ಎಲ್.ಸಿ.ಸಂ. 40-41ರ ರಸ್ತೆ ಮೇಲು ಸೇತುವೆಯ ಕೂಡು ರಸ್ತೆ ನಿರ್ಮಾಣಕ್ಕೆ ಹಣ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1) ಸರ್ಕಾರದ ಆದೇಶ ಸಂಖ್ಯೆ : ಮೂಅಇ 65 ರಾರಾಹೆ 2007, ದಿನಾಂಕ 27-7-07
2) ಸರ್ಕಾರದ ಆದೇಶ ಸಂಖ್ಯೆ : ಮೂಅಇ 65 ರಾರಾಹೆ 2007, ದಿನಾಂಕ 12-8-2008
3) ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಸಂಪರ್ಕ ಮತ್ತು ಕಟ್ಟಡ, (ದ) ಬೆಂಗಳೂರು ಇವರ ದಿನಾಂಕ 04-02-2010 ಪತ್ರ ಸಂಖ್ಯೆ : ಸಿಬಿಎಸ್‌ರೈಸುಕಾ : ಅನುದಾನ 2009-10 ಪತ್ರ.

ಪ್ರಸ್ತಾವನೆ :

ತುಮಕೂರು ನಗರದ ಉಪ್ಪಾರಹಳ್ಳಿ ರೈಲು ನಿಲ್ದಾಣದ ಬಳಿ ಇರುವ ಎಲ್.ಸಿ.ಸಂ. 40-41ರ ರಸ್ತೆ ಮೇಲು ಸೇತುವೆಯ ಕೂಡು ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರ ಶೇ 50 : 50 ವೆಚ್ಚವನ್ನು ಹಂಚಿಕೆ ಆಧಾರದ ಮೇಲೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಹಾಗೂ ಸದರಿ ರಸ್ತೆಯ ಕಾಮಗಾರಿಗೆ ಬೇಕಾಗುವ ಭೂಸ್ವಾದೀನ ಹಾಗೂ ನಾಗರೀಕ ಸೌಲಭ್ಯಗಳ ಸ್ಥಳಾಂತರಕ್ಕೆ ಕ್ರಮವಾಗಿ ರೂ. 3.42 ಮತ್ತು 349.10 ಲಕ್ಷಗಳನ್ನು ಮೇಲೆ ಓದಲಾದ (1) ಮತ್ತು (2)ರ ಸರ್ಕಾರಿ ಆದೇಶಗಳಲ್ಲಿ ಬಿಡುಗಡೆ ಮಾಡಲಾಗಿತ್ತು.

ಎಲ್.ಸಿ. ಸಂಖ್ಯೆ 40-41ರಲ್ಲಿ ರಸ್ತೆ ಮೇಲು ಸೇತುವೆಗೆ ಕೂಡು ರಸ್ತೆ ನಿರ್ಮಿಸುವ ಕಾಮಗಾರಿಗೆ ತಗಲುವ ಮೊತ್ತ ರೂ. 14.42 ಕೋಟಿಗಳು, ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು ನಿಗದಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿರುವುದರಿಂದ ರಾಜ್ಯ ಸರ್ಕಾರದ ಪಾಲಿನ ಮೊತ್ತದಲ್ಲಿ ರೂ. 5.00 ಕೋಟಿಯನ್ನು ಬಿಡುಗಡೆ ಮಾಡಬೇಕೆಂದು ಮೇಲೆ ಓದಲಾದ (3)ರ ಪತ್ರದಲ್ಲಿ ಲೋಕೋಪಯೋಗಿ ಇಲಾಖೆಯ (ದಕ್ಷಿಣ) ಮುಖ್ಯ ಇಂಜಿನಿಯರವರು ಕೋರಿದ್ದಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಮೂಅಇ 34 ರಾರಾಹೆ 2009, ಬೆಂಗಳೂರು, ದಿನಾಂಕ 06ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತುಮಕೂರು ನಗರದ ಉಪ್ಪಾರಹಳ್ಳಿ ರೈಲು ನಿಲ್ದಾಣದ ಬಳಿ ಇರುವ ಎಲ್.ಸಿ.ಸಂ. 40-41ರ ರಸ್ತೆ ಮೇಲು ಸೇತುವೆಯ ಕೂಡು ರಸ್ತೆ ನಿರ್ಮಾಣದ ಕಾಮಗಾರಿಗೆ ರಾಜ್ಯ ಸರ್ಕಾರದ ಪಾಲಿನ ಮೊತ್ತದಲ್ಲಿ ರೂ. 3.00 ಕೋಟಿಗಳನ್ನು (ರೂಪಾಯಿ ಮೂರು ಕೋಟಿ ಮಾತ್ರ) 2009-10ನೇ ಸಾಲಿನ ಆಯವ್ಯಯದ

ಲೆಕ್ಕಶೀರ್ಷಿಕೆ "5465-01-190-3-04-(ಯೋಜನೆ)-211 ಬಂಡವಾಳ" ಇದರ ಅಡಿಯಲ್ಲಿ ರಸ್ತೆ ಮೇಲುಸೇತುವೆ/ಕೆಳಸೇತುವೆಗಳ ನಿರ್ಮಾಣಕ್ಕೆ ಒದಗಣೆ ಮಾಡಿರುವ 30.00 ಕೋಟಿಗಳಿಂದ ಬಿಡುಗಡೆ ಮಾಡಲಾಗಿದೆ.

2. ಈ ಮೊತ್ತವನ್ನು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ತುಮಕೂರು ವಿಭಾಗ ತುಮಕೂರು ಇವರು ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿಯವರ ಮೇಲು ರುಜುವಿನೊಂದಿಗೆ ಪೇಯಿಸ್ ರಶೀತಿಯ ಮೂಲಕ ಡ್ರಾ ಮಾಡಿ ಕೂಡು ರಸ್ತೆ ನಿರ್ಮಾಣದ ವೆಚ್ಚ ಭರಿಸತಕ್ಕದ್ದು.

3. ಈ ಆದೇಶವನ್ನು ದಿನಾಂಕ 16-5-2008 ಸಂಖ್ಯೆ FD 1TFP 2008 ಸರ್ಕಾರಿ ಆದೇಶದಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರದತ್ತವಾಗಿರುವ ಆರ್ಥಿಕ ಅಧಿಕಾರವನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎನ್. ಮಂಜುಳಗೀತ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ,

ಪಿಆರ್-392

ನಗರಾಭಿವೃದ್ಧಿ ಸಚಿವಾಲಯ

ವಿಷಯ : ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಭೋಳಮಾನದೊಡ್ಡಿ ರಸ್ತೆಯ ಹತ್ತಿರ ಒಟ್ಟು 13.36 ಎಕರೆ ಪ್ರದೇಶದಲ್ಲಿ ವಸತಿ ಯೋಜನೆ ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : ಆಯುಕ್ತರು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ ರವರ ಪತ್ರ ದಿನಾಂಕ : 24-11-2009.

ಪ್ರಸ್ತಾವನೆ :

ಆಯುಕ್ತರು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ ರವರು ಮೇಲೆ ಓದಲಾದ ಪತ್ರದಲ್ಲಿ ರಾಯಚೂರು ತಾಲ್ಲೂಕು, ರಾಯಚೂರು ಗ್ರಾಮದ ಸ.ನಂ. 935/11, 935/12 ಮತ್ತು 936 ಒಟ್ಟು 13 ಎಕರೆ 36 ಗುಂಟೆ ಜಮೀನನ್ನು ಭೋಳಮಾನದೊಡ್ಡಿ ರಸ್ತೆಯ ಹತ್ತಿರ ವಸತಿ ಯೋಜನೆಯನ್ನು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 35ರನ್ವಯ ಪರಸ್ಪರ ಒಪ್ಪಂದದ ಮೇರೆಗೆ ಭೂ ಮಾಲೀಕರಿಂದ ಖರೀದಿಸುವ ಮೂಲಕ ಭೂ ಸ್ವಾಧೀನಪಡಿಸಿಕೊಂಡು ಕೈಗೊಳ್ಳಲು ಸರ್ಕಾರದ ಪತ್ರ ಸಂಖ್ಯೆ : ನಅಇ 40 ಗುಅಪ್ರಾ 2007, ದಿನಾಂಕ : 17-08-2007 ರಲ್ಲಿ ಅನುಮೋದನೆ ನೀಡಿರುತ್ತದೆಂದು ತಿಳಿಸಿದ್ದಾರೆ. ಅದರಂತೆ ಈ ಜಮೀನಿನಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಒಟ್ಟು ರೂ. 541.22 ಲಕ್ಷಗಳಲ್ಲಿ ಅಭಿವೃದ್ಧಿಪಡಿಸಲು ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಸದರಿ ಯೋಜನೆಯಡಿ, ಒಟ್ಟು 216 ನಿವೇಶನಗಳನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದ್ದು, ಭೂ ಸ್ವಾಧೀನದ ವೆಚ್ಚ, ಸಿವಿಲ್ ಕಾಮಗಾರಿಗಳ ವೆಚ್ಚ, ನೀರು ಸರಬರಾಜು, ಒಳಚರಂಡಿ, ವಿದ್ಯುತ್ ಸರಬರಾಜು ವ್ಯವಸ್ಥೆ, ಇತ್ಯಾದಿ ವೆಚ್ಚಗಳನ್ನೊಳಗೊಂಡ ಅಂದಾಜು ಪಟ್ಟಿಯನ್ನು ಈ ಕೆಳಕಂಡಂತೆ ಸಲ್ಲಿಸಲಾಗಿದೆ.

1. ಭೂ ಸ್ವಾಧೀನದ ಅಂದಾಜು ವೆಚ್ಚ	ರೂ. 110.22 ಲಕ್ಷಗಳು
2. ವಿದ್ಯುತ್ ಸೌಲಭ್ಯಕ್ಕೆ (ಜೆಸ್ಕಾಮ್)	ರೂ. 39.23 ಲಕ್ಷಗಳು
3. ಸಿವಿಲ್ ಕಾಮಗಾರಿಗಳ ವೆಚ್ಚ (ಪಿಡಬ್ಲ್ಯೂಡಿ)	ರೂ. 177.00 ಲಕ್ಷಗಳು
4. ನೀರು ಸರಬರಾಜು ವೆಚ್ಚ (ಕನನೀಸಒಚಮಂ)	ರೂ. 45.45 ಲಕ್ಷಗಳು
5. ಒಳಚರಂಡಿ ವ್ಯವಸ್ಥೆ (ಕನನೀಸಒಚಮಂ)	ರೂ. 70.60 ಲಕ್ಷಗಳು
6. ಟೆಂಡರ್ ಪ್ರೀಮಿಯಂ	ರೂ. 20.00 ಲಕ್ಷಗಳು
7. ಬ್ಯಾಂಕ್ ಸಾಲಕ್ಕೆ ಬಡ್ಡಿ	ರೂ. 20.00 ಲಕ್ಷಗಳು
8. ಕಾರ್ಯಪ್ರಗತಿಯಲ್ಲಿ ಆಗಬಹುದಾದ ಹೆಚ್ಚಳ	ರೂ. 25.00 ಲಕ್ಷಗಳು
9. 10% ಅಭಿವೃದ್ಧಿ ವೆಚ್ಚ	ರೂ. 28.72 ಲಕ್ಷಗಳು
	ರೂ. 541.22 ಲಕ್ಷಗಳು

ಸದರಿ ಯೋಜನೆಯಡಿ ರೂಪಿಸಿರುವ ನಿವೇಶನಗಳ ಮಾರಾಟದಿಂದ ಅಂದಾಜು ಮೊತ್ತ ಒಟ್ಟು ರೂ. 589.68 ಲಕ್ಷಗಳ ಆದಾಯವನ್ನು ಹಾಗೂ ಈ ಪೈಕಿ ಪ್ರಾಧಿಕಾರಕ್ಕೆ ಒಟ್ಟು ರೂ. 48.463 ಲಕ್ಷಗಳ ಲಾಭವನ್ನು ನಿರೀಕ್ಷಿಸಬಹುದೆಂದು ತಿಳಿಸಲಾಗಿದೆ. ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ವಸತಿ ಯೋಜನೆಗಳ ಅಭಿವೃದ್ಧಿಗೆ ಅಗತ್ಯವಿರುವ ಮೊತ್ತವನ್ನು ಪ್ರಗತಿ ಗ್ರಾಮೀಣ ಬ್ಯಾಂಕ್, ತೀನ್‌ಕಂದಿಲ್ ರಾಯಚೂರು ರವರು ಒಟ್ಟು ರೂ. 6.50 ಕೋಟಿಗಳ ಸಾಲವನ್ನು ನೀಡಲು ಮಂಜೂರು ಮಾಡಿದ್ದು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರವು 2009-10ರ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ. 5.00

ಕೋಟಿಗಳ ಮೊತ್ತವನ್ನು ನಿಗಧಿಪಡಿಸಿರುತ್ತದೆ. ಉಳಿದ ಮೊತ್ತವನ್ನು ಅರ್ಜಿಗಳನ್ನು ಆಹ್ವಾನಿಸುವ ಸಮಯದಲ್ಲಿ ಕ್ರೋಢೀಕರಿಸಲು ಉದ್ದೇಶಿಸಿದೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 202 ಗುಅಪ್ರಾ 2009, ಬೆಂಗಳೂರು, ದಿನಾಂಕ 05ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿದ ನಂತರ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರವು ಭೋಳಮಾನದೊಡ್ಡಿ ರಸ್ತೆಯ ಹತ್ತಿರ ರಾಯಚೂರು ಗ್ರಾಮ ಸರ್ವೆ ನಂ. 935/11, 935/12, 936 ರಲ್ಲಿನ ಒಟ್ಟು ವಿಸ್ತೀರ್ಣ 13 ಎಕರೆ 36 ಗುಂಟೆ ಜಮೀನಿನಲ್ಲಿ ರೂ. 541.22 ಲಕ್ಷಗಳ ವೆಚ್ಚದಲ್ಲಿ ವಸತಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ಕಲಂ 18(3) ರನ್ವಯ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

1. Sites should be priced, keeping in view the cost escalation in the future and ensuring that full recover of the cost of the land and development charges is made.
2. Sites so formed should be allotted as per allotment rules.
3. Corner sites and commercial sites should be put to public auction as per rules, in order to get more revenue.
4. Allotment of sites should be made before the development of the layout begins so that allottees can monitor the development of the layout which will avoid cost overrun.
5. ಸದರಿ ಕಾಮಗಾರಿಯನ್ನು ನಿರ್ವಹಿಸುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಮತ್ತು ನಿಯಮ 2000ನ್ನು ಪಾಲಿಸತಕ್ಕದ್ದು.
6. ಕಾಮಗಾರಿಗಳ ಟೆಂಡರ್‌ಗಳನ್ನು ಕರೆಯುವ ಮುನ್ನ ಸರ್ಕಾರದ ಅನುಮೋದನೆ ಪಡೆದು ಆಹ್ವಾನಿಸತಕ್ಕದ್ದು.
7. ಕಾಮಗಾರಿಗಳ ಗುತ್ತಿಗೆ ನೀಡುವ ಮುನ್ನ ನಿಯಮಾವಳಿಯಂತೆ ಸರ್ಕಾರದ ಅನುಮೋದನೆ ಪಡೆದು ಗುತ್ತಿಗೆಯನ್ನು ನೀಡತಕ್ಕದ್ದು.

   ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 851 Exp-9 : 2009, ದಿನಾಂಕ : 11-01-2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಸಿ.ಟಿ. ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,

ಪಿಆರ್-393

ನಗರಾಭಿವೃದ್ಧಿ ಸಚಿವಾಲಯ

ವಿಷಯ : ಮೈಸೂರು ಜಿಲ್ಲೆ, ಟಿ.ನರಸೀಪುರ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಅಂದಾಜು ರೂ. 1052.00 ಲಕ್ಷಗಳಲ್ಲಿ ಕಲ್ಪಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : ವ್ಯ.ನಿ. ಕನನೀಸ ಮತ್ತು ಒಚ ಮಂಡಳಿ, ಬೆಂಗಳೂರು ರವರ ಪತ್ರ ಸಂಖ್ಯೆ : ಕಜಮಂ/ತಾಂತ್ರಿಕ/ಮುಅ/ಆಶ್ರೇ.ಉಮುಅ-1/ಟಿ.ನರಸೀಪುರ/3148/2008-09 ದಿನಾಂಕ : 05-01-2009

ಪ್ರಸ್ತಾವನೆ :

ಟಿ. ನರಸೀಪುರ ಪಟ್ಟಣವು ಮೈಸೂರು ಜಿಲ್ಲೆಯ ತಾಲ್ಲೂಕು ಕೇಂದ್ರವಾಗಿದ್ದು, ಇಲ್ಲಿಯ ಜನಸಂಖ್ಯೆಯ 2001ರ ಜನಗಣತಿಯಂತೆ 22,022 ಇದ್ದು 2036 ರಲ್ಲಿ 45,760 ಜನಸಂಖ್ಯೆ ನಿರೀಕ್ಷಿಸಿ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ. ಟಿ.ನರಸೀಪುರ ಪಟ್ಟಣಕ್ಕೆ ಕಪಿಲ ನದಿಯಿಂದ ಪ್ರಸ್ತುತ 70 ಎಲ್.ಪಿ.ಸಿ.ಡಿ. ನೀರು ಸರಬರಾಜು ಮಾಡುತ್ತಿದ್ದು, ಯೋಜನೆಯು ಪೂರ್ಣಗೊಂಡ ನಂತರ ತಲಾ ದಿನಂ ಪ್ರತಿ 100 ಲೀಟರ್ ನೀರು ಸರಬರಾಜು ಮಾಡಲು ಉದ್ದೇಶಿಸಿದೆ.

ಪ್ರಸ್ತುತ ಈ ಪಟ್ಟಣಕ್ಕೆ ಯಾವುದೇ ಒಳಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಕಲುಷಿತ ನೀರು ರಸ್ತೆ ಬದಿಯ ಚರಂಡಿಗಳ ಮೂಲಕ ಹರಿದು ನೇರವಾಗಿ ನದಿಯನ್ನು ಸೇರುತ್ತಿರುವುದರಿಂದ ಬೇಸಿಗೆಯಲ್ಲಿ ನದಿಯ ನೀರಿನ ಹರಿವು ಕಡಿಮೆಯಾಗಿ ಪರಿಸರವನ್ನು ಕಲುಷಿತಗೊಳಿಸುತ್ತಿದೆ. ಪಟ್ಟಣಕ್ಕೆ ಕುಡಿಯುವ ನೀರನ್ನು ಸದರಿ ನದಿಯಿಂದಲೇ

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೮, ೨೦೧೦ (ಚೈತ್ರ ೧೮, ಶಕ ವರ್ಷ ೧೯೩೨)	ಸಂಚಿಕೆ ೧೪

ಭಾಗ – ೨

ನೇಮಕಗಳು, ಸ್ಥಳ ನೇಮಕಗಳು, ವರ್ಗಾವಣೆಗಳು, ರಜೆ ಮತ್ತು ಅಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆಗಳು

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಹೆಚ್‌ಡಿ 111 ಎಸ್‌ಎಸ್‌ಟಿ 2010, ಬೆಂಗಳೂರು, ದಿನಾಂಕ: 24ನೇ ಜನವರಿ 2010.

ಗುಲಬರ್ಗಾ ನಗರದಲ್ಲಿ ದಿನಾಂಕ: 28–02–2010ರಿಂದ ದಿನಾಂಕ : 01–03–2010ರವರೆಗೆ ಧುಲಂಡಿ ಆಚರಿಸುವುದರಿಂದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ದಂಡ ಪ್ರಕ್ರಿಯಾ ಸಂಹಿತೆ 1973 (ಕೇಂದ್ರ ಕಾಯಿದೆ ಸಂಖ್ಯೆ: 2–1974)ರ ಕಲಂ 21ರಲ್ಲಿನ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡ ಪಟ್ಟಿಯ ಕಲಂ (2)ರಲ್ಲಿ ಸೂಚಿಸಿರುವ ಅಧಿಕಾರಿಗಳನ್ನು ಕಾರ್ಯನಿರ್ವಾಹಕ ದಂಡಾಧಿಕಾರಿ ಅಂದರೆ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿಗಳನ್ನಾಗಿ ಕಲಂ (3)ರಲ್ಲಿ ನಮೂದಿಸಿರುವ ಸ್ಥಳಗಳಿಗೆ, ನೇಮಿಸಿ, ಸದರಿ ಸಂಹಿತೆಯಲ್ಲಿ ನೀಡಬಹುದಾದ ಎಲ್ಲಾ ಅಧಿಕಾಡಿಗಳನ್ನು ನೀಡಲಾಗಿದೆ.

ಕ್ರ.ಸಂ	ಅಧಿಕಾರಿಗಳ ಹೆಸರು ಮತ್ತು ಹುದ್ದೆ	ಕ್ಷೇತ್ರ ವ್ಯಾಪ್ತಿ
01	ಶ್ರೀ ಮನೋಜ್ ಜೈನ್, ಆಯುಕ್ತರು, ಮಹಾನಗರ ಪಾಲಿಕೆ ಗುಲಬರ್ಗಾ	ರೋಜಾ ಪೊಲೀಸ್ ಠಾಣೆ, ಗುಲಬರ್ಗಾ
02	ಶ್ರೀ ಆರ್.ಎಸ್. ಯಳಮಲ್ಲೆ, ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಗುಲಬರ್ಗಾ	ನ್ಯೂ ರಾಘವೇಂದ್ರ ಕಾಲೋನಿ, ಪೊಲೀಸ್ ಠಾಣೆ, ಗುಲಬರ್ಗಾ
03	ಶ್ರೀ ಜೆ.ಎಂ. ಚೌದರಿ, ಉಪ ಯೋಜನಾಧಿಕಾರಿಗಳು, KUIDFC, ಗುಲಬರ್ಗಾ	ಎಮ್.ಬಿ. ನಗರ ಪೊಲೀಸ್ ಠಾಣೆ, ಗುಲಬರ್ಗಾ
04	ಶ್ರೀ ರವಿ ಕಿರಣ ವಂಟಿ, ವಿಶೇಷ ಭೂಸ್ವಾಧೀನಾಧಿಕಾರಿಗಳು (ಸಣ್ಣ ನೀರಾವರಿ), ಗುಲಬರ್ಗಾ	ಚೌಕ್ ಪೊಲೀಸ್ ಠಾಣೆ, ಅಗುಲಬರ್ಗಾ
05	ಶ್ರೀ ವಸಂತರಾವ್ ಕುಲಕರ್ಣಿ, ಯೋಜನಾ ನಿರ್ದೇಶಕರು, DUDC, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗುಲಬರ್ಗಾ	ಸ್ಟೇಷನ್ ಬಜಾರ್ ಪೊಲೀಸ್ ಠಾಣೆ, ಗುಲಬರ್ಗಾ.
06	ಡಾ॥ ಶರಣಪ್ಪಾ ನಿಲಂಗೆ, ಉಪ ನಿರ್ದೇಶಕರು, ಪಶುಪಾಲನೆ ಮತ್ತು ಪಶುಸಂಗೋಪನೆ ಇಲಾಖೆ, ಗುಲಬರ್ಗಾ	ಗುಲಬರ್ಗಾ, ವಿಶ್ವವಿದ್ಯಾಲಯ ಪೊಲೀಸ್ ಠಾಣೆ

II -F1 -B/B

07	ಶ್ರೀ ಬಸವರಾಜ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗುಲಬರ್ಗಾ	ಅಶೋಕ ನಗರ ಪೊಲೀಸ್ ಠಾಣೆ, ಗುಲಬರ್ಗಾ
08	ಶ್ರೀ ಮಹ್ಮದ್ ಯುಸಫ್, ಉಪ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್, ಗುಲಬರ್ಗಾ	ಬ್ರಹ್ಮಪೂರ ಪೊಲೀಸ್ ಠಾಣೆ, ಗುಲಬರ್ಗಾ
09	ಶ್ರೀ ಅಮರೇಶ ನಾಯಕ್, ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ., ಜಿಲ್ಲಾ ಪಂಚಾಯತ್, ಗುಲಬರ್ಗಾ	ಗುಲಬರ್ಗಾ ಗ್ರಾಮಾಂತರ ಪೊಲೀಸ್ ಠಾಣೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ.ಸಿ. ಸಿದ್ದಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ
(ಕಾನೂನು ಮತ್ತು ಸುವ್ಯವಸ್ಥೆ, ಕಾಫಿಪೋಸಾ ಮತ್ತು ಅಭಿಯೋಗಗಳು)

ಪಿ.ಆರ್. 437

ವಿಧಾನ ಪರಿಷತ್ತಿನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕವಿಪ/ಆ-1/ಇಬಸ/159/2010, ಬೆಂಗಳೂರು, ದಿನಾಂಕ: 18ನೇ ಮಾರ್ಚ್ 2010.

2010ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಾವಳಿಗಳ ನಿಯಮ 6(ii)ರ ಪ್ರಕಾರ ಮಾನ್ಯ ಸಭಾಪತಿಯವರಿಗೆ ಪ್ರದತ್ತವಾಗಿರುವ ಅಧಿಕಾರದ ರೀತ್ಯಾ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಅಧೀನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಶ್ರೀನಿವಾಸ ಗಾಣಿಗ, ಇವರನ್ನು (ಶ್ರೀ ಶ್ರೀನಿವಾಸ, ಉಪಕಾರ್ಯದರ್ಶಿ ಇವರು ಜಂಟಿ ಕಾರ್ಯದರ್ಶಿಯಾಗಿ ಮುಂಬಡ್ತಿ ಹೊಂದಿರುವುದರಿಂದ ತೆರವಾದ ಹುದ್ದೆಗೆ) ವೇತನ ಶ್ರೇಣಿ 20025-525-22650-600-26250-675-28275ರಲ್ಲಿ ಉಪ ಕಾರ್ಯದರ್ಶಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಬಡ್ತಿ ನೀಡಿ ನೇಮಕ ಮಾಡಲಾಗಿದೆ

ಮಾನ್ಯ ಸಭಾಪತಿಯವರ ಆದೇಶಾನುಸಾರ,
ವಿ. ಶ್ರೀಶ್
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಪಿ.ಆರ್. 440

ಅಧಿಸೂಚನೆ

ಸಂಖ್ಯೆ: ಕವಿಪ/ಆ-1/ಇಬಸ/159/2010, ಬೆಂಗಳೂರು, ದಿನಾಂಕ: 18ನೇ ಮಾರ್ಚ್ 2010.

2010ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಾಳಿವಗಳ ನಿಯಮ 6(ii)ರ ಪ್ರಕಾರ ಮಾನ್ಯ ಸಭಾಪತಿಯವರಿಗೆ ಪ್ರದತ್ತವಾಗಿರುವ ಅಧಿಕಾರದ ರೀತ್ಯಾ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಅಧೀನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಕೆ.ಬಿ. ಓಂಪ್ರಕಾಶ್, ಇವರನ್ನು (ಶ್ರೀ ಬಿ.ಎಸ್. ದೇವರಾಜ್, ಉಪಕಾರ್ಯದರ್ಶಿ ಇವರ ನಿವೃತ್ತಿಯಿಂದ ತೆರವಾದ ಹುದ್ದೆಗೆ) ವೇತನ ಶ್ರೇಣಿ 20025-525-22650-600-26250-675-28275ರಲ್ಲಿ ಉಪ ಕಾರ್ಯದರ್ಶಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಬಡ್ತಿ ನೀಡಿ ನೇಮಕ ಮಾಡಲಾಗಿದೆ

ಮಾನ್ಯ ಸಭಾಪತಿಯವರ ಆದೇಶಾನುಸಾರ,
ವಿ. ಶ್ರೀಶ್
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಪಿ.ಆರ್. 441

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಹೆಚ್‌ಡಿ 76 ಪಿಆರ್‌ಇ 2009, ಬೆಂಗಳೂರು, ದಿನಾಂಕ: 15ನೇ ಮಾರ್ಚ್ 2010.

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿರುವ ಮುಖ್ಯ ಅಧೀಕ್ಷಕ ಹುದ್ದೆಯನ್ನು ಆಡಳಿತದ ಅವಶ್ಯಕತೆ ಮೇರೆಗೆ ಬೆಂಗಳೂರಿನಲ್ಲಿರುವ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಹಾಗೂ ಕಾರಗೃಹಗಳ ಮಹಾನಿರೀಕ್ಷಕರವರ ಕಛೇರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳಾಂತರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ. ಕೃಷ್ಣಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಸೆರೆಮನೆ ಮತ್ತು ಸಿನಿಮಾ)

ಪಿ.ಆರ್. 442

HIGH COURT OF KARNATAKA

NOTIFICATION

No. LCA.I/220/96, Bangalore, Dated 8th March, 2010

The Government have pleased to accord sanction for creation of 4334 posts in different cadres to Subordinate Judiciary in the State as per G.O. No.LAW 137 LAC 2005 dated 25-3-2008, with a condition to fill up the said posts in phased manner in five instalments (i.e., 1/5th of the posts in each year). Subsequently, the Government accorded permission to fill up first instalment of 800 newly created posts vide Notification No. LAW 144 LAC 2009 dated 6-8-2009 & to fill up second instalment of 800 posts vide Notification No. LAW 144 LAC 2009 dated 2-11-2009.

The aforesaid 1600 posts are hereby distributed to various Courts of Subordinate Judiciary in the State District wise, as per Schedule-I to XXX.

Therefore, the Prl. City Civil & Sessions Judge, Bangalore City, the Chief Judge, Court of Small Causes, Bangalore and all the Prl. District & Sessions Judges in the State, shall take further necessary steps to fill up the posts indicated in the Schedule pertaining to their District, as per the existing Rules, under intimation to this office.

By Order of Hon'ble the Chief Justice

R.B. BUDIHAL
Registrar General

PR. 443

NOTIFICATION

No. LCA. II-354/2009, Bangalore, Dated 4th March, 2010

In exercise of the powers conferred uner Article 235 of the Constitution of India read with Rule 2 of the Karnataka Sub-ordinate Courts (Ministerial and Other Posts) (Recruitment) Rules, 1982, the High Court of Karnataka is pleased to promote the following Sheristedars to officiate as Chief Administrative Officers in the Judicial Department Purely on temporary basis in the Pay Scale of Rs. 14050-350-14400-400-16800-450-19500-525-22650-600-25050 in the existing vacancies and posted them to the vacancies shown against their names

Sl.No.	Name and Sheristedar and Place of working	District to which posted as CAO
1	Smt. B. Asha Latha, Prl. Civil Judge (Sr. Dn.) & CJM. Court, Udupi.	**Koppal** (w.e.f. the date she assumes charge)
2.	Sri M. Narayana Pujari, Civil Judge (Jr. Dn.) & JMFC. Court, Belthangadi, D.K., Mangalore	**Yadgir** (Directed to assume charge after the inauguration of the District & Sessions Court, Yadgir)

By Order of the High Court,

A.P. MURARI
Registrar (Vigilance)

PR. 444

CITY CIVIL COURT, BANGALORE

NOTIFICATION

No. ADM-I (E) 352/2010, Bangalore, Dated 18th March, 2010

Smt. T. Narendra, Asst. Registrar of City Civil Court, Bangalore is granted 14 days earned leave from 29-1-2010 to 11-2-2010 (bdi), on medical ground, with permission to avail general holidays from 12-2-2010 to 14-2-2010.

Sri. R. Gurumurthy, Asst. Registrar, is placed in additional charge of Smt. T. Narendra, Asst. Registrar, City Civil Court, Bangalore, during the above leave period.

Smt. T. Narendra, Asst. Registrar, City Civil Court, Bangalore would have continued in the same post, but for proceedings on leave.

By Order of the Prl. City Civil & Sessions Judge,

REGISTRAR
City civil Court, Bangalore

PR. 445

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆರ್.ಡಿ. 08 ಎಟಿಎಸ್ 2010, ಬೆಂಗಳೂರು, ದಿನಾಂಕ: 26ನೇ ಫೆಬ್ರವರಿ 2010.

ಶ್ರೀ ಎಸ್.ಎಂ. ಶಿವಕುಮಾರ್, ಪುರಸಭಾ ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಛೇರಿ, ಚಿತ್ರದುರ್ಗ ಜಿಲ್ಲೆ ಇವರನ್ನು ಸಾರ್ವಜನಿಕ ಹಾಗೂ ಆಡಳಿತ ಹಿತದೃಷ್ಟಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ತಹಶೀಲ್ದಾರ್, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇಲ್ಲಿನ ಖಾಲಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಬಿ. ಸಸಾಲಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಸೇವೆಗಳು-3)

ಪಿ.ಆರ್. 446

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಅರ್.ಡಿ. : 21 ಎಟಿಎಸ್ : 2010, ಬೆಂಗಳೂರು, ದಿನಾಂಕ: 4ನೇ ಮಾರ್ಚ್ 2010.

ಕಂದಾಯ ಇಲಾಖೆಯ ತಹಶೀಲ್ದಾರ್ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ತಹಶೀಲ್ದಾರರುಗಳನ್ನು ಅವರುಗಳ ಹೆಸರುಗಳ ಮುಂದೆ ಸೂಚಿಸಿರುವ ಸ್ಥಳಗಳಿಗೆ ಸಾರ್ವಜನಿಕ ಹಾಗೂ ಆಡಳಿತ ಹಿತದೃಷ್ಟಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವರ್ಗಾಯಿಸಿ ನೇಮಿಸಲಾಗಿದೆ.

ಕ್ರ.ಸಂ	ತಹಶೀಲ್ದಾರರ ಹೆಸರು ಹಾಗೂ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳ (ಶ್ರೀ/ಶ್ರೀಮತಿ)	ವರ್ಗಾಯಿಸಿದ ಸ್ಥಳ
1	ಲೋಕೇಶ್ ಪಿ.ಎನ್, ತಹಶೀಲ್ದಾರ್, ಕೊಪ್ಪಳ ತಾಲ್ಲೂಕು, ಕೊಪ್ಪಳ ಜಿಲ್ಲೆ	ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ-ಖಾಲಿ ಹುದ್ದೆ
2	ಎಚ್.ಕೆ. ಗೀತಾಕೃಷ್ಣ, ತಹಶೀಲ್ದಾರ್, ಮೈಸೂರು ತಾಲ್ಲೂಕು	ವಿಶೇಷ ತಹಶೀಲ್ದಾರ್, ಕೆ.ಎಸ್.ಎಫ್.ಸಿ, ಮೈಸೂರು ಜಿಲ್ಲೆ-ಖಾಲಿ ಹುದ್ದೆ
3	ಸಿ. ನಾಗರಾಜ್, ವಿಶೇಷ ತಹಶೀಲ್ದಾರ್, ಕೆ.ಎಸ್.ಎಫ್.ಸಿ, ಬೆಂಗಳೂರು	ತಹಶೀಲ್ದಾರ್, ಮೈಸೂರು ತಾಲ್ಲೂಕು-ಶ್ರೀ ಎಚ್.ಕೆ. ಗೀತಾಕೃಷ್ಣ, ತಹಶೀಲ್ದಾರ್ ಇವರ ವರ್ಗಾವಣೆಯಿಂದ ತೆರವಾದ ಸ್ಥಳಕ್ಕೆ

ಮೇಲ್ಕಂಡ ತಹಶೀಲ್ದಾರರುಗಳನ್ನು ವರ್ಗಾವಣೆ ಆಗಿರುವ ಸ್ಥಳಕ್ಕೆ ಹಾಜರಾಗುವಂತೆ ಸೂಚಿಸಿ ತಕ್ಷಣದಿಂದ ಬಿಡುಗಡೆಗೊಳಿಸುವಂತೆ ನಿಯಂತ್ರಣಾಧಿಕಾರಿಗಳಿಗೆ ಸೂಚಿಸಿದೆ. ಬಿಡುಗಡೆಗೊಂಡ ತಹಶೀಲ್ದಾರರುಗಳು ನೇಮಕಾತಿ ಮಾಡಿದ ಸ್ಥಳಗಳಲ್ಲಿ ಕೂಡಲೇ ಕರ್ತವ್ಯಕ್ಕೆ ಹಾಜರಾಗಿ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್.ಬಿ. ಸಸಾಲಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಸೇವೆಗಳು-3)

ಪಿ.ಆರ್. 447

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 12 ಸೇಇಯು 2010, ಬೆಂಗಳೂರು, ದಿನಾಂಕ: 15ನೇ ಮಾರ್ಚ್ 2010.

ಶ್ರೀ ಸೋಮಲ ನಾಯಕ್ ನಿರ್ದೇಶಕರು, ಖಜಾನೆ ಇಲಾಖೆ ಪ್ರಸ್ತುತ ವಿಶೇಷಾಧಿಕಾರಿ, ವಿತ್ತೀಯ ನೀತಿ ವಿಶ್ಲೇಷಣಾ ಕೋಶ (FPAC), ಆರ್ಥಿಕ ಇಲಾಖೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಈ ಹುದ್ದೆಗೆ ವರ್ಗಾಯಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ. (ಸೇವೆಗಳು-3)

ಪಿ.ಆರ್. 448

PERSONNEL AND ADMINISTRATIVE REFORMS SECRETARIAT

NOTIFICATION

No. DPAR 81 SAS 2010, Bangalore, Dated 12th March, 2010

Sri N.S. Channappa Gowda, IAS (KN 99), Deputy Commissioner, U.K. District is transferred with immediate effect and posted until further orders as **Deputy Commissioner, Chickmagalur District** in the existing vacancy.

Sri P. C. Jaffer, IAS (KN 2003), Director, PPUM and Director NREGS, Rural Development and Panchayat Raj Department, Bangalore is transferred with immediate effect and posted until further orders as **Deputy Commissioner, Mandya District** in the existing vacancy.

Sri N. Prasanna Kumar, (Deputy Secretary, Selection Grade, RD & PR Services), Chief executive Officer, Zilla Panchayat, Hassan is transferred with immediate effect and posted until further orders as **Director, PPUM and Director NREGS, Rural Development and Panchayat Raj Department, Bangalore** vice Sri P.C. Jaffer, IAS transferred.

By Order and in the name of the Governor of Karnataka
K.G. ANANTHA
Under Secretary to Government
Department of Personnel and Administrative Reforms (Services-I)

PR. 449

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 644 ಸಅಸೇ 2009, ಬೆಂಗಳೂರು, ದಿನಾಂಕ: 15ನೇ ಮಾರ್ಚ್ 2010.

ಶ್ರೀಮತಿ ಆರ್. ಎಂ. ಚಂದ್ರಮ್ಮ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 285(1)(ಎ)ರ ಅನ್ವಯ ದಿನಾಂಕ 31-03-2010ರ ಅಪರಾಹ್ನದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಸ್ವ-ಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎಂ. ಎಸ್. ಶಿವರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 450

PERSONNEL AND ADMINISTRATIVE REFORMS SECRETARIAT

NOTIFICATION

No. DPAR 120 SAS 2010, Bangalore, Dated 20th March, 2010

In partial modification of Government Notification No. DPAR 511 SAS 2009, dated 1-1-2010, **Smt. Thulasi Maddineni, IAS (KN 2005)**, is promoted to officiate in the Senior Time Scale of IAS carrying the pay scale of Rs. 15600-39100 plus Grade Pay of Rs. 6600/- with effect from **18-06-2009** instead of **1-1-2009** as mentioned in the said Notification.

Except to this extent the notification No. DPAR 511 SAS 2009, dated 1-1-2010 shall remain unchanged.

By Order and in the name of the Governor of Karnataka
K.G. ANANTHA
Under Secretary to Government
Department of Personnel and Administrative Reforms (Services-I)

PR. 451

NOTIFICATION

No. DPAR 338 SAS 2008, Bangalore, Dated 18th March, 2010

Smt. Uma Mahadevan, IAS (KN 92), Member Secretary, Tata Institute of Fundamental Research Endowment Fund, Mumbai is accorded proforma promotion to the Supertime Scale of IAS carrying the pay scale of Rs. 37400-67000 plus Grade Pay of Rs. 10,000/- with effect from 16-04-2008, in terms of Government of India Letter No. 11030/17/93-AIS(II), dated 11-4-2001.

By Order and in the name of the Governor of Karnataka
K.G. ANANTHA
Under Secretary to Government
Department of Personnel and Administrative Reforms (Services-I)

PR. 452

NOTIFICATION

No. DPAR 43 SPS 2010, Bangalore, Dated 11th March, 2010

Shri Padam Kumar Garg, IPS (KN 86), Inspector General of Police & Director (Projects), BMTC, Bangalore is placed in additional charge of the post of Special Officer for Metro Security, Bangalore Metro Rail Corporation Limited, Bangalore, with immediate effect and until further orders.

By Order and in the name of the Governor of Karnataka
ASHOK P. ATRE
Under Secretary to Government
Department of Personnel and Administrative Reforms (Services-IV)

PR. 453

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಅಪಜೀ 25 ಎಫ್‌ಪಿಸಿ 2010, ಬೆಂಗಳೂರು, ದಿನಾಂಕ: 10ನೇ ಮಾರ್ಚ್ 2010.

ಶ್ರೀ ಎಸ್. ನಾಗರಾಜ, ಭಾ.ಅ.ಸೇ., ಹಿಂದಿನ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೆಂಗಳೂರು, ಇವರು ವಯೋನಿವೃತ್ತಿ ಹೊಂದಿದ್ದು, ಸದರಿಯವರ ಜಾಗದಲ್ಲಿ ಶ್ರೀ ಇಂದು ಬಿ. ಶ್ರೀವಾಸ್ತವ, ಭಾ.ಅ.ಸೇ., ಇವರು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯಾಗಿ ನೇಮಕವಾಗಿರುವುದರಿಂದ ಸದರಿಯವರನ್ನು ಕರ್ನಾಟಕ ಗೇರು ಅಭಿವೃದ್ಧಿ ನಿಗಮ, ಮಂಗಳೂರು ಇದರ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 23(i)ರಲ್ಲಿ ಪ್ರದತ್ತವಾದ ಅಧಿಕಾರದಡಿ ಕರ್ನಾಟಕ ಗೇರು ಅಭಿವೃದ್ಧಿ ನಿಗಮ, ಮಂಗಳೂರು, ಇದರ ಆಡಳಿತ ಮಂಡಳಿಯ ನಿರ್ದೇಶಕರನ್ನಾಗಿ ಈ ತಕ್ಷಣದಿಂದಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಪಿ.ಆರ್. ಕಲಾವತಿ
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

ಪಿ.ಆರ್. 454

ಅಧಿಸೂಚನೆ

ಸಂಖ್ಯೆ: ಅಪಜೀ 219 ಅಪಸೇ 2007, ಬೆಂಗಳೂರು, ದಿನಾಂಕ: 17ನೇ ಫೆಬ್ರವರಿ 2010.

ಶ್ರೀ ಆರ್. ಎಸ್. ಕೊಳಗಿ, ನಿವೃತ್ತ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಸ್ವತಂತ್ರ ಪ್ರಭಾರ) ಇವರಿಗೆ ಜೇಷ್ಠತೆಯಲ್ಲಿ ಕಿರಿಯರಾದ ಶ್ರೀ ಎಂ.ಎಲ್. ಶಿವಪ್ಪಗೌಡ ಇವರಿಗೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿದ ದಿನಾಂಕ 28-05-1994ರಿಂದ ಅನ್ವಯಿಸಿ, ಪೂರ್ವಾನ್ವಯವಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವೃಂದಕ್ಕೆ ಕರ್ನಾಟಕ ನಾಗರೀಕ ಸೇವಾ (ಬಡ್ತಿ, ವೇತನ ಮತ್ತು ಪಿಂಚಣಿ) ನಿಯಮಗಳು 1978ರ ನಿಯಮ 2(1)(ಎ) ಅಡಿಯಲ್ಲಿ ಸ್ಥಾನಾಪನ್ನ ಬಡ್ತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ವಡಗಾವೆ ಬಸವರಾಜ್
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ (ಸೇವೆಗಳು)

ಪಿ.ಆರ್. 455

FOREST, ECOLOGY AND ENVIRONMENT SECRETARIAT

NOTIFICATION

No. FEE 44 FWL 2010, Bangalore, Dated 17th March, 2010

Government in its notification No. DPAR 123 SFP 2009, dated 04-02-2010 has promoted and posted Sri Brij Kishore Singh, IFS (KN-76) as Principal Chief Conservator of Forests (Wildlife) carrying the HAG + Scale of Rs. 75,500-80,000 (Grade pay-Nil) with immediate effect and until further orders in the revived Cadre post.

Now, the Government under section 4 of the Wildlife (Protection) Act, 1972 hereby appoints Sri Brij Kishore Singh, IFS., as Chief Wildlife Warden of Karnataka with effect from the date he assumed charge of the post of Principal Chief Conservator of Forests (Wildlife).

By Order and in the name of the Governor of Karnataka
P. R. KALAVATHI
Under Secretary to Government
Forest, Ecology and Environment Department

PR. 456

ಇಂಧನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಎನ್ 96 ಇಬಿಎಸ್ 2008, ಬೆಂಗಳೂರು, ದಿನಾಂಕ: 22ನೇ ಮಾರ್ಚ್ 2010.

ಶ್ರೀ ಸುದೇಶ್ ಮಾರ್ಟಿಸ್, ಉಪ ವಿದ್ಯುತ್ ಪರಿವೀಕ್ಷಕರು, (ವೇತನ ಶ್ರೇಣಿ ರೂ. 14050-350-14400-400-16800-450-19500-525-22650-600-25050) ಮಂಗಳೂರು, ವಿದ್ಯುತ್ ಪರಿವೀಕ್ಷಣಾ ಇಲಾಖೆ, ಇವರಿಗೆ ವಿದ್ಯುತ್ ಪರಿವೀಕ್ಷಕರ ಹುದ್ದೆಗೆ (ವೇತನ ಶ್ರೇಣಿ ರೂ. 18150-450-19500-525-22650-600-26250-675-26925) ಸ್ಥಾನಪನ್ನ ಪದೋನ್ನತಿ ನೀಡಿ ಹಾಲಿ ಉಡುಪಿ ವಿಭಾಗದಲ್ಲಿ ಖಾಲಿ ಇರುವ ವಿದ್ಯುತ್ ಪರಿವೀಕ್ಷಕರ ಹುದ್ದೆಗೆ ತತ್‌ಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸುಜಾತಮ್ಮ
ಪೀಠಾಧಿಕಾರಿ,
ಇಂಧನ ಇಲಾಖೆ.

ಪಿ.ಆರ್. 457

KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೮, ೨೦೧೦ (ಚೈತ್ರ ೧೮, ಶಕ ವರ್ಷ ೧೯೩೨)	ಸಂಚಿಕೆ ೧೪

ಭಾಗ-೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಕಾರ್ಮಿಕ ಅಧಿಕಾರಿ ಹಾಗೂ ಕಾರ್ಮಿಕ ನಷ್ಟ ಪರಿಹಾರ ಆಯುಕ್ತರು, ಉಡುಪಿ ಜಿಲ್ಲೆ, ಉಡುಪಿ ಇವರ ನ್ಯಾಯಾಲಯದಲ್ಲಿ

ಸಂಖ್ಯೆ: ಡಬ್ಲ್ಯೂ.ಸಿ.ಎ./ಸಿ.ಆರ್-07/ಎಫ್.ಸಿ.2009, ದಿನಾಂಕ:17ನೇ ಮಾರ್ಚ್, 2010

ಅರ್ಜಿದಾರರು

1) ಶ್ರೀಮತಿ ಸುಜಾತ ಜಿ. ಶೆಟ್ಟಿ (43 ವರ್ಷ)
W/o ಶ್ರೀ ಯು. ಗಣೇಶ್‌ಶೆಟ್ಟಿ.
2) ಸೋನಮ್ ಜಿ. ಶೆಟ್ಟಿ (16 ವರ್ಷ)
D/o ಶ್ರೀ ಯು. ಗಣೇಶ್ ಶೆಟ್ಟಿ.
3) ಗೌರವ್ (13 ವರ್ಷ)
S/o ಶ್ರೀ ಯು. ಗಣೇಶ್ ಶೆಟ್ಟಿ,
ವಾಸ: ಕಪ್ಪೆಟ್ಟು ಹೌಸ್, ರಾ.ಹೆ.17, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.

ಪ್ರತಿವಾದಿಗಳು

1) ಶ್ರೀ ಸಂಜಯ್ ನಾಯಕ್ (33 ವರ್ಷ)
ಬಿನ್ ಲೇಟ್ ರಮಾನಂದ ನಾಯಕ್,
ವಾಸ: ರಿಗಲ್ ಹೌಸ್, ಈಶ್ವರ ನಗರ, ಹೆರ್ಗಾ ಗ್ರಾಮ, ಉಡುಪಿ ತಾಲ್ಲೂಕು.

ಅಧಿಸೂಚನೆ

ಅರ್ಜಿದಾರರಾದ ಶ್ರೀಮತಿ ಸುಜಾತ ಜಿ. ಶೆಟ್ಟಿ ಇವರು ತಮ್ಮ ಗಂಡನಾದ ಯು. ಗಣೇಶ್ ಶೆಟ್ಟಿ ಇವರು 1ನೇ ಪ್ರತಿವಾದಿಯವರಲ್ಲಿ ಕೆಲಸಗಾರರಾಗಿದ್ದು, ಕೆಲಸದಲ್ಲಿ ನಿರತರಾಗಿದ್ದಾಗ ದಿನಾಂಕ:15.05.2009ರಂದು ಅಪಘಾತಕ್ಕೀಡಾಗಿ ಮೃತರಾದರೆಂದು ಹೇಳಿ ಆಶ್ರಿತರಾದ ತಮಗೆ ಪ್ರತಿವಾದಿಯವರಿಂದ ಪರಿಹಾರವನ್ನು ಕೊಡಿಸಿ ಕೊಡಬೇಕೆಂದು ಈ ನ್ಯಾಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಆದ್ದರಿಂದ ಈ ವಿಷಯದಲ್ಲಿ ಈ ಅರ್ಜಿದಾರರಲ್ಲದೆ ಬೇರೆ ಯಾರಾದರೂ ಅರ್ಜಿದಾರರಿದ್ದು, ಅವರ ಅರ್ಜಿ ಅಥವಾ ತಕರಾರು ಏನಾದರೂ ಇದ್ದರೆ ಮತ್ತು ಈ ಅರ್ಜಿಗೆ ಸಂಬಂಧಿಸಿ ಇನ್ನಿತರ ಯಾವುದೇ ರೀತಿಯ ತಕರಾರು ಇದ್ದರೆ ಈ ಅಧಿಸೂಚನೆ, ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಣೆಯಾದಲ್ಲಿನಿಂದ 30 ದಿವಸಗಳ ಒಳಗೆ ಈ ನ್ಯಾಯಾಲಯಕ್ಕೆ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ. ಈ ನಿಗದಿತ ಸಮಯದಲ್ಲಿ ಈ ನ್ಯಾಯಾಲಯವು ಯಾವ ಕ್ಲೈಮ್ ಅರ್ಜಿ/ ತಕರಾರು ಅರ್ಜಿ ಸ್ವೀಕರಿಸದಿದ್ದಲ್ಲಿ ಈ ನ್ಯಾಯಾಲಯವು ಮುಂದಿನ ಕ್ರಮವನ್ನು ಜರುಗಿಸುವುದೆಂದು ತಿಳಿಸಲಾಗಿದೆ.

ಎಂ. ಆನಂದಮೂರ್ತಿ
ಕಾರ್ಮಿಕ ಅಧಿಕಾರಿ ಮತ್ತು ಕಾರ್ಮಿಕ ನಷ್ಟ
ಪರಿಹಾರ ಆಯುಕ್ತರು, ಉಡುಪಿ ಜಿಲ್ಲೆ, ಉಡುಪಿ.

ಪಿ.ಆರ್-432

III -F1-(0)

ಆರ್ಥಿಕ ಇಲಾಖೆ

ಅಧಿಕೃತ ಜ್ಞಾಪನ

ಸಂಖ್ಯೆ: ಆಇ 39 ಸ.ಉ.ಲಾ 2008, ಬೆಂಗಳೂರು, ದಿನಾಂಕ:11ನೇ ಮಾರ್ಚ್, 2010

ವಿಷಯ: ದಿನಾಂಕ:01.01.2008ರಲ್ಲಿದ್ದಂತೆ ಬಂಡವಾಳ ಹೂಡಿಕೆ ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯಲ್ಲಿನ ಉಪ ನಿರ್ದೇಶಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ ಪ್ರಚುರಪಡಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:51 ಸಉಲಾ 2006, ದಿನಾಂಕ:13.09.2006.

2) ಬಂಡವಾಳ ಹೂಡಿಕೆ ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯಲಾಟರಿ ಇಲಾಖೆಯ ನಿರ್ದೇಶಕರ ಪತ್ರಸಂಖ್ಯೆ: ಸಉಸಿ(3)13/2001–02, ದಿನಾಂಕ:20.01.2007 ಮತ್ತು 22.02.2008.

3) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಆಇ 39 ಸಉಲಾ 2008, ದಿನಾಂಕ:09.04.2008.

4) ಬಂಡವಾಳ ಹೂಡಿಕೆ ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯ ನಿರ್ದೇಶಕರ ಪತ್ರ ಸಂಖ್ಯೆ: ಪತ್ರಸಂಖ್ಯೆ:ಸಉಸಿ(3)13/2001–02, ದಿನಾಂಕ:29.05.2008.

ಬಂಡವಾಳ ಹೂಡಿಕೆ, ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯ ಉಪ ನಿರ್ದೇಶಕರು ವೃಂದದ ದಿನಾಂಕ:01.01.2006ರಲ್ಲಿದ್ದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಮೇಲೆ ಉಲ್ಲೇಖ (1)ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ ಪ್ರಕಟಿಸಲಾಗಿದೆ. ಮೇಲೆ ಉಲ್ಲೇಖ (2)ರ ಪತ್ರದಲ್ಲಿ ಬಂಡವಾಳ ಹೂಡಿಕೆ ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯ ನಿರ್ದೇಶಕರು ಇಲಾಖೆಯ ಉಪ ನಿರ್ದೇಶಕರು ವೃಂದದ ದಿನಾಂಕ:01.01.2008ರಲ್ಲಿದ್ದಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಉಲ್ಲೇಖ (3)ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಬಂಡವಾಳ ಹೂಡಿಕೆ, ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯ ಉಪ ನಿರ್ದೇಶಕರು ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ್ದು, ಈ ಕುರಿತು ಆಕ್ಷೇಪಣೆಗಳೇನಾದರೂ ಇದ್ದಲ್ಲಿ 30 ದಿನಗಳ ಒಳಗೆ ಸಲ್ಲಿಸಲು ತಿಳಿಸಲಾಗಿದೆ.

ಮೇಲೆ (4)ರಲ್ಲಿ ಓದಲಾದ ದಿನಾಂಕ:29.05.2008ರ ನಿರ್ದೇಶಕರ ಪತ್ರದಲ್ಲಿ ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಶ್ರೀ ಎ.ಆರ್ ಸತ್ಯನಾರಾಯಣ, ಉಪ ನಿರ್ದೇಶಕರು (ಲಾಟರಿ), ಇವರು ಆಕ್ಷೇಪಣೆಯನ್ನು ಸಲ್ಲಿಸಿ ಅವರ ಹೆಸರಿನ ಮುಂದೆ ಅರ್ಹತಾ ದಿನಾಂಕದ ಕಾಲಂನಲ್ಲಿ ದಿನಾಂಕ:02.08.2001 ಎಂದು ನಮೂದಿಸಬೇಕೆಂದು ಕೋರಿರುವ ಪತ್ರವನ್ನು ಲಗತ್ತಿಸಿ ಕಳುಹಿಸಿಕೊಡಲಾಗಿದೆ. ಶ್ರೀ ಸತ್ಯನಾರಾಯಣ, ಉಪ ನಿರ್ದೇಶಕರು (ಲಾಟರಿ), ಇವರ ಪೂರ್ವಾನ್ವಯ ಬಡ್ತಿ ನೀಡುವ ಪ್ರಸ್ತಾವನೆಯನ್ನು ಕಡತ ಸಂಖ್ಯೆ: ಆಇ 182 ಸ.ಉ.ಲಾ.2006ರಲ್ಲಿ ಪರಿಶೀಲಿಸಿದ ನಂತರ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ. ಆದುದರಿಂದ ಸದರಿ ಅಧಿಕಾರಿಯವರ ಆಕ್ಷೇಪಣೆಗಳನ್ನು ಪರಿಗಣಿಸಲು ಯೋಗ್ಯವಾಗಿರುವುದಿಲ್ಲವೆಂದು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಬಂಡವಾಳ ಹೂಡಿಕೆ, ಮಾಹಿತಿ ನಿರ್ವಹಣೆ ಹಾಗೂ ವಸೂಲಾತಿ, ಸಣ್ಣ ಉಳಿತಾಯ ಮತ್ತು ರಾಜ್ಯ ಲಾಟರಿ ಇಲಾಖೆಯ ಉಪ ನಿರ್ದೇಶಕರು ವೃಂದದ ದಿನಾಂಕ:01.01.2008ರಲ್ಲಿದ್ದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಕೆಳಗಿನಂತೆ ಪ್ರಕಟಿಸಲಾಗಿದೆ.

ಕ್ರ. ಸಂ.	ಹೆಸರು ಶ್ರೀಯುತರು	ಜನ್ಮ ದಿನಾಂಕ	ಸರ್ಕಾರದ ಸೇವೆಗೆ ಸೇರಿದ ದಿನಾಂಕ	ಪ್ರಸ್ತುತ ಹುದ್ದೆಯ ದಿನಾಂಕ	ಅರ್ಹತಾ ದಿನಾಂಕ	ಷರಾ
1.	ಆರ್. ಬಸವಣ್ಣ	10.12.1949	01.06.1977	06.07.1995	04.07.1995	ನಿವೃತ್ತರಾಗಿದ್ದಾರೆ
2.	ಓ. ಬೊಮ್ಮಣ್ಣ	08.11.1953	01.10.1981	11.08.1995	04.07.1995	–
3.	ಎ.ಆರ್. ಸತ್ಯನಾರಾಯಣ	04.09.1952	01.10.1981	14.06.2006	01.06.2006	–

ಡಿ.ಜಿ. ಪಟಗಾರ್

ಪಿ.ಆರ್–433

ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)

ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:379/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಅಬಕಾರಿ ಉಪ ನಿರೀಕ್ಷಕರು,		ರಾಘವ ಬಿನ್ ರಂಗಸ್ವಾಮಿ,
ಟಿ.ನರಸೀಪುರ ವಲಯ, ಟಿ.ನರಸೀಪುರ		ಡಿ. ಶ್ರೀನಿವಾಸ್ ಬಿನ್ ದಾಸಪ್ಪ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:31.01.2009ರಂದು ಬೆಳಿಗ್ಗೆ 6.00 ಗಂಟೆ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಟಿ.ನರಸೀಪುರ ವಲಯ, ಟಿ.ನರಸೀಪುರ ಇವರು ಟಿ.ನರಸೀಪುರ ತಾ: ಬನ್ನೂರು ಹೋಬಳಿ, ಮೈಸೂರು- ಬನ್ನೂರು ರಸ್ತೆಗೆ ಸೇರಿರುವ ರಂಗಸಮುದ್ರದ ಬಸ್ ನಿಲ್ದಾಣದ ಹತ್ತಿರ ಕೆಎ-55/ಇ-7823 ನೋಂದಣಿ ಸಂಖ್ಯೆಯ ಬಜಾಜ್ ಪಲ್ಸರ್ ವಾಹನದಲ್ಲಿ ಅಕ್ರಮವಾಗಿ 8.640 ಲೀ.ನಕಲಿ ಮದ್ಯ, ಲೇಬಲ್‌ಗಳು ಮತ್ತು ಮುಚ್ಚಳಗಳನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ, ನಕಲಿ ಮದ್ಯ ಮತ್ತು ನಕಲಿ ಮದ್ಯ ತಯಾರಿಕಾ ವಸ್ತುಗಳನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:21/2008-09ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14ರ ರೀತ್ಯಾ ಅಪರಾಧವಾಗಿದ್ದು, ಕಲಂ 32, 38(ಎ) ಮತ್ತು 43ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ರಾಘವ ಮತ್ತು ಡಿ. ಶ್ರೀನಿವಾಸ ಎಂಬ ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಲಯದ ಮುಂದೆ ಹಾಜರುಪಡಿಸಿರುವುದಾಗಿ ಹಾಗೂ ಉಳಿದ ಆರೋಪಿಗಳನ್ನು ಪತ್ತೆಹಚ್ಚಿ ದಸ್ತಗಿರಿ ಮಾಡುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕ್ರಮವಾಗಿ ದಿನಾಂಕ:12.02.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಈ ಸಂಬಂಧ ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ದೊರೆತ್ತಿರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:31.01.2009ರಂದು ಟಿ.ನರಸೀಪುರ ತಾ: ಬನ್ನೂರು ಹೋಬಳಿ, ಮೈಸೂರು- ಬನ್ನೂರು ರಸ್ತೆಗೆ ಸೇರಿರುವ ರಂಗಸಮುದ್ರದ ಬಸ್ ನಿಲ್ದಾಣದ ಹತ್ತಿರ ಕೆಎ-55/ಇ-7823 ನೋಂದಣಿ ಸಂಖ್ಯೆಯ ಬಜಾಜ್ ಪಲ್ಸರ್ ವಾಹನದಲ್ಲಿ ಅಕ್ರಮವಾಗಿ 8.640 ಲೀ. ನಕಲಿ ಮದ್ಯ, ಲೇಬಲ್‌ಗಳು ಮತ್ತು ಮುಚ್ಚಳಗಳನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದದ್ದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಈ ಬಗ್ಗೆ ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಅಲ್ಲದೇ ಅಕ್ರಮವಾಗಿ ನಕಲಿ ಮದ್ಯವನ್ನು ತಯಾರಿಸಿ, ಸಾಗಾಣಿಕೆ/ ದಾಸ್ತಾನು ಮತ್ತು ಮಾರಾಟದಂತಹ ವೃತ್ತಿಯಲ್ಲಿ ತೊಡಗಿಕೊಂಡು, ಸಾರ್ವಜನಿಕರ ಪ್ರಾಣಹಾನಿ ಮತ್ತು ನೆಮ್ಮದಿಗೆ ಭಂಗ ತರುವ ಸಾಧ್ಯತೆಗಳನ್ನು ತಳ್ಳಿಹಾಕುವಂತಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (8) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:379/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ಉಪ ನಿರೀಕ್ಷಕರು, ಟಿ.ನರಸೀಪುರ ವಲಯ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:21/2008-09, ದಿನಾಂಕ:31.06.2009ರಂದು ವಶಪಡಿಸಿಕೊಂಡ ಕೆಎ-55/ಎ-7823 ನೋಂದಣಿ ಸಂಖ್ಯೆಯ ಬಜಾಜ್ ಪಲ್ಸರ್ ವಾಹನವನ್ನು (ನಕಲಿ ಮದ್ಯ ಮತ್ತು ನಕಲಿ ಮದ್ಯ ತಯಾರಿಕಾ ವಸ್ತುಗಳನ್ನು ಮಾದರಿಯನ್ನು ಹೊರತುಪಡಿಸಿ ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1209

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:20/2005-06, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ಉಪ ನಿರೀಕ್ಷಕರು ಪಟ್ಟಣ ಪೊಲೀಸ್ ಠಾಣೆ, ಸಂಜನಗೂಡು.		ಮಹದೇವಸ್ವಾಮಿ ಬಿನ್ ಜವರಶೆಟ್ಟಿ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:07.05.2005 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಪಟ್ಟಣ ಪೊಲೀಸ್ ಠಾಣೆ, ನಂಜನಗೂಡು ಇವರು ನಂಜನಗೂಡು ಟೌನ್, ಹುಲ್ಲಹಳ್ಳಿ ಸರ್ಕಲ್‌ನಲ್ಲಿ ಕೆಎ-09/4803 ನೋಂದಣಿ ಸಂಖ್ಯೆಯ ಆಟೋ ವಾಹನದಲ್ಲಿ ಅಕ್ರಮವಾಗಿ 100 ಲೀ. ಸೇಂದಿಯನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಸೇಂದಿಯನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:33/2005ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34 ಹಾಗೂ ಐ.ಪಿ.ಸಿ. ಸೆಕ್ಷನ್ ರೀತ್ಯಾ ಮೊಕದ್ದಮೆ ದಾಖಲು ಮಾಡಿ, ಮುಂದಿನ ಕ್ರಮಕ್ಕಾಗಿ ಸಂಬಂಧಪಟ್ಟ ಆರೋಪಿಗಳನ್ನು ಹಾಗೂ ಅಬಕಾರಿ ವಸ್ತುಗಳನ್ನು ಅಬಕಾರಿ ಸಬ್ ಇನ್ಸ್‌ಪೆಕ್ಟರ್, ನಂಜನಗೂಡು ಇವರಿಗೆ ಹಸ್ತಾಂತರಿಸಿರುತ್ತಾರೆ.

ಪ್ರಕರಣದ ಆರೋಪಿಗಳಾದ ಮಹದೇವ, ಮಕ್ಬುಲ್ ಮತ್ತು ಶಿವಣ್ಣ ಇವರಿಗೆ ಈ ಪ್ರಾಧಿಕಾರದಿಂದ ದಿನಾಂಕ:08.09.2005ರಂದು ಕಾರಣ ಕೇಳುವ ನೋಟೀಸ್‌ನ್ನು ನೀಡಲಾಗಿದ್ದು, ಮಹದೇವ ಬಿನ್ ಜವರಶೆಟ್ಟಿ ವಿಳಾಸದಾರರು ಕಾಣೆಯಾಗಿರುತ್ತಾರೆ ಎಂದು ಅಂಚೆ ಇಲಾಖೆಯವರು ಸದರಿ ನೋಟೀಸ್‌ನ್ನು ಈ ಪ್ರಾಧಿಕಾರಕ್ಕೆ ಹಿಂದಿರುಗಿಸಿರುತ್ತಾರೆ.

ವಶಪಡಿಸಿಕೊಂಡ ವಾಹನದ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:08.09.2005ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ.

ಮಹದೇವ ಬಿನ್ ಜವರಶೆಟ್ಟಿ ಮತ್ತು ಶಿವಣ್ಣ ಬಿನ್ ತಮ್ಮಯ್ಯ, ಎನ್.ಜಿ.ಓ. ಕಾಲೋನಿ, ಚಾಮಲಾಪುರದಹುಂಡಿ, ನಂಜನಗೂಡು ತಾಲ್ಲೂಕು ಇವರುಗಳು ಕಾರಣ ಕೇಳುವ ನೋಟೀಸಿಗೆ ಪ್ರತಿಕ್ರಿಯಿಸಿ, ದಿನಾಂಕ:24.09.2008ರಂದು ಈ ಪ್ರಾಧಿಕಾರಕ್ಕೆ ಲಿಖಿತ ಮೂಲಕ ಮನವಿಯನ್ನು ಸಲ್ಲಿಸಿ, ಆರೋಪವನ್ನು ಅಲ್ಲಗಳೆದು ವಾಹನವನ್ನು ತನ್ನ ವಶಕ್ಕೆ ಬಿಡುಗಡೆ ಮಾಡಲು ಕೋರಿರುತ್ತಾರೆ. ಈ ಪ್ರಕರಣದ ವಿಚಾರಣೆಯನ್ನು ಪ್ರಾರಂಭಿಸಲಾಗಿದ್ದು, ಅರ್ಜಿದಾರರ ಮನವಿಯನ್ನು ಪುರಸ್ಕರಿಸಿ, ರೂ.5000/-ಗಳ ಭದ್ರತೆಯನ್ನು ಹಾಜರುಪಡಿಸುವಂತೆ ಸೂಚಿಸಲಾಗಿತ್ತು. ಇದಕ್ಕೆ ಅರ್ಜಿದಾರರು ಒಪ್ಪಿಗೆ ಸೂಚಿಸಲಾಗಿದ್ದು,

ಇದುವರೆವಿಗೂ ಯಾವುದೇ ಭದ್ರತೆಯನ್ನು ಹಾಜರುಪಡಿಸಿರುವುದಿಲ್ಲ. ಅಲ್ಲದೆ ಈ ಪ್ರಕರಣದ ಮುಟ್ಟುಗೋಲು ವಿಚಾರಣೆಗೆ ಅರ್ಜಿದಾರರು ದಿನಾಂಕ:11.01.2007ರ ವರೆಗೆ ಹಾಜರಾಗಿರುವುದನ್ನು ಹೊರತುಪಡಿಸಿ, ಉಳಿದ ಯಾವುದೇ ವಿಚಾರಣೆಗೆ ಹಾಜರಾಗಿರುವುದಿಲ್ಲ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಈ ಬಗ್ಗೆ ಯಾವುದೇ ಸಾಕ್ಷ್ಯ ಪುರಾವೆಗಳನ್ನು ಹಾಜರುಪಡಿಸಿರುವುದಿಲ್ಲ. ಈ ಕೃತ್ಯ ತನ್ನ ತಿಳುವಳಿಕೆಯಿಲ್ಲದೆ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ. ಅಲ್ಲದೆ ಇದುವರೆವಿಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (4) ವರ್ಷಗಳಿಗೂ ಹೆಚ್ಚು ಕಾಲ ಕಳೆದಿರುತ್ತದೆ. ಸದರಿಯವರು ತನ್ನ ಮೇಲೆ ಹೊರಿಸಿದುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೆ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಬಿಡಿಸುದಾರ ಗಮನಕ್ಕೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:20/2005--06, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಬಿ) ರ ಪ್ರಕಾರ ಅನುಸರಿಸಬೇಕಾದ ಕ್ರಮಗಳನ್ನೆಲ್ಲಾ ಅನುಸರಿಸಿದ ನಂತರ ಕಲಂ 43(ಎ) (2) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 33/2005, ದಿನಾಂಕ:07.05.05ರಂದು ವಶಪಡಿಸಿಕೊಂಡ ಕೆಎ-09/4803/ ನೋಂದಣಿ ಸಂಖ್ಯೆಯ ಆಟೋ ವಾಹನ ಮತ್ತು 100 ಲೀ. ಸೇಂದಿಯನ್ನು (ಮಾದರಿಯನ್ನು ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ಬೆರಳಚ್ಚು ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1226

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:40(ಪೊಲೀಸ್)/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ಉಪ ನಿರೀಕ್ಷಕರು ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು ತಾ:		ಪುರುಷೋತ್ತಮ ಬಿನ್ ಪುಟ್ಟಸೋಮಯ್ಯ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:31.12.2008ರಂದು ಸಂಜೆ 4.45 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ ಇವರು ನಂಜನಗೂಡು ತಾಲ್ಲೂಕು, ಕಲ್ಲಹಳ್ಳಿ ವಸ್ತ್ರ ಕೈಗಾರಿಕಾ ಪ್ರದೇಶದ ಶ್ರೀ ವೆಂಕಟೇಶ್ವರ ಎಂಟರ್‌ಪ್ರೈಸಸ್ ಕಾರ್ಖಾನೆಯ ಮುಂಭಾಗದಲ್ಲಿ ಕೆಎ-04-/ಎಕ್ಸ್-4379 ನೋಂದಣಿ ಸಂಖ್ಯೆಯ ಕೈನೆಟಿಕ್ ಹೋಂಡಾ

ವಾಹನದಲ್ಲಿ ಅಕ್ರಮವಾಗಿ 8.640 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪುರುಷೋತ್ತಮ ಬಿನ್ ಪುಟ್ಟಸೋಮಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:406/2008ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14, 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕೆ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:02.01.2009ರಂದು ಈ ಪ್ರಾಧಿಕಾರದ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:07.01.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ಉತ್ತರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:22.05.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಅಂತೆಯೇ ದಿನಾಂಕ:23.07.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು 'ಬಿ' ವಹಿಯ ಪ್ರತಿಯನ್ನು ಪಡೆದು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಅದನ್ನು ಪರಿಶೀಲಿಸಲಾಗಿ ರಾಘವೇಂದ್ರ ಎಂ. ದೇಶ್‌ಪಾಂಡೆ ಬಿನ್ ಮಾಧವ ದೇಶ್‌ಪಾಂಡೆ, ಸಂಖ್ಯೆ: ಬಿ-1518/5, ಬಿ ಬ್ಲಾಕ್, 5ನೇ ಮೈನ್, 5ನೇ ಕ್ರಾಸ್, ಸಹಕಾರನಗರ, ಬೆಂಗಳೂರು-ಇವರ ಒಡೆತನದಲ್ಲಿರುವುದು ಕಂಡುಬಂದಿರುತ್ತದೆ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:31.12.2008ರಂದು ನಂಜನಗೂಡು ತಾಲ್ಲೂಕು ಕಲ್ಲಹಳ್ಳಿ ರಸ್ತೆ, ಕೈಗಾರಿಕಾ ಪ್ರದೇಶದಲ್ಲಿ ಕೆಎ-04-/ಎಕ್ಸ್-4379 ನೋಂದಣಿ ಸಂಖ್ಯೆಯ ಕೈನೆಟಿಕ್ ಹೋಂಡಾ ವಾಹನದಲ್ಲಿ ಅಕ್ರಮವಾಗಿ 8.640 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (8) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:40(ಪೊಲೀಸ್)/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:406/2008, ದಿನಾಂಕ:31.12.2008ರಂದು ವಶಪಡಿಸಿಕೊಂಡ ಕೆಎ-04/ಎಕ್ಸ್-4379 ನೋಂದಣಿ ಸಂಖ್ಯೆಯ ಕೈನೆಟಿಕ್ ಹೋಂಡಾ ವಾಹನವನ್ನು (8.640 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1229

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:322/2007-08, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಅಬಕಾರಿ ನಿರೀಕ್ಷಕರು, ಗುಪ್ತ ವಾರ್ತಾ ವಿಭಾಗ, ಮೈಸೂರು.		ಆರೋಪಿ ಪರಾರಿ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:18.02.2008ರಂದು ಬೆಳಿಗ್ಗೆ 9.00 ಗಂಟೆ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಗುಪ್ತ ವಾರ್ತಾ ವಿಭಾಗ, ಮೈಸೂರು ವಿಭಾಗ ಇವರು ನಂಜನಗೂಡು ತಾಲ್ಲೂಕು, ನಂಜನಗೂಡು-ಗುಂಡ್ಲುಪೇಟೆ ರಸ್ತೆ, ಕಳ್ಳೀಪುರ ಗ್ರಾಮದ ಗೇಟ್ ಬಳಿ ಕೆಎ-09/ಎಂ-2405 ನೋಂದಣಿ ಸಂಖ್ಯೆಯ ಮಾರುತಿ-800 ವಾಹನದಲ್ಲಿ ಅಕ್ರಮವಾಗಿ 105 ಲೀ. ಮದ್ಯಸಾರವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:16/2007-08ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11ರ ರೀತ್ಯಾ ಅಪರಾಧವಾಗಿದ್ದು, ಕಲಂ 32, 33(ಜಿ), 38(ಎ) ಮತ್ತು 43ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿ ಪರಾರಿಯಾಗಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:28.07.2008ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಕಾರಣ ದಿನಾಂಕ:05.11.2008ರಂದು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಮತ್ತೊಮ್ಮೆ ಪತ್ರ ಬರೆಯಲಾಗಿರುತ್ತದೆ. ಶ್ರೀಮತಿ ಪ್ರಭಾ ಆರ್. ರೆಡ್ಡಿ, ಸಂ.175, 1ನೇ ಬ್ಲಾಕ್, ಕುವೆಂಪುನಗರ, ಮೈಸೂರು ಇವರ ಒಡೆತನದಲ್ಲಿದ್ದು, ಸದರಿಯವರಿಗೆ ಈ ಪ್ರಾಧಿಕಾರದಿಂದ ದಿನಾಂಕ:11.07.2008ರಂದು ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ಜಾರಿಗೊಳಿಸಲಾಗಿದ್ದು, ವಲಯದ ನಿರೀಕ್ಷಕರು ಮಾಲೀಕರಿಗೆ ಜಾರಿಗೊಳಿಸಿ ವರದಿ ಮಾಡಿರುತ್ತಾರೆ. ಸದರಿ ನೋಟೀಸಿಗೆ ಪ್ರತಿಕ್ರಿಯಿಸಿ, ಜಪ್ತುಗೊಳಿಸಲಾದ ಕಾರು ನನ್ನದಾಗಿದ್ದು, ನನಗೆ ಗೊತ್ತಿಲ್ಲದೇ ಕಾರಿನ ಚಾಲಕನು ಹಣದ ಆಸೆಯಿಂದ ಈ ರೀತಿ ತಪ್ಪು ಮಾಡಿರುವುದಾಗಿ, ಇಲಾಖೆಯು ವಿಧಿಸುವ ಮೌಲ್ಯವನ್ನು ಸರ್ಕಾರಕ್ಕೆ ಪಾವತಿಸಲು ಬದ್ಧನಾಗಿರುವುದಾಗಿ ಸದರಿ ವಾಹನವನ್ನು ವಾಪಸ್ಸು ನೀಡಬೇಕೆಂದು ಕೋರಿರುತ್ತಾರೆ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:18.02.2008ರಂದು ನಂಜನಗೂಡು ತಾಲ್ಲೂಕು, ನಂಜನಗೂಡು-ಗುಂಡ್ಲುಪೇಟೆ ರಸ್ತೆ, ಕಳ್ಳೀಪುರ ಗ್ರಾಮದ ಗೇಟ್ ಬಳಿ ಕೆಎ-09/ಎಂ-2405 ನೋಂದಣಿ ಸಂಖ್ಯೆಯ ಮಾರುತಿ-800 ವಾಹನದಲ್ಲಿ ಅಕ್ರಮವಾಗಿ 105 ಲೀ. ಮದ್ಯಸಾರವನ್ನು ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣದಲ್ಲಿ ಆರೋಪಿಯು ಪರಾರಿಯಾಗಿದ್ದು, ಇಂತಹ ಮೊಕದ್ದಮೆಗಳಲ್ಲಿ ಪ್ರಕರಣ ದಾಖಲಾದ ಒಂದು ತಿಂಗಳೊಳಗಾಗಿ ವಾಹನದ ಮಾಲೀಕತ್ವವನ್ನು ನಿರೂಪಿಸಲು ಈ ಪ್ರಾಧಿಕಾರದ ಮುಂದೆ ಹಾಜರಾಗದಿದ್ದಲ್ಲಿ ಅಂತಹ ಅಬಕಾರಿ ವಸ್ತುಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ)ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕಾನೂನಿನಲ್ಲಿ ಅವಕಾಶವಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (19) ತಿಂಗಳಿಗೂ ಹೆಚ್ಚು ಕಾಲ ಕಳೆದಿರುತ್ತದೆ. ವಾಹನ ಬಿಡುಗಡೆಗಾಗಿ ಅರ್ಜಿಯನ್ನು ಸಲ್ಲಿಸಿರುವುದನ್ನು ಹೊರತುಪಡಿಸಿ, ಇನ್ನಾವುದೇ ಪ್ರಯತ್ನ ನಡೆಸಿರುವುದು ಕಂಡುಬಂದಿರುವುದಿಲ್ಲ. ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ಸ್ಪಷ್ಟಿಕರವಾಗಿ ಈ

ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:322/2007-08, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ನಿರೀಕ್ಷಕರು, ಗುಪ್ತವಾರ್ತಾ ವಿಭಾಗ, ಮೈಸೂರು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 16/2007-08, ದಿನಾಂಕ:18.02.2008ರಂದು ವಶಪಡಿಸಿಕೊಂಡ ಕೆಎ-09/ಎಂ-2405 ನೋಂದಣಿ ಸಂಖ್ಯೆಯ ಮಾರುತಿ-800 ವಾಹನವನ್ನು (105 ಲೀ. ಮದ್ಯಸಾರವನ್ನು ಮಾದರಿಯನ್ನು ಹೊರತುಪಡಿಸಿ ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1210

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:564(ಪೋಲೀಸ್)/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಟೌನ್ ಪೊಲೀಸ್ ಠಾಣೆ, ನಂಜನಗೂಡು.		ಗುರುಸ್ವಾಮಿ ಬಿನ್ ಲೇಟ್ ನಂಜುಂಡಾಚಾರಿ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:10.04.2009ರಂದು ಮಧ್ಯಾಹ್ನ 3.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಟೌನ್ ಪೊಲೀಸ್ ಠಾಣೆ, ನಂಜನಗೂಡು ಇವರು ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಸರ್ಕಲ್ ಬಳಿ ಕೆಎ-05/ಇಎ-457 ನೋಂದಣಿ ಸಂಖ್ಯೆಯ ಬಜಾಜ್ ಕ್ಯಾಲಿಬರ್ ವಾಹನದಲ್ಲಿ ಅಕ್ರಮವಾಗಿ 7.200 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಗುರುಸ್ವಾಮಿ ಬಿನ್ ಲೇಟ್ ನಂಜುಂಡಾಚಾರಿ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:65/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:16.04.2009ರಂದು ಈ ಪ್ರಾಧಿಕಾರದ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:17.04.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:17.04.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದೂವರೆಗೆ ಯಾವುದೇ ಪ್ರತಿಕ್ರಿಯೆ ದೊರೆತಿರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:10.04.2009ರಂದು ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಸರ್ಕಲ್ ಬಳಿ ಕೆಎ–05/ಇಎ–457 ನೋಂದಣಿ ಸಂಖ್ಯೆಯ ಬಜಾಜ್ ಕ್ಯಾಲಿಬರ್ ವಾಹನದಲ್ಲಿ ಅಕ್ರಮವಾಗಿ 7.200 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದುವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:564/2008–09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಟೌನ್ ಪೊಲೀಸ್ ಠಾಣೆ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:65/2009, ದಿನಾಂಕ:10.04.2009ರಂದು ವಶಪಡಿಸಿಕೊಂಡ ಕೆಎ–05/ಇಎ–457 ನೋಂದಣಿ ಸಂಖ್ಯೆಯ ಬಜಾಜ್ ಕ್ಯಾಲಿಬರ್ ವಾಹನವನ್ನು (7.200 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್–1212

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:503(ಪೊಲೀಸ್)/2008–09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ಉಪ ನಿರೀಕ್ಷಕರು, ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು ತಾಲ್ಲೂಕು.		ಸಂದೇಶ್ ಕುಮಾರ್ ಮತ್ತು ಮಹಾಲಿಂಗಸ್ವಾಮಿ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:09.03.2009ರಂದು ಸಂಜೆ 5.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು ಇವರು ನಂಜನಗೂಡು ತಾಲ್ಲೂಕು, ಹರದನಹಳ್ಳಿ ಗ್ರಾಮದ ಬಸ್ ನಿಲ್ದಾಣ ಬಳಿ ಕೆಎ-09/ಎಲ್-2109 ನೋಂದಣಿ ಸಂಖ್ಯೆಯ ಟಿ.ವಿ.ಎಸ್. ಮೊಪೆಡ್ ವಾಹನದಲ್ಲಿ ಅಕ್ರಮವಾಗಿ 8.640 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಸಂದೇಶ್‌ಕುಮಾರ್ ಬಿನ್ ಸಿದ್ದರಾಜು ಮತ್ತು ಮಹಾಲಿಂಗಸ್ವಾಮಿ ಬಿನ್ ಮರಿಯಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:35/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:10.03.2009ರಂದು ಈ ಪ್ರಾಧಿಕಾರದ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:16.03.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:20.03.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಅಂತೆಯೇ ದಿನಾಂಕ:03.06.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು 'ಬಿ' ವಹಿಯ ಪ್ರತಿಯನ್ನು ಈ ಪ್ರಾಧಿಕಾರಕ್ಕೆ ಪಡೆದು ಸಲ್ಲಿಸಿರುತ್ತಾರೆ. ಅದನ್ನು ಪರಿಶೀಲಿಸಲಾಗಿ ಶ್ರೀ ಪಿ. ಮುತ್ತು ಬಿನ್ ಪಿ. ಮುತ್ತುಸ್ವಾಮಿ, ಸಂ.2542, 4ನೇ ಕ್ರಾಸ್, ನ್ಯೂ ಕಾಂತರಾಜ ಅರಸ್ ರಸ್ತೆ, ಕೆ.ಜಿ. ಕೊಪ್ಪಲು, ಮೈಸೂರು ಇವರ ಒಡೆತನದಲ್ಲಿರುವುದು ಕಂಡುಬಂದಿರುತ್ತದೆ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:09.03.2009ರಂದು ನಂಜನಗೂಡು ತಾಲ್ಲೂಕು, ಹರದನಹಳ್ಳಿ ಗ್ರಾಮದ ಬಸ್ ನಿಲ್ದಾಣ ಬಳಿ ಕೆಎ-09/ಎಲ್-2109 ನೋಂದಣಿ ಸಂಖ್ಯೆಯ ಟಿ.ವಿ.ಎಸ್. ಮೊಪೆಡ್ ವಾಹನದಲ್ಲಿ ಅಕ್ರಮವಾಗಿ 8.640 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಶ್ರೀ ಪಿ. ಮುತ್ತು ಬಿನ್ ಪಿ. ಮುತ್ತುಸ್ವಾಮಿ, ಸಂ.2542, 4ನೇ ಕ್ರಾಸ್, ನ್ಯೂ ಕಾಂತರಾಜ ಅರಸ್ ರಸ್ತೆ, ಕೆ.ಜಿ.ಕೊಪ್ಪಲು, ಮೈಸೂರು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (6) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:503/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಹುಲ್ಲಹಳ್ಳಿ ಪೊಲೀಸ್ ಠಾಣೆ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:35/2009, ದಿನಾಂಕ:09.03.2009ರಂದು ವಶಪಡಿಸಿಕೊಂಡ ಕೆಎ-09/ಎಲ್-2109 ನೋಂದಣಿ ಸಂಖ್ಯೆಯ ಟಿ.ವಿ.ಎಸ್. ಮೊಪೆಡ್ ವಾಹನವನ್ನು (8.640 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1211

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:502(ಪೊಲೀಸ್)/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೊಲೀಸ್ ಠಾಣೆ, ಟಿ.ನರಸೀಪುರ ತಾಲ್ಲೂಕು.		ರವಿ ಬಿನ್ ಮಾದನಾಯ್ಕ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:14.02.2009ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೊಲೀಸ್ ಠಾಣೆ ಇವರು ಟಿ.ನರಸೀಪುರ ತಾಲ್ಲೂಕು, ತಲಕಾಡು ರಸ್ತೆಯ ಫೈರ್ ಬ್ರಿಗೇಡ್ ಬಳಿ ಕೆಎ-09/ಇಜೆ-4152 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನದಲ್ಲಿ ಅಕ್ರಮವಾಗಿ 18 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ರವಿ ಬಿನ್ ಮಾದನಾಯ್ಕ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:27/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14, 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:09.03.2009ರಂದು ಈ ಪ್ರಾಧಿಕಾರದ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:12.03.2009ರಂದು ಟಿ.ನರಸೀಪುರ ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:18.06.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದೂವರೆಗೆ ಯಾವುದೇ ಪ್ರತಿಕ್ರಿಯೆ ದೊರೆತಿರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:14.02.2009ರಂದು ಟಿ.ನರಸೀಪುರ ತಾಲ್ಲೂಕು, ತಲಕಾಡು ರಸ್ತೆಯ ಬಳಿ ಕೆಎ-09/ಇಜೆ-4152 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನದಲ್ಲಿ ಅಕ್ರಮವಾಗಿ 18 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (7) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ

ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:502/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೊಲೀಸ್ ಠಾಣೆ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:27/2009, ದಿನಾಂಕ:14.02.2009ರಂದು ವಶಪಡಿಸಿಕೊಂಡ ಕೆಎ-09/ಇಜೆ-4152 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನವನ್ನು (18 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1208

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:563/2008-09, ದಿನಾಂಕ:24ನೇ ಜೂನ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಇಲವಾಲ ಪೊಲೀಸ್ ಠಾಣೆ, ಮೈಸೂರು.		ಆರೋಪಿಯನ್ನು ಪತ್ತೆ ಹಚ್ಚಬೇಕಾಗಿರುತ್ತದೆ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:28.03.2009ರಂದು ಸಂಜೆ 5.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಇಲವಾಲ ಪೊಲೀಸ್ ಠಾಣೆ, ಮೈಸೂರು ಇವರು ಇಲವಾಲ ಹೋಬಳಿ, ಸೀಗಳ್ಳಿ-ಬಿಳಿಕೆರೆ ರಸ್ತೆ, ಸಿಳ್ಳೇಗೌಡರ ಜಾಗದ ಹತ್ತಿರ, ಕೆಎ-09/ಇಎಲ್-5227 ನೋಂದಣಿ ಸಂಖ್ಯೆಯ ಬಜಾಜ್ ಪ್ಲಾಟಿನಾ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:42/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕೆ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:09.04.2009ರಂದು ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:16.04.2009ರಂದು ಮೈಸೂರು ವಲಯ ಸಂ.3 ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನದ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:16.04.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದೂವರೆಗೆ ಯಾವುದೇ ಮಾಹಿತಿ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:28.03.2009ರಂದು ಇಲವಾಲ ಹೋಬಳಿ, ಸೀಗಳ್ಳಿ-ಬಿಳಿಕೆರೆ ರಸ್ತೆ, ಸಿಳ್ಳೇಗೌಡರ ಜಾಗದ ಹತ್ತಿರ, ಕೆಎ-09/ಇಎಲ್-5227 ನೋಂದಣಿ ಸಂಖ್ಯೆಯ ಬಜಾಜ್ ಪ್ಲಾಟಿನಾ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34, 38ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದುವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣದಲ್ಲಿ ಆರೋಪಿಯು ಪರಾರಿಯಾಗಿದ್ದು, ಇಂತಹ ಮೊಕದ್ದಮೆಗಳಲ್ಲಿ ಪ್ರಕರಣ ದಾಖಲಾದ ಒಂದು ತಿಂಗಳೊಳಗಾಗಿ ವಾಹನದ ಮಾಲೀಕತ್ವವನ್ನು ನಿರೂಪಿಸಲು ಈ ಪ್ರಾಧಿಕಾರದ ಮುಂದೆ ಹಾಜರಾಗದಿದ್ದಲ್ಲಿ ಅಂತಹ ಅಬಕಾರಿ ವಸ್ತುಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ)ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕಾನೂನಿನಲ್ಲಿ ಅವಕಾಶವಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (6) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:563/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಇಲವಾಲ ಪೊಲೀಸ್ ಠಾಣೆ, ಮೈಸೂರು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:42/2009, ದಿನಾಂಕ:28.03.2009ರಂದು ವಶಪಡಿಸಿಕೊಂಡ ಕೆಎ-09/ಇಎಲ್-5227 ನೋಂದಣಿ ಸಂಖ್ಯೆಯ ಬಜಾಜ್ ಪ್ಲಾಟಿನಾ ವಾಹನವನ್ನು (5.400 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1077

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ,
ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:03/2009-10, ದಿನಾಂಕ:22ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ.		ಎಂ. ನಾಗರಾಜು ಬಿನ್ ಮಾದೇಗೌಡ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:28.06.2009ರಂದು ಸಂಜೆ 5.00 ಗಂಟೆ ಸಮಯದಲ್ಲಿ ಆರಕ್ಷಕ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ ಇವರು ನಂಜನಗೂಡು-ಊಟಿ ರಸ್ತೆಯಲ್ಲಿರುವ ಕಾರ್ಮೆಲ್ ಶಾಲೆ ಮುಂಭಾಗ ಬಳಿ ಅಕ್ರಮವಾಗಿ 10.620 ಲೀ. ಮದ್ಯವನ್ನು ಕೆಎ-09/ಎಕ್ಸ್-3589 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:19/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಮೊಕದ್ದಮೆ ದಾಖಲಿಸಿ, ಆರೋಪಿಯನ್ನು ನ್ಯಾಯಾಂಗದ ಮುಂದೆ ಹಾಜರುಪಡಿಸಿರುವುದಾಗಿ ನಮೂದಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:01.07.2009ರಂದು ವರದಿಯೊಂದನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:13.07.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು ದಿನಾಂಕ:07.08.2009ರಂದು ವರದಿಯನ್ನು ಸಲ್ಲಿಸಿ ಮೈಸೂರು ಪಶ್ಚಿಮ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ ಸದರಿ ವಾಹನದ 'ಬಿ' ಈ ಪ್ರಾಧಿಕಾರಕ್ಕೆ ಸಲ್ಲಿಸಿ, ಸಂಬಂಧಪಟ್ಟ ವಾಹನ ಮಾಲೀಕರಿಗೆ ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸನ್ನು ನೀಡಲು ಕೋರಿರುತ್ತಾರೆ. ಬಿ ವಹಿಯನ್ನು ಪರಿಶೀಲಿಸಲಾಗಿ ಶ್ರೀಮತಿ ಆರ್. ಭುವನೇಶ್ವರಿ ಕೋಂ ವಿ. ರವಿಚಂದ್ರನ್, ನಂ. ಬಿ66, ಬಿ.ಆರ್.ಬಿ.ಎನ್. ನೋಟ್ ಮುದ್ರಣ್ ನಗರ್, ಮೈಸೂರು ಇವರ ಒಡೆತನದಲ್ಲಿರುವುದು ದೃಢಪಟ್ಟಿರುತ್ತದೆ. ಸದರಿ ಮಾಲೀಕರಿಗ ಕಲಂ 43(ಬಿ) ರ ಅಡಿಯಲ್ಲಿ ಈ ಪ್ರಾಧಿಕಾರದಿಂದ ದಿನಾಂಕ:24.09.2009 ರಂದು ಕಾರಣ ಕೇಳುವ ನೋಟಿಸ್‌ನ್ನು ಜಾರಿಗೊಳಿಸಲಾಗಿದ್ದು, ಆರ್. ಭುವನೇಶ್ವರಿ ಇವರು ಸದರಿ ನೋಟಿಸಿಗೆ ಪ್ರತಿಕ್ರಿಯಿಸಿ, ವಾಹನವನ್ನು ನಾಗೇಶ್ ಬಿನ್ ಲೇ: ಮರಿಬಸವಯ್ಯ ಇವರಿಗೆ ಮಾರಾಟ ಮಾಡಿರುವುದಾಗಿ ಮುಂದಿನ ಪತ್ರ ವ್ಯವಹಾರವನ್ನು ನಾಗೇಶ್‌ರವರಿಗೆ ನಡೆಸಲು ಕೋರಿರುತ್ತಾರೆ. ಹಾಗೆಯೇ ನಾಗೇಶ್‌ರವರು ದಿನಾಂಕ:20.10.2009ರಂದು ಲಿಖಿತ ಮೂಲಕ ಈ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿ, ಎಂ. ನಾಗರಾಜು ಬಿನ್ ಮಾದೇಗೌಡ, ಹೊರೆಯಾಲ ಗ್ರಾಮ, ಗುಂಡ್ಲುಪೇಟೆ ತಾಲ್ಲೂಕು ಇವರಿಗೆ ಮಾರಾಟ ಮಾಡಲಾಗಿದ್ದು ನನಗೂ ವಾಹನಕ್ಕೂ ಯಾವುದೇ ಸಂಬಂಧವಿಲ್ಲವೆಂದು ತಿಳಿಸಿರುತ್ತಾರೆ.

ಮೇಲ್ಕಂಡ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:28.06.2009ರಂದು ನಂಜನಗೂಡು-ಊಟಿ ರಸ್ತೆಯಲ್ಲಿರುವ ಕಾರ್ಮೆಲ್ ಶಾಲೆ ಮುಂಭಾಗ ಬಳಿ ಅಕ್ರಮವಾಗಿ 10.620 ಲೀ. ಮದ್ಯವನ್ನು ಕೆಎ-09/ಎಕ್ಸ್-3589 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಬಗ್ಗೆ ವಾಹನ ಮಾಲೀಕರ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ಪ್ರಸ್ತುತ ಎಂ. ನಾಗರಾಜು ರವರು ಸಹ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (3) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:03/2009-10, ದಿನಾಂಕ:22ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:19/2009, ದಿನಾಂಕ:28.06.2009ರಂದು ವಶಪಡಿಸಿಕೊಂಡ ಕೆಎ-09/ಎಕ್ಸ್-3589

ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸಲ್ ವಾಹನವನ್ನು (10.620 ಲೀ. ಮದ್ಯವನ್ನು ಮಾವರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 22ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1204

ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ ನಂ.5 ಲೋ.ಬಂ ಮತ್ತು ಒ.ಜ.ಸಾ.ಉಪ ವಿಭಾಗ ಸಾಗರ

"ಸುತ್ತೋಲೆ"

ನಂ:ಸಕಾಇಂ:ಲೋಇ:ಸಿಬ್ಬಂದಿ-1 :ಮಾಹಿತಿ ಹಕ್ಕು ಕೈಪಿಡಿ: 2005/2009-10/765, ದಿನಾಂಕ: 25ನೇ ಮಾರ್ಚ್, 2010

ಸರ್ಕಾರದ ಅಧಿಸೂಚನೆ ಸಂಖ್ಯೆ :ಲೋಇ:64:ಸ್ವೀಮರ:05 ದಿನಾಂಕ:-23-09-2005 ಹಾಗೂ ಲೋಇ.16-ಐಟಿಸಿ:08:2750 ದಿನಾಂಕ:25-02-08 ಮತ್ತು ಮುಖ್ಯ ಇಂಜಿನಿಯರು (ಸಂಕದ) ಬೆಂಗಳೂರು ಇವರ ಅಧಿಸೂಚನೆ ಸಂಖ್ಯೆ : ಸಿಬಿಎಸ್: ಮಾಹಿತಿ ಹಕ್ಕು ಕೈಪಿಡಿ :05:ಇಎಸ್ಎಫ್:05-06 ದಿ. 19-09-2005 ಹಾಗೂ ಮುಖ್ಯ ಇಂಜಿನಿಯರ್ ಸಂಕದ ಬೆಂಗಳೂರು ಸಿಬಿಎಸ್:ಮಹಾಕ:208:07-08 ದಿ:20-03-08 ರ ಪರಿಷ್ಕೃತ ನಿರ್ದೇಶನದಂತೆ 2005 ರ ಮಾಹಿತಿ ಹಕ್ಕು ಅಧಿನಿಯಮ-2ರ ಅಡಿಯಲ್ಲಿ ಲೋ.ಇ. ಮುಖ್ಯಸ್ಥರನ್ನು ಸಾರ್ವಜನಿಕ ಪ್ರಾಧಿಕಾರಿ ಎಂದು ನಾಮಾಂಕಿತ ಮಾಡಿ ಸರ್ಕಾರವು ನೇಮಿಸಿದೆ.

ಮಾಹಿತಿ ಹಕ್ಕು ಅಧಿನಿಯಮ 2005 ರ ಸೆಕ್ಷನ್ 5(2) ಅಡಿಯಲ್ಲಿ ಇಲಾಖಾ ಮುಖ್ಯಸ್ಥರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರ ಕಛೇರಿಗಳಲ್ಲಿನ ಕಾರ್ಯ ವಿಧಾನದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಇಲಾಖಾ ಮುಖ್ಯಸ್ಥರು ಎಲ್ಲಾ ಸಹಾಯಕ ಕಾರ್ಯಪಾಲಕ ಇಂಜಿನಿಯರುಗಳನ್ನು "ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದು ಮತ್ತು ಸದರಿ ನಿಯಮ 5(1)ರ ಅಡಿಯಲ್ಲಿ ಕಾರ್ಯಪಾಲಕ ಇಂಜಿನಿಯರುಗಳನ್ನು "ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದು ನೇಮಕ ಮಾಡಿರುತ್ತಾರೆ

ಈ ಸಂಬಂಧ ಲೋಕೋಪಯೋಗಿ ಇಲಾಖೆ, ಸಾಗರ ಉಪವಿಭಾಗ ವ್ಯಾಪ್ತಿಗೆ ಸಂಬಂಧಿಸಿದಂತೆ, ಉಪವಿಭಾಗ ಕಛೇರಿಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು "ವಿಶೇಷ ಸಾರ್ವಜನಿಕ ಮಾಹಿತಿ ಅಧಿಕಾರಿ" (ಎಸ್.ಪಿ.ಐ.ಓ) ಎಂದು ಕಛೇರಿಯ ಸಹಾಯಕ ಇಂಜನಿಯರ್ ಇವರನ್ನು ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ (ಎ.ಪಿ.ಐ.ಓ) ಎಂದು ಈ ಮೂಲಕ ನಾಮಾಂಕಿತ ಮಾಡಲಾಗಿದೆ. ಈ ಬಗ್ಗೆ ಈ ಕಛೇರಿಯಿಂದ "ಮಾಹಿತಿ ಹಕ್ಕು ಕೈಪಿಡಿ-2005" ನ್ನು ಪ್ರಕಟಿಸಲಾಗಿದ್ದು, ವೆಬ್ ಸೈಟ್‌ನಲ್ಲಿ ಪ್ರಚುರಪಡಿಸುವಂತೆ ಟಿಪಿಸಿ/ಎನ್‌ಪಿಸಿ ಇವರಿಗೆ ಸೂಚಿಸಲಾಗಿದೆ. ಸಾಗರ ಲೋ.ಇ ಉಪ ವಿಭಾಗ ಕಛೇರಿಯಿಂದ ಮಾಹಿತಿಯನ್ನು ಈ ಮೂಲಕ ಪರಿಷ್ಕರಿಸಿ ಪ್ರಕಟಿಸಿದೆ.

ಕೆ.ಎನ್. ದಿನೇಶ್
ಸಹಾಯಕ ಕಾರ್ಯಪಾಲಕ ಇಂಜಿನಿಯರ್,
ಲೋ.ಬಂ ಮತ್ತು ಒ.ಜ.ಸಾ. ಇಲಾಖೆ,
ನಂ.5 ಉಪ ವಿಭಾಗ, ಸಾಗರ.

ನಮೂನೆ

ಮಾಹಿತಿ ಹಕ್ಕು ಅಧಿನಿಯಮ- 2005

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಲೋ.ಬಂ ಮತ್ತು ಒ.ಜ.ಸಾ ಇಲಾಖೆ ನಂ.5 ಉಪ ವಿಭಾಗ ಸಾಗರ

ಮಾಹಿತಿ ಹಕ್ಕು ಅಧಿನಿಯಮ- 2005 ಸೆಕ್ಷನ್ 5(1)(2) ರ ಅಡಿಯಲ್ಲಿ ಈ ಕಛೇರಿಯಿಂದ ಕೆಳಕಂಡ ಅಧಿಕಾರಿಗಳು ಸಾರ್ವಜನಿಕ ಸಂಪರ್ಕ ಅಧಿಕಾರಿಗಳಾಗಿರುತ್ತಾರೆ.

ಈ ಕಛೇರಿಯಲ್ಲಿ ಮಾಹಿತಿ ದಾಖಲೆಗಳನ್ನು ನೀಡುವ ಅಧಿಕಾರಿಗಳು : ಸಾರ್ವಜನಿಕ ಮಾಹಿತಿ ಅಧಿಕಾರಿ ಸೆಕ್ಷನ್ 5(1)ರ ಪ್ರಕಾರ.

ಅಧಿಕಾರಿ ಹೆಸರು: ಶ್ರೀ ಕೆ.ಎನ್ ದಿನೇಶ್

ಪದನಾಮ:
ಸಹಾಯಕ ಕಾರ್ಯಪಾಲಕ ಇಂಜಿನಿಯರ್
ಲೋ.ಬಂ ಮತ್ತು ಒ.ಜ.ಸ. ಇಲಾಖೆ
ನಂ.5 ಉಪ ವಿಭಾಗ, ಸಾಗರ
ದೂರವಾಣಿ : 08183-226213

ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಸೆಕ್ಷನ್ 5(2)ರ ಪ್ರಕಾರ.

ಅಧಿಕಾರಿ ಹೆಸರು: ಶ್ರೀ ಕೆ.ಜೆ ಭೀಮಾನಾಯ್ಕ್

ಪದನಾಮ:
ಸಹಾಯಕ ಇಂಜಿನಿಯರ್
ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಛೇರಿ
ಲೋ.ಬಂ ಮತ್ತು ಒ.ಜ.ಸ. ಇಲಾಖೆ
ನಂ.5 ಉಪ ವಿಭಾಗ, ಸಾಗರ
ದೂರವಾಣಿ : 08183-226213

ಮೇಲಿನ ಅಧಿಕಾರಿಗಳು ಮಾಹಿತಿಯನ್ನು 30 ದಿನಗಳೊಳಗಾಗಿ ನೀಡದಿದ್ದಲ್ಲಿ ಅಥವಾ ಸಹಕರಿಸದಿದ್ದಲ್ಲಿ ದೂರನ್ನು ಮತ್ತು ಮೇಲ್ಮನವಿಯನ್ನು ಸೆಕ್ಷನ್ 19(1)ರ ಪ್ರಕಾರ ಕೆಳಕಂಡ ಅಧಿಕಾರಿಗಳಿಗೆ ನೀಡಬಹುದು.

ಕಾರ್ಯಪಾಲಕ ಇಂಜಿನಿಯರ್
ಲೋ.ಬಂ ಮತ್ತು ಒ.ಜ.ಸ. ಇಲಾಖೆ
ಶಿವಮೊಗ್ಗ ವಿಭಾಗ, ಶಿವಮೊಗ್ಗ.

ಕರ್ತವ್ಯದ ಹಾಜರಾತಿ

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ – 2005 ಸೆಕ್ಷನ್ 5(1) ಪ್ರಕಾರ ಶ್ರೀ ಕೆ.ಎನ್ ದಿನೇಶ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಆದ ನಾನು ವಿಶೇಷ ಸಾರ್ವಜನಿಕ ಮಾಹಿತಿ ಅಧಿಕಾರಿ (ಎಸ್.ಪಿ.ಐ.ಓ) ಯಾಗಿ ಕರ್ತವ್ಯ ನಿರ್ವಹಿಸಲು ದಿನಾಂಕ: 13-07-2009 ರಂದು ಹೊಣೆಗಾರಿಕೆಯನ್ನು ಒಪ್ಪಿಕೊಂಡಿರುತ್ತೇನೆ.

ಸಹಿ:
ಪದನಾಮ: ಸಹಾಯಕ ಕಾರ್ಯಪಾಲಕ ಇಂಜಿನಿಯರ್
ಲೋ.ಬಂ ಮತ್ತು ಒ.ಜ.ಸ. ಇಲಾಖೆ
ನಂ.5 ಉಪ ವಿಭಾಗ, ಸಾಗರ
ದೂರವಾಣಿ:08183-226213

ಕರ್ತವ್ಯದ ಹಾಜರಾತಿ

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ – 2005 ಸೆಕ್ಷನ್ 5(2) ಪ್ರಕಾರ ಶ್ರೀ ಕೆ.ಜೆ ಭೀಮಾನಾಯ್ಕ್ ಸಹಾಯಕ ಇಂಜಿನಿಯರ್, ಆದ ನಾನು ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ (ಎ.ಪಿ.ಐ.ಓ) ಯಾಗಿ ಕರ್ತವ್ಯ ನಿರ್ವಹಿಸಲು ದಿನಾಂಕ: 23-10-2009 ರಂದು ಹೊಣೆಗಾರಿಕೆಯನ್ನು ಒಪ್ಪಿಕೊಂಡಿರುತ್ತೇನೆ.

ಪದನಾಮ: ಸಹಾಯಕ ಇಂಜಿನಿಯರ್
ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಛೇರಿ
ಲೋ.ಬಂ ಮತ್ತು ಒ.ಜ.ಸ. ಇಲಾಖೆ
ನಂ.5 ಉಪ ವಿಭಾಗ, ಸಾಗರ
ದೂರವಾಣಿ : 08183-226213

ಪಡೆಯುತ್ತಿರುವುದರಿಂದ ನೀರು ಬಳಸುವುದು ಸಹ ಕಷ್ಟವಾಗುತ್ತದೆ. ಆದ್ದರಿಂದ ಕಲುಷಿತ ನೀರನ್ನು ನದಿಗೆ ಹರಿಯುವುದನ್ನು ತಡೆಯುವ ಸಲುವಾಗಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು ಅತ್ಯವಶ್ಯಕವೆಂದು ಭಾವಿಸಿ ಅಂದಾಜು ತಯಾರಿಸಲಾಗಿದೆ.

2008-09ನೇ ಸಾಲಿನ ಮಂಡಳಿಯ ಮತ್ತು ಲೋಕೋಪಯೋಗಿ ಇಲಾಖೆಯ ದರಪಟ್ಟಿ ಅನುಸಾರ ಯೋಜನೆಯ ಅಂದಾಜನ್ನು ರೂ. 1052.00 ಲಕ್ಷಗಳಿಗೆ ಸಿದ್ದಪಡಿಸಿದ್ದು, ಈ ಕೆಳಕಂಡ ಆರ್ಥಿಕ ಮಾದರಿಯಲ್ಲಿ ಒಳಚರಂಡಿ ಯೋಜನೆ ಶೀರ್ಷಿಕೆಯಡಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕನನೀಸ ಮತ್ತು ಒಚ ಮಂಡಳಿರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆರ್ಥಿಕ ಸಂಸ್ಥೆಗಳ ಸಾಲ	50%	ರೂ. 526.00 ಲಕ್ಷಗಳು
ಕರ್ನಾಟಕ ಸರ್ಕಾರದ ಸಾಲ	30%	ರೂ. 315.00 ಲಕ್ಷಗಳು
ಪಟ್ಟಣ ಪಂಚಾಯತಿಯಿಂದ	20%	ರೂ. 210.40 ಲಕ್ಷಗಳು
		ಒಟ್ಟು ರೂ. 1052.00 ಲಕ್ಷಗಳು

ಸದರಿ ಯೋಜನೆಯನ್ನು 2009-10ನೇ ಸಾಲಿನ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕ್ರಿಯಾ ಯೋಜನೆಯ ಪ್ರವರ್ಗ-'ಡಿ' ಯಡಿಯಲ್ಲಿ ಸೇರಿಸಿ ಪ್ರಸ್ತುತ ಸಾಲಿನಲ್ಲಿ ರೂ. 351.00 ಲಕ್ಷಗಳನ್ನು ಅನುವು ಮಾಡಲಾಗಿದೆ.

ಮಂಡಳಿಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 03 ಯುಡಿಎಸ್ 2009, ಬೆಂಗಳೂರು, ದಿನಾಂಕ 08ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆ, ಟಿ.ನರಸೀಪುರ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಅಂದಾಜು ರೂ. 1052.00 ಲಕ್ಷಗಳಲ್ಲಿ (ರೂ. ಒಂದು ಸಾವಿರದ ಐವತ್ತೆರಡು ಲಕ್ಷಗಳು ಮಾತ್ರ) ಕಲ್ಪಿಸುವ ಯೋಜನೆಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು "ಒಳಚರಂಡಿ ಯೋಜನೆಯಡಿ" ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

1. No escalation charges are allowed and the estimates should be revised accordingly.
2. Water rates as proposed by KUWS & DB have to be implemented to meet O & M cost.
3. KTPP provisions, quality control and timely completion of the project should be ensured.
4. ETP and WCE and contingencies all together should be within 5% and the estimates should be revised accordingly.
5. ಸದರಿ ಕಾಮಗಾರಿಯನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ನ್ನು ಪಾಲಿಸುವುದು.
6. ಅಂದಾಜು ಪರಿಷ್ಕರಣೆಗೆ ಯಾವುದೇ ಅವಕಾಶ ನೀಡಕೂಡದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 07 Exp-9 : 2010, ದಿನಾಂಕ : 08-01-2010ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಸಿ.ಟಿ. ನಾರಾಯಣಸ್ವಾಮಿ)
ಪಿಆರ್-394 ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ನಗರಾಭಿವೃದ್ಧಿ ಸಚಿವಾಲಯ

ವಿಷಯ : ಬೈಲಹೊಂಗಲ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಅಂದಾಜು ರೂ. 5700.00 ಲಕ್ಷಗಳಲ್ಲಿ ಕಲ್ಪಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ : ವ್ಯ.ನಿ. ಕನನೀಸ ಮತ್ತು ಒಚ ಮಂಡಳಿ, ಬೆಂಗಳೂರು ರವರ ಪತ್ರ ಸಂಖ್ಯೆ :ಕಜಮಂ/ಮುಅ(ಉ)/ಉಮುಅ1/ತಾಸ4/ಸ.ಅ.2/ಒಚಯೋ/ಬೈಲಹೊಂಗಲ3726/ 2008-09 ದಿನಾಂಕ : 21-02-2009

ಪ್ರಸ್ತಾವನೆ :

ಬೈಲಹೊಂಗಲ ಪಟ್ಟಣವು ಬೆಳಗಾಂ ಜಿಲ್ಲೆಯ ತಾಲ್ಲೂಕು ಕೇಂದ್ರವಾಗಿದ್ದು, ಮಲಪ್ರಭಾ ನದಿಯ ಎಡದಂಡೆ ಮೇಲಿರುತ್ತದೆ. ಈ ಪಟ್ಟಣದ ಜನಸಂಖ್ಯೆಯು 2001ರ ಜನಗಣತಿ ಪ್ರಕಾರ 43.215 ಇದ್ದು, ಪ್ರಸ್ತುತ 50.000 ಇರುತ್ತದೆ. ಈ

ಪಟ್ಟಣಕ್ಕೆ ಮಲಪ್ರಭಾ ನದಿಯ ಮೂಲದಿಂದ 3ನೇ ಹಂತದ ಕುಡಿಯುವ ನೀರಿನ ಯೋಜನೆಯನ್ನು 2041ರಲ್ಲಿ ನಿರೀಕ್ಷಿಸಿದ 1,05,000 ಜನಸಂಖ್ಯೆಗೆ ತಲಾ ದಿನಂಪ್ರತಿ 135 ಲೀಟರ್ ನಂತೆ ನೀರು ಸರಬರಾಜು ಮಾಡಲು ಅವಕಾಶ ಕಲ್ಪಿಸಿ ರೂ. 34.00 ಕೋಟಿಗಳಲ್ಲಿ, ಕೈಗೆತ್ತಿಕೊಳ್ಳಲು ಸರ್ಕಾರವು ದಿನಾಂಕ : 12–01–2009 ರಂದು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶ ಹೊರಡಿಸಿದೆ.

ಪ್ರಸ್ತುತ ಬೈಲಹೊಂಗಲ ಪಟ್ಟಣದಲ್ಲಿ ಭಾಗಶಃ ಒಳಚರಂಡಿ ವ್ಯವಸ್ಥೆಯು ಸ್ಥಳೀಯ ಸಂಸ್ಥೆಯಿಂದ ಕೆಲವೇ ಬಡಾವಣೆಗಳಿಗೆ (613 ಮನೆಗಳು) ಒದಗಿಸಿದ್ದು ಉಳಿದಂತೆ ಒಳಚರಂಡಿ ತ್ಯಾಜ್ಯ ನೀರನ್ನು ಲಾಂಡ್ ಕೆ ನಾಲಾಗೆ ಬಿಡಲಾಗಿತ್ತಿದೆ. ಸ್ಥಳೀಯ ಸಂಸ್ಥೆಯಿಂದ ಒದಗಿಸಿರುವ ಒಳಚರಂಡಿ ವ್ಯವಸ್ಥೆಯ ಕೊಳವೆ ಮಾರ್ಗಗಳಲ್ಲಿ ಅನೇಕ ಅಡಚಣೆಗಳಾಗಿ ತ್ಯಾಜ್ಯ ನೀರು ಹೊರ ಹರಿದು ಪರಿಸರವನ್ನು ಹಾಳು ಮಾಡುತ್ತಿದೆ. ಪ್ರಸ್ತುತ ಈ ಪಟ್ಟಣಕ್ಕೆ 27 ವಾರ್ಡ್‌ಗಳಿದ್ದು, ಎಲ್ಲಾ ವಾರ್ಡ್‌ಗಳಿಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು ಮತ್ತು ಹಾಲಿ ಇರುವ ವ್ಯವಸ್ಥೆಯ ಪರ್ಯಾಯವಾಗಿ ಬೇರೆ ಒಳಚರಂಡಿ ಕೊಳವೆ ಮಾರ್ಗಗಳನ್ನು ಅಳವಡಿಸುವುದು ಹಾಗೂ ತ್ಯಾಜ್ಯ ನೀರನ್ನು ಶುದ್ಧೀಕರಿಸುವುದು ಅವಶ್ಯಕವಾಗಿರುತ್ತದೆ.

ಅದರಂತೆ, 2008–09ನೇ ಸಾಲಿನ ಮಂಡಳಿ ಹಾಗೂ ಲೋಕೋಪಯೋಗಿ ಇಲಾಖೆಯ ದರಪಟ್ಟಿಯನ್ನಾಧರಿಸಿ ರೂ. 57.00 ಕೋಟಿಗಳಿಗೆ ಅಂದಾಜನ್ನು ಸಿದ್ಧ ಪಡಿಸಿ ಈ ಕೆಳಕಂಡ ಆರ್ಥಿಕ ಮಾದರಿಯಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ರವರು ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆರ್ಥಿಕ ಸಂಸ್ಥೆಗಳ ಸಾಲ	50%	ರೂ. 2850.00 ಲಕ್ಷಗಳು
ಕರ್ನಾಟಕ ಸರ್ಕಾರದ ಸಾಲ	30%	ರೂ. 1710.00 ಲಕ್ಷಗಳು
ಸ್ಥಳೀಯ ಸಂಸ್ಥೆ ವಂತಿಕೆ	20%	ರೂ. 1140.00 ಲಕ್ಷಗಳು
	ಒಟ್ಟು	**ರೂ. 5700.00 ಲಕ್ಷಗಳು**

2009–10ನೇ ಸಾಲಿನ ಮಂಡಳಿಯ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಈ ಯೋಜನೆಯಲ್ಲಿ ಪ್ರವರ್ಗ–ಡಿ ಯಡಿಯಲ್ಲಿ ಸೇರಿಸಿ. ರೂ. 1900.00 ಲಕ್ಷಗಳ ಮೊತ್ತವನ್ನು ಅನುವು ಮಾಡಲಾಗಿದೆ.

ಮಂಡಳಿಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 08 ಯುಡಿಎಸ್ 2009, ಬೆಂಗಳೂರು, ದಿನಾಂಕ 08ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೈಲಹೊಂಗಲ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಅಂದಾಜು ರೂ. 5700.00 ಲಕ್ಷಗಳಲ್ಲಿ (ರೂ. ಐದು ಸಾವಿರದ ಏಳು ನೂರು ಲಕ್ಷಗಳು ಮಾತ್ರ) ಕಲ್ಪಿಸುವ ಯೋಜನೆಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು **"ಒಳಚರಂಡಿ ಯೋಜನೆಯಡಿ"** ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

1. No escalation charges are allowed and the estimates should be revised accordingly.
2. Water rates as proposed by KUWS & DB have to be implemented to meet O & M cost.
3. KTPP ad provisions, quality control and timely completion of the project should be ensured.
4. ETP and WCE and contingencies all together should be within 5% and the estimates should be revised accordingly.
5. ಸದರಿ ಕಾಮಗಾರಿಯನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ನ್ನು ಪಾಲಿಸುವುದು.
6. ಅಂದಾಜು ಪರಿಷ್ಕರಣೆಗೆ ಯಾವುದೇ ಅವಕಾಶ ನೀಡಕೂಡದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 03 Exp-9 : 2010, ದಿನಾಂಕ : 08–01–2010ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ. ನಾರಾಯಣಸ್ವಾಮಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ನಗರಾಭಿವೃದ್ಧಿ ಇಲಾಖೆ.

ಪಿಆರ್–395

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಶ್ರೀಮತಿ ಎಸ್. ಇಂದುಮತಿ, ಸರ್ಕಾರದ ಉಪ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರು ಬಯೋ–ಐಟಿ ಫೆಸಿಲಿಟಿ ಪ್ರಸ್ತಾವನೆ ಕುರಿತು ದೆಹಲಿಗೆ ಭೇಟಿ ನೀಡುವ ಕುರಿತು.

ಓದಲಾಗಿದೆ: 1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರ ಟಿಪ್ಪಣಿ ದಿನಾಂಕ 10–2–2010

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 10–02–2010ರ ಟಿಪ್ಪಣಿಯಲ್ಲಿ ಪ್ರಧಾನ ಕಾರ್ಯದರ್ಶಿಗಳು ಕೇಂದ್ರ ಮಾಹಿತಿ ಮಂತ್ರಾಲಯದ ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಿ ಐಬಿಎಬಿ ಸಂಸ್ಥೆಯ ಬಯೋ–ಐಟಿ ಫೆಸಿಲಿಟಿ ಪ್ರಸ್ತಾವನೆಯ ಬಗ್ಗೆ ಕೇಂದ್ರ ಸರ್ಕಾರದ ಅಧಿಕಾರಿಗಳನ್ನು ಭೇಟಿ ಮಾಡಲು ದಿನಾಂಕ 22–02–2010 ರಿಂದ 24–02–2010 ರವರೆಗೆ ದೆಹಲಿಗೆ ನಿಯೋಜಿಸಲು ನಿರ್ದೇಶಿಸಿರುತ್ತಾರೆ.

ಅದರಂತೆ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಮಾತಂಇ 06 ಡಿಐಎಸ್ 2010, ಬೆಂಗಳೂರು, ದಿನಾಂಕ:16–02–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀಮತಿ ಎಸ್. ಇಂದುಮತಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರು ಕೇಂದ್ರ ಸರ್ಕಾರದ ಮಾಹಿತಿ ತಂತ್ರಜ್ಞಾನ ಮಂತ್ರಾಲಯದ ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಿ ಬಯೋ–ಐಟಿ ಫೆಸಿಲಿಟಿಯ ಪ್ರಸ್ತಾವನೆಯನ್ನು ತ್ವರಿತಗೊಳಿಸಲು ದಿನಾಂಕ 22–02–2010 ರಿಂದ 24–02–2010 ರವರೆಗೆ ದೆಹಲಿಗೆ ಹೋಗಿ ಬರಲು ಅನುಮತಿಸಿದೆ.

ಸದರಿ ಅಧಿಕಾರಿಯು ದಿನಾಂಕ 21–02–2010 ರಂದು ಕೇಂದ್ರ ಸ್ಥಾನ ಬಿಟ್ಟು ದಿನಾಂಕ 24–02–2010 ರಂದು ಕೇಂದ್ರ ಸ್ಥಾನಕ್ಕೆ ಹಿಂದಿರುಗುವಂತೆ ಆದೇಶಿಸಿದೆ, ಮತ್ತು ಸದರಿ ಅಧಿಕಾರಿಯ ಪ್ರವಾಸದ ಅವಧಿಯ ಗೈರುಹಾಜರಿಯನ್ನು ಕರ್ತವ್ಯದ ಮೇಲೆ ಎಂದು ಪರಿಗಣಿಸಿ, ಅಧಿಕಾರಿಯವರು ಪ್ರವಾಸದ ಅವಧಿಗೆ ನಿಯಮರೀತ್ಯ ಸಾರಿಗೆ ಭತ್ಯೆ, ದಿನ ಭತ್ಯೆ ಇತ್ಯಾದಿಗಳಿಗೆ ಅರ್ಹರಾಗಿರುತ್ತಾರೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ. ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10–07–1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.446

ಎಮ್.ವಿ.ಕೃಷ್ಣಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಬೆಂಗಳೂರಿನ ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಹೋಮಿಯೋಪತಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಪದವಿ ಪ್ರಾರಂಭಿಸಲು ವಿದ್ಯಾಲಯದ ಆಸ್ಪತ್ರೆಯನ್ನು 40 ಹಾಸಿಗೆಯಿಂದ 100 ಹಾಸಿಗೆ ಮಟ್ಟಕ್ಕೆ ಉನ್ನತೀಕರಿಸಲು ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ: 1. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಆಯುಷ್/24/ **ಬಿಯುಡಿ(1)/2007**–08, ದಿನಾಂಕ: 16–07–2008, 18–05–2009, 11–08–2009 ಹಾಗೂ **ಸಂಖ್ಯೆ** : ಆಯುಷ್/24/ಬಿಯುಡಿ(1)/2009–10, ದಿನಾಂಕ: 18–11–2009.

ಪ್ರಸ್ತಾವನೆ :

ಮೇಲೆ ಓದಲಾದ ಆಯುಷ್ ನಿರ್ದೇಶಕರ ಪತ್ರಗಳಲ್ಲಿ, ಕರ್ನಾಟಕದಲ್ಲಿ ಒಂದು ಸರ್ಕಾರಿ ಹೋಮಿಯೋಪತಿ ಮಹಾವಿದ್ಯಾಲಯವು ಕಾರ್ಯನಿರ್ವಹಿಸುತ್ತಿದ್ದು, ಸದರಿ ಮಹಾ ವಿದ್ಯಾಲಯದಲ್ಲಿ ಐದು ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ತರಗತಿಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಕೇಂದ್ರದ ಸಿ.ಸಿ.ಹೆಚ್. (Central Council of Homoeopathy)

ನಿಯಮದಂತೆ ಕನಿಷ್ಟ 100 ಹಾಸಿಗೆಗಳ ಆಸ್ಪತ್ರೆಯು ಅಗತ್ಯವಾಗಿರುತ್ತದೆ. 40 ಹಾಸಿಗೆಗಳ ಆಸ್ಪತೆಯಲ್ಲಿ ಮಂಜೂರಾಗಿರುವ ಹುದ್ದೆಗಳು ಮತ್ತು ಸಿ.ಸಿ.ಹೆಚ್. ನಾರ್ಮ್ಸ್ ಪ್ರಕಾರ 100 ಹಾಸಿಗೆಗಳ ಆಸ್ಪತ್ರೆಗೆ ಅವಶ್ಯವಿರುವ ಹೆಚ್ಚುವರಿ ಅಧಿಕಾರಿ/ಸಿಬ್ಬಂದಿ ಹುದ್ದೆಗಳನ್ನು ಪ್ರಸ್ತಾವನಾ ಪ್ರಪತ್ರ (ಪ್ರಿಪೋಷಿಷನ್ ಸ್ಟೇಟ್‌ಮೆಂಟ್) ವನ್ನು ಸಲ್ಲಿಸುತ್ತಾ, ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2210-05-102-0-02 ಯೋಜನೆಯಡಿಯಲ್ಲಿ ಭರಿಸಲು ಕ್ರಮ ಕೈಗೊಳ್ಳಲಾಗುವುದು ಹಾಗೂ 2010-11ನೇ ಸಾಲಿಗೆ ಅವಶ್ಯಕ ಅನುದಾನವನ್ನು ಒದಗಿಸಿಕೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

ಮುಂದುವರೆಸುತ್ತಾ, ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಬೇಕಾದ ಸ್ಥಳವಕಾಶ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳ ಲಭ್ಯತೆ ಬಗ್ಗೆ ಮಾಹಿತಿ ನೀಡುತ್ತಾ, ಪ್ರಿಪೋಸಿಷನ್ ಸ್ಟೇಟ್‌ಮೆಂಟ್‌ನಲ್ಲಿ ಕೋರಿರುವ ಹುದ್ದೆಗಳಿಗೆ ಮಂಜೂರಾತಿ ನೀಡುವುದರೊಂದಿಗೆ ಸದರಿ ಆಸ್ಪತ್ರೆಯನ್ನು 40 ರಿಂದ 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲು ಸರ್ಕಾರದ ಮಂಜೂರಾತಿ ನೀಡಲು ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಅಕುಕ 210 ಪಿಟಿಡಿ 2009, ಬೆಂಗಳೂರು, ದಿನಾಂಕ: 3ನೇ ಫೆಬ್ರವರಿ 2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರಿನಲ್ಲಿರುವ ಸರ್ಕಾರಿ ಹೋಮಿಯೋಪತಿ ಮಹಾವಿದ್ಯಾಲಯದಲ್ಲಿ ಹೋಮಿಯೋಪತಿ ಶಿಕ್ಷಣ ಪಡೆಯುವ ವಿದ್ಯಾಕಾಂಕ್ಷಿಗಳ ಹಿತದೃಷ್ಟಿಯಿಂದ ಸ್ನಾತಕೋತ್ತರ ಪದವಿ ಆರಂಭಿಸಲು ಈಗಿರುವ 40 ಹಾಸಿಗೆಗಳ ಆಸ್ಪತ್ರೆಯನ್ನು 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲು ಅನುಮತಿಸಿದೆ.

100 ಹಾಸಿಗೆಗಳ ಆಸ್ಪತ್ರೆಗೆ ಅನುಗುಣವಾಗಿ ಅಗತ್ಯವಿರುವ ಈ ಕೆಳಕಂಡ 39 ಹುದ್ದೆಗಳನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ಹೆಚ್ಚುವರಿಯಾಗಿ ಸೃಜಿಸಲು ಸರ್ಕಾರವು ಅನುಮತಿ ನೀಡಿದೆ. ಸದರಿ ಹುದ್ದೆಗಳ ಪೈಕಿ 20 ಬೋಧಕ ಸಿಬ್ಬಂದಿಯ ವೇತನ ಭತ್ಯೆಯ ಪೂರ್ಣ ವೆಚ್ಚಗಳನ್ನು ಐದು ವರ್ಷದ ಅವಧಿಗೆ ಕೇಂದ್ರ ಸರ್ಕಾರದ ಸಹಾಯನುದಾನದಿಂದ ಭರಿಸುವುದು.

ಕ್ರ.ಸಂ.	ಹುದ್ದೆಗಳ ಪದನಾಮ	ವೇತನ ಶ್ರೇಣಿ (ರೂ.ಗಳಲ್ಲಿ)	ಹುದ್ದೆಗಳ ಸಂಖ್ಯೆ
1	ಉಪ ವೈದ್ಯಕೀಯ ಅಧೀಕ್ಷಕರು	14300-19250	1
2	ವೈದ್ಯಾಧಿಕಾರಿಗಳು ದರ್ಜೆ-2	13000-23850	4
3	ಶಸ್ತ್ರ ಚಿಕಿತ್ಸಕರು	14050-25050	1
4.	ಅನಸ್ಥೆಟಿಸ್ಟ್	14050-25050	1
5	ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞರು	14050-25050	1
6	ಹಿರಿಯ ವೈದ್ಯರು (ಔಷಧಿ)	14050-25050	1
7	ಕ್ಷ-ಕಿರಣ ತಜ್ಞರು (ರೇಡಿಯಾಲಜಿಸ್ಟ್)	14050-25050	1
8	ಪೆಥಾಲಜಿಸ್ಟ್	14050-25050	1
9	ಬಯೋಕೆಮಿಸ್ಟ್	14050-25050	1
10	ಹೌಸ್ ಸ್ಟಾಫ್ / ವೈದ್ಯರು ದರ್ಜೆ-2	13000-23850	8
11	ರೇಡಿಯೋಗ್ರಾಫರ್	7275-13350	1
12	ಪ್ರಯೋಗ ಶಾಲಾ ತಂತ್ರಜ್ಞರು	7275-13350	1
13	ಕ್ಷ-ಕಿರಣ ತಂತ್ರಜ್ಞರು	7275-13350	1
14	ಡ್ರೆಸ್ಸರ್	5200-8200	2
15	ಮೆಟ್ರನ್ / ದಾದಿಯರ ಅಧೀಕ್ಷಕರು ದರ್ಜೆ-2	10800-20025	1
16	ಶುಶ್ರೂಷಕಿಯರು	8825-16000	14
	ಒಟ್ಟು		**40**
	ಈಗಾಗಲೇ ಮಂಜೂರಾಗಿರುವ ವೇತನ ಶ್ರೇಣಿ ರೂ.7275-13350ರ ನಾಲ್ಕು ಔಷಧಿ ವಿತರಕರ ಹುದ್ದೆಗಳ ಪೈಕಿ ಒಂದು ಹುದ್ದೆಯನ್ನು ರದ್ದುಗೊಳಿಸಲಾಗಿದೆ.		-1
	ಒಟ್ಟು		**39**

ಕ್ರ.ಸಂ. (1)ನ್ನು ಹೊರತುಪಡಿಸಿ ಉಳಿದ ಮೇಲಿನ ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬತಕ್ಕದ್ದು. The Karnataka Indian Systems of Medicine & Homeopathy (Collegiate Branch of Homeopathy) (Recruitment) Rules, 1994 ನಿಯಮಗಳಿಗೆ ಸೂಕ್ತ ತಿದ್ದುಪಡಿ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ : ಆಇ 1476 ವೆಚ್ಚ – 5 / 2009, ದಿನಾಂಕ : 02-01-2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.447

ಎನ್. ಮಹಾಲಕ್ಷ್ಮಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ತಿದ್ದುಪಡಿ

ಸಂಖ್ಯೆ : ಆಕುಕ 718 ಹೆಚ್‌ಎಸ್‌ಹೆಚ್ 2008, ಬೆಂಗಳೂರು, ದಿನಾಂಕ 06-02-2010

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವೃಂದದ ವೈದ್ಯಾಧಿಕಾರಿ/ದಂತ ಆರೋಗ್ಯಾಧಿಕಾರಿಗಳಿಗೆ ಹೆಚ್ಚುವರಿಯಾಗಿ ವಿವಿಧ ಭತ್ಯೆಗಳನ್ನು ಮಂಜೂರು ಮಾಡಿ ಹೊರಡಿಸಲಾದ ಆದೇಶ ಸಂಖ್ಯೆ: ಆಕುಕ 718 ಹೆಚ್‌ಎಸ್‌ಹೆಚ್ 2008 ದಿನಾಂಕ 10-12-2009ರ ಆದೇಶ ಭಾಗದ ಮೊದಲ ಕಂಡಿಕೆಯ ಮೂರನೇ ಸಾಲಿನಲ್ಲಿ " ತಕ್ಷಣದಿಂದ ಜಾರಿಗೆ ಬರುವಂತೆ" ಎಂಬುದರ ಬದಲಾಗಿ "ದಿನಾಂಕ 01-10-2009 ರಿಂದ ಜಾರಿಗೆ ಬರುವಂತೆ" ಎಂದು ಓದಿಕೊಳ್ಳತಕ್ಕದ್ದು.

ಮುಂದುವರೆದು, ಸದರಿ ಆದೇಶದಲ್ಲಿ "ವಿವರಣೆ" ಕಂಡಿಕೆ ನಂತರ ಈ ಕೆಳಕಂಡ ಕಂಡಿಕಯೆನ್ನು ಸೇರ್ಪಡೆಯಾಗಿ ಓದಿಕೊಳ್ಳತಕ್ಕದ್ದು.

"ಅಕ್ಟೋಬರ್ 2009 ಮತ್ತು ನವೆಂಬರ್ 2009ರ ಭತ್ಯೆಗಳ ಬಾಕಿ ಮೊತ್ತವನ್ನು ಬಳ್ಳಾರಿ ನಗರದಲ್ಲಿ ನಿರ್ಮಾಣಗೊಳ್ಳಲಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿನ ಒಂದು ಸಂಕೀರ್ಣವನ್ನು ನಿರ್ಮಿಸುವ ಸಲುವಾಗಿ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ದೇಣಿಗೆಯಾಗಿ ಮುರಿದುಕೊಳ್ಳತಕ್ಕದ್ದು.

" ಮೇಲಿನ ಉದ್ದೇಶಕ್ಕಾಗಿ ಎರಡು ತಿಂಗಳ ಬಾಕಿ ಭತ್ಯೆಗಳ ಮೊತ್ತವನ್ನು ತಮ್ಮ ವೇತನ ಬಾಕಿ ಬಿಲ್ಲಿನಿಂದ ಕಟಾಯಿಸುವಂತೆ ಎಲ್ಲಾ ವೈದ್ಯಾಧಿಕಾರಿಗಳು ಸಂಬಂಧಪಟ್ಟ ವೇತನ ಸೆಳೆಯುವ ಅಧಿಕಾರಿಗಳಿಗೆ ಅವರಿಗೆ ತಿಳುವಳಿಕೆ ನೀಡಿದ ಒಂದು ವಾರದೊಳಗೆ ತಮ್ಮ ಒಪ್ಪಿಗೆಯನ್ನು ಲಿಖಿತ ಮೂಲಕ ನೀಡಲು ಸೂಚಿಸಲಾಗಿದೆ. ಒಂದು ವಾರದೊಳಗೆ ಅವರ ಅಭ್ಯಂತರ/ಒಪ್ಪಿಗೆ ಪತ್ರ ಬಾರದಿದ್ದಲ್ಲಿ ಯಾವುದೇ ಅಭ್ಯಂತರವಿಲ್ಲವೆಂದು ಪರಿಗಣಿಸಿ, ಮೇಲ್ಕಂಡ ಉದ್ದೇಶಕ್ಕೆ ಸದರಿ ಬಾಕಿ ಮೊತ್ತವನ್ನು ಉಪಯೋಗಿಸಿಕೊಳ್ಳಲಾಗುವುದು.

"ಆದರೆ, ಈ ಎರಡು ತಿಂಗಳ ಬಾಕಿ ಭತ್ಯೆ ಮೊತ್ತವನ್ನು ವೈದ್ಯಾಧಿಕಾರಿಗಳ ವೇತನ ಬಿಲ್ಲುಗಳಿಂದ ಕಟಾಯಿಸಿ ಯಾವ ಲೆಕ್ಕಕ್ಕೆ ಜಮೆ ಮಾಡಬೇಕೆಂದು ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಉಳಿದಂತೆ, ಮಂಜೂರಾಗಿರುವ ಹೆಚ್ಚುವರಿ ಭತ್ಯೆಗಳ ಆರ್ಥಿಕ ಸೌಲಭ್ಯವನ್ನು ನೀಡಲು ಆದೇಶಿಸಿದೆ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.448

ಐ. ಹೇಮನಾಥ್
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು-1)

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಬಾರಕ್ ಉಲ್ಲಾ ಹುಸೈನಿ, ಸಹಾಯಕ ಸರ್ಕಾರಿ ಅಭಿಯೋಜಕರು, ಸಿ.ಜೆ. (ಕಿವಿ) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಾಲೂರು ಇವರ ಪರಿವೀಕ್ಷಣಾ ಅವಧಿಯನ್ನು ವಿಸ್ತರಿಸಿ, ತೃಪ್ತಿಕರವೆಂದು ಘೋಷಿಸುವ ಕುರಿತು.

ಓದಲಾಗಿದೆ: 1. ಸರ್ಕಾರದ ಅಧಿಸೂಚನೆ ನಂ. ಒಇ 845 ಪಿಪಿಇ 2005, ದಿನಾಂಕ 03-05-2006.
2. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂಖ್ಯೆ: ಡಿಪಿಎನ್/ ಸಿಶಾ.1/20/2006-07, ದಿನಾಂಕ 02-11-2009.

ಪ್ರಸ್ತಾವನೆ :

ಶ್ರೀ ಬಾರಕ್ ಉಲ್ಲಾ ಹುಸೈನಿ, ಸಹಾಯಕ ಸರ್ಕಾರಿ ಅಭಿಯೋಜಕರು, ಸಿ.ಜೆ. (ಕಿವಿ) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಾಲೂರು ಇವರು ಮೇಲೆ (1)ರಲ್ಲಿ ಓದಲಾದ ದಿನಾಂಕ 03-05-2006ರ (ಕ್ರ.ಸಂ.16) ಅಧಿಸೂಚನೆಯಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗೆ ನೇಮಕಗೊಂಡು, ದಿನಾಂಕ 09-05-2006ರ ಪೂರ್ವಾಹ್ನದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಅಧಿಕಾರಿಯ ಎರಡು ವರ್ಷಗಳ ಪರಿವೀಕ್ಷಣಾ ಅವಧಿಯು ದಿನಾಂಕ 08-05-2008ಕ್ಕೆ ಪೂರ್ಣಗೊಂಡಿರುತ್ತದೆ. ಹುದ್ದೆಗೆ ನಿಗಧಿಪಡಿಸಿದ್ದ ಇಲಾಖಾ ಪರೀಕ್ಷೆಗಳಲ್ಲಿ ಒಂದಾದ ಕನ್ನಡ ಭಾಷಾ ಪರೀಕ್ಷೆಯನ್ನು ಪರಿವೀಕ್ಷಣಾ ಅವಧಿಯಲ್ಲಿ ಉತ್ತೀರ್ಣತೆ ಹೊಂದದೆ, ನಂತರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿರುತ್ತಾರೆ. ಸದರಿ ಪರೀಕ್ಷಾ ಫಲಿತಾಂಶವು ದಿನಾಂಕ 02-07-2009ರ ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟವಾಗಿರುತ್ತದೆ. ಉಳಿದ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್ ಮತ್ತು ಜನರಲ್ ಲಾ ಭಾಗ-1ನ್ನು ಪರೀಕ್ಷೆಗಳನ್ನು ಪರಿವೀಕ್ಷಣಾ ಅವಧಿಯೊಳಗೆ ಪಾಸು ಮಾಡಿರುತ್ತಾರೆ.

2. ಈ ಅಧಿಕಾರಿಯವರಿಗೆ ಸಂಬಂಧಪಟ್ಟಂತೆ 2006-07, 2007-08 ಮತ್ತು 2008-09ನೇ ಸಾಲಿನ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳಲ್ಲಿ ವರದಿಗಳಲ್ಲಿ ಸದರಿ ಅಧಿಕಾರಿಯವರ ವಿರುದ್ಧ ಯಾವುದೇ ವ್ಯತಿರಿಕ್ತ ಷರಾ ಇರುವುದಿಲ್ಲ. ಅಧಿಕಾರಿಯವರು ಸದರಿ ಅವಧಿಯಲ್ಲಿ ಇಲಾಖೆಯ ಅವಕೃಪೆಗೆ ಒಳಗಾಗಿರುವುದಿಲ್ಲ ಮತ್ತು ಇವರ ಮೇಲೆ ಯಾವುದೇ ಇಲಾಖಾ ವಿಚಾರಣೆಯನ್ನು ಹೂಡಿರುವುದಿಲ್ಲ ಹಾಗೂ ಸದ್ಯದ ಪರಿಸ್ಥಿತಿಯಲ್ಲಿ ಹೂಡುವ ಅವಶ್ಯಕತೆಯು ಇರುವುದಿಲ್ಲ.

3. ಆದುದರಿಂದ ಸದರಿ ಅಧಿಕಾರಿಯವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು 1977ರ ನಿಯಮ 4ರ ಉಪ ನಿಯಮ 1(i)ರ ಅನ್ವಯ ದಿನಾಂಕ 09-05-2008 ರಿಂದ 02-07-2009ರವರೆಗೆ ವಿಸ್ತರಿಸಿ, ಸದರಿ ನಿಯಮಾವಳಿಯ ನಿಯಮ 5(1)(ಎ)ರ ಅನುಸಾರ ದಿನಾಂಕ 03-07-2009ರಿಂದ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸುವಂತೆ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 448 ಪಿಪಿಇ 2009, ಬೆಂಗಳೂರು, ದಿನಾಂಕ: 10ನೇ ಫೆಬ್ರವರಿ 2010.

(ಆ) ಹಂಚಿಕೆದಾರರು ಈ ಆದೇಶ ಹೊರಡಿಸಿದ 45 ದಿನಗಳ ಒಳಗಾಗಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆ ತಂತಾನೇ ರದ್ದಾಗುವುದು. ನಂತರ, ಕಂಪನಿಯು ಹಂಚಿಕೆಗೋಸ್ಕರ ಪುನಃ ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು. ಯಾವ ಕಾರಣಕ್ಕೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಸ್ವೀಕರಿಸಿದ ಅರ್ಜಿ ಪರಿಷ್ಕರಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ

(ಇ) ಒಡಂಬಡಿಕೆಯನ್ನು ರೂ. 400.00 ಛಾಪಾ ಕಾಗದದ ಮೇಲೆ ಮಾಡಿಕೊಂಡು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದವರಿಗೆ ಕಳುಹಿಸಿ ಪ್ರಮಾಣೀಕರಿಸಿ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

(ಈ) ಈ ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್) ಪರಿಷ್ಕರಿಸಲು ಮೆಗಾವಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.

2(ಅ) ಯೋಜನಾ ಅಭಿವೃದ್ಧಿದಾರರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಂದಲೂ ಅಂದರೆ ಜಲಸಂಪನ್ಮೂಲ ಇಲಾಖೆ, ಅರಣ್ಯ, ಜೀವಿಶಾಸ್ತ್ರ & ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕಂದಾಯ ಇಲಾಖೆಗಳಿಂದ ಕ್ಲಿಯರೆನ್ಸ್‌ಗಾಗಿ ಅರ್ಜಿ ಸಲ್ಲಿಸತಕ್ಕದ್ದು. ಒಡಂಬಡಿಕೆ ಮಾಡಿಕೊಂಡ ಒಂದು ವರ್ಷದೊಳಗಾಗಿ ವಿವರವಾದ ಯೋಜನಾ ವರದಿಯನ್ನು ಸಲ್ಲಿಸತಕ್ಕದ್ದು.

(ಆ) ಹಂಚಿಕೆದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಠೇವಣಿ ಇಡುವ ಹಣವನ್ನು, ವಿವರವಾದ ಯೋಜನಾ ವರದಿಯನ್ನು (ಡಿಪಿಆರ್) ಅವಿಷ್ಕರಿಸುವುದಕ್ಕೋಸ್ಕರ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

3. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಯೋಜನಾ ವರದಿಗೆ ತಾಂತ್ರಿಕ ಅನುಮೋದನೆ ಕೊಟ್ಟ ಆರು ತಿಂಗಳ ಒಳಗಾಗಿ ಫೈನಾನ್ಷಿಯಲ್ ಕ್ಲೋಷರ್‌ನ್ನು ಸಾಧಿಸತಕ್ಕದ್ದು.

4. ಫೈನಾನ್ಷಿಯಲ್ ಕ್ಲೋಷರ್‌ನ್ನು ಸಾಧಿಸಿದ 24 ತಿಂಗಳ ಒಳಗಾಗಿ ಯೋಜನೆಯನ್ನು ಮುಗಿಸುವ ನಿಟ್ಟಿನಲ್ಲಿ ಹಂಚಿಕೆದಾರರು ಕಾರ್ಯಪ್ರವೃತ್ತರಾಗತಕ್ಕದ್ದು.

5. ಮೇಲೆ ತಿಳಿಸಿದ 2, 3 ಮತ್ತು 4 ಅಂಶಗಳ ಯೋಜನಾ ಅನುಷ್ಠಾನ ಮಾಡಲು ಸಫಲವಾಗದಿದ್ದಲ್ಲಿ ಈ ಹಂಚಿಕೆಯು ತಂತಾನೇ ಯಾವ ಮುನ್ಸೂಚನೆಯನ್ನೂ ನೀಡದೆ ರದ್ದಾಗುವುದೆಂದು ತಿಳಿಯತಕ್ಕದ್ದು.
6. ಯೋಜನಾ ಅಭಿವೃದ್ಧಿದಾರರು ವಿದ್ಯುತ್ತನ್ನು ಮೂರನೆಯವರಿಗೆ ಮಾರಾಟ ಮಾಡುವ ಸಂದರ್ಭದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ವಿದ್ಯುತ್ತನ್ನು ಮಾರಾಟ ಮಾಡುವ ಸಂದರ್ಭದಲ್ಲಿ ವಿದ್ಯುತ್ ಖರೀದಿ ಒಡಂಬಡಿಕೆ (ಪಿಪಿಎ) ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.
7. ಈ ವಿಷಯದಲ್ಲಿ ಹಂಚಿಕೆದಾರರು ರಾಜ್ಯ ಮತ್ತು ಜಿಲ್ಲಾ ಮಟ್ಟಕ್ಕೆ ಸಂಬಂಧಿಸಿದ ಅಧಿಕಾರಿಗಳ ಸಹಾಯ / ಸಹಕಾರವನ್ನು ಪಡೆದು ನಿಗದಿತ ಅವಧಿಯೊಳಗೆ ಯೋಜನಾ ಅನುಷ್ಠಾನ ಪೂರ್ಣಗೊಳಿಸತಕ್ಕದ್ದು.
8. ಈ ಕಿರು ಜಲ ವಿದ್ಯುತ್ ಯೋಜನೆಯ ಸ್ಥಳದಲ್ಲಿ ಯಾವುದಾದರು ಸರ್ಕಾರಿ ಜಲ ವಿದ್ಯುತ್ / ನೀರಾವರಿ / ಕುಡಿಯುವ ನೀರಿನ ಯೋಜನೆಗಳು ಬಂದಲ್ಲಿ ಸರ್ಕಾರಿ ಯೋಜನೆಗಳಿಗೆ ಮೊದಲ ಆದ್ಯತೆ ದೊರಕುವುದು ಹಾಗೂ ಈ ಯೋಜನೆಗೆ ಯಾವುದಾದರೂ ಇತರೆ ಯೋಜನೆಗಳಿಂದ ಧಕ್ಕೆಯಾದ್ದಲ್ಲಿ ಯಾವುದೇ ಪರಿಹಾರವನ್ನು ಅಭಿವೃದ್ಧಿದಾರರು ನಿರೀಕ್ಷಿಸುವಂತಿಲ್ಲ.
9. ಸ್ಥಳೀಯವಾಗಿ ಉದ್ಭವಿಸುವ ಯಾವುದಾದರೂ ಆಕ್ಷೇಪಣೆಗಳಿಗೆ ಅಭಿವೃದ್ಧಿದಾರರೇ ಸಂಪೂರ್ಣವಾಗಿ ಹೊಣೆಗಾರರಾಗಿರುತ್ತಾರೆ.
10. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ಯಾವುದೇ ಯೋಜನೆಗಳಿಂದಾಗಿ ಸದರಿ ಯೋಜನೆಯು ಮುಳುಗಡೆಯಾದಲ್ಲಿ, ಒದಗಬಹುದಾದ ಸಂಪೂರ್ಣ ತೊಂದರೆಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.
11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.
12. ಡಿ.ಪಿ.ಆರ್. ತಯಾರು ಮಾಡಿದ ಮೇಲೆ ಕ್ರೆಡಲ್ ಸಂಸ್ಥೆಯು ಪರಿಶೀಲಿಸಿದ ನಂತರ ಇತರ ಸಂಬಂಧಿಸಿದ ಇಲಾಖೆಗಳಿಗೆ ಡಿ.ಪಿ.ಆರ್. ಸಲ್ಲಿಸುವುದು ಹಾಗೂ ತದನಂತರ ತಾಂತ್ರಿಕ ಅನುಮೋದನೆಗಾಗಿ ಕ್ರೆಡಲ್‌ಗೆ ಅರ್ಜಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.487

(ಎಸ್. ಜೆ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : M/s Godchinmallki Power Private Limited ಇವರಿಗೆ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/06/ಗೊಡ್ಚಿನ್‌ಮಲ್ಕಿ/2007/917 ದಿನಾಂಕ 24/25-04-2007.

2. ದಿನಾಂಕ 13-2-2009 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರಗಳಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Godchinmallki Power Private Limited ಇವರಿಗೆ ಬೆಳಗಾಂ ಜಿಲ್ಲೆಯ ಗೋಕಾಕ್ ತಾಲ್ಲೂಕಿನ ಗೊಡ್ಚಿನ್‌ಮಲ್ಕಿ ಗ್ರಾಮದ ಬಳಿ ಮಾರ್ಕಂಡೇಯ ನದಿಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ನಡವಳಿಯ ಪ್ರಕಾರ ದಿನಾಂಕ: 13-2-2009ರಂದು ಜರುಗಿದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Godchinmallki Power Private Limited ಇವರಿಗೆ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಒಪ್ಪಿಗೆ ನೀಡಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ: ಇಎನ್ 153 ಎನ್‌ಸಿಇ 2007, ಬೆಂಗಳೂರು, ದಿನಾಂಕ: 17ನೇ ಫೆಬ್ರವರಿ 2010.

M/s Godchinmailki Power Private Limited ಇವರಿಗೆ ಬೆಳಗಾಂ ಜಿಲ್ಲೆಯ ಗೋಕಾಕ್ ತಾಲ್ಲೂಕಿನ ಗೊಡ್ಚಿನ್‌ಮಲ್ಕಿ ಗ್ರಾಮದ ಬಳಿ ಮಾರ್ಕಂಡೆಯ ನದಿಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿದೆ.:-

1(ಅ) ಸದರಿ ಯೋಜನೆಯಿಂದ ಕೆಳತೊರೆ ಮತ್ತು ಮೇಲ್ತೊರೆ ಯೋಜನೆಗಳಿಗೆ ಯಾವುದೇ ಹಾನಿಯಾಗಬಾರದು.

(ಆ) ಹಂಚಿಕೆದಾರರು ಈ ಆದೇಶ ಹೊರಡಿಸಿದ 45 ದಿನಗಳ ಒಳಗಾಗಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆ ತಂತಾನೇ ರದ್ದಾಗುವುದು. ನಂತರ, ಕಂಪನಿಯು ಹಂಚಿಕೆಗೋಸ್ಕರ ಪುನಃ ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು. ಯಾವ ಕಾರಣಕ್ಕೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಸ್ವೀಕರಿಸಿದ ಅರ್ಜಿ ಪರಿಷ್ಕರಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ

(ಇ) ಒಡಂಬಡಿಕೆಯನ್ನು ರೂ. 400.00 ಛಾಪಾ ಕಾಗದದ ಮೇಲೆ ಮಾಡಿಕೊಂಡು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದವರಿಗೆ ಕಳುಹಿಸಿ ಪ್ರಮಾಣೀಕರಿಸಿ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

(ಈ) ಈ ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್) ಪರಿಷ್ಕರಿಸಲು ಮೆಗಾವಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.

2(ಅ) ಯೋಜನಾ ಅಭಿವೃದ್ಧಿದಾರರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಂದಲೂ ಅಂದರೆ ಜಲಸಂಪನ್ಮೂಲ ಇಲಾಖೆ, ಅರಣ್ಯ, ಜೀವಿಶಾಸ್ತ್ರ & ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕಂದಾಯ ಇಲಾಖೆಗಳಿಂದ ಕ್ಲಿಯರೆನ್ಸ್‌ಗಾಗಿ ಅರ್ಜಿ ಸಲ್ಲಿಸತಕ್ಕದ್ದು. ಒಡಂಬಡಿಕೆ ಮಾಡಿಕೊಂಡ ಒಂದು ವರ್ಷದೊಳಗಾಗಿ ವಿವರವಾದ ಯೋಜನಾ ವರದಿಯನ್ನು ಸಲ್ಲಿಸತಕ್ಕದ್ದು.

(ಆ) ಹಂಚಿಕೆದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಠೇವಣಿ ಇಡುವ ಹಣವನ್ನು, ವಿವರವಾದ ಯೋಜನಾ ವರದಿಯನ್ನು (ಡಿಪಿಆರ್) ಆವಿಷ್ಕರಿಸುವುದಕ್ಕೋಸ್ಕರ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

3. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಯೋಜನಾ ವರದಿಗೆ ತಾಂತ್ರಿಕ ಅನುಮೋದನೆ ಕೊಟ್ಟ ಆರು ತಿಂಗಳ ಒಳಗಾಗಿ ಫೈನಾನ್ಷಿಯಲ್ ಕ್ಲೋಷರ್‌ನ್ನು ಸಾಧಿಸತಕ್ಕದ್ದು.

4. ಫೈನಾನ್ಷಿಯಲ್ ಕ್ಲೋಷರ್‌ನ್ನು ಸಾಧಿಸಿದ 24 ತಿಂಗಳ ಒಳಗಾಗಿ ಯೋಜನೆಯನ್ನು ಮುಗಿಸುವ ನಿಟ್ಟಿನಲ್ಲಿ ಹಂಚಿಕೆದಾರರು ಕಾರ್ಯಪ್ರವೃತ್ತರಾಗತಕ್ಕದ್ದು.

5. ಮೇಲೆ ತಿಳಿಸಿದ 2, 3 ಮತ್ತು 4 ಅಂಶಗಳ ಯೋಜನಾ ಅನುಷ್ಠಾನ ಮಾಡಲು ಸಫಲವಾಗದಿದ್ದಲ್ಲಿ ಈ ಹಂಚಿಕೆಯು ತಂತಾನೇ ಯಾವ ಮುನ್ಸೂಚನೆಯನ್ನೂ ನೀಡದೆ ರದ್ದಾಗುವುದೆಂದು ತಿಳಿಯತಕ್ಕದ್ದು.

6. ಯೋಜನಾ ಅಭಿವೃದ್ಧಿದಾರರು ವಿದ್ಯುತ್ತನ್ನು ಮೂರನೆಯವರಿಗೆ ಮಾರಾಟ ಮಾಡುವ ಸಂದರ್ಭದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ವಿದ್ಯುತ್ತನ್ನು ಮಾರಾಟ ಮಾಡುವ ಸಂದರ್ಭದಲ್ಲಿ ವಿದ್ಯುತ್ ಖರೀದಿ ಒಡಂಬಡಿಕೆ (ಪಿಪಿಎ) ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

7. ಈ ವಿಷಯದಲ್ಲಿ ಹಂಚಿಕೆದಾರರು ರಾಜ್ಯ ಮತ್ತು ಜಿಲ್ಲಾ ಮಟ್ಟಕ್ಕೆ ಸಂಬಂಧಿಸಿದ ಅಧಿಕಾರಿಗಳ ಸಹಾಯ / ಸಹಕಾರವನ್ನು ಪಡೆದು ನಿಗದಿತ ಅವಧಿಯೊಳಗೆ ಯೋಜನಾ ಅನುಷ್ಠಾನ ಪೂರ್ಣಗೊಳಿಸತಕ್ಕದ್ದು.

8. ಈ ಕಿರು ಜಲ ವಿದ್ಯುತ್ ಯೋಜನೆಯ ಸ್ಥಳದಲ್ಲಿ ಯಾವುದಾದರು ಸರ್ಕಾರಿ ಜಲ ವಿದ್ಯುತ್ / ನೀರಾವರಿ / ಕುಡಿಯುವ ನೀರಿನ ಯೋಜನೆಗಳು ಬಂದಲ್ಲಿ ಸರ್ಕಾರಿ ಯೋಜನೆಗಳಿಗೆ ಮೊದಲ ಆದ್ಯತೆ ದೊರಕುವುದು ಹಾಗೂ ಈ ಯೋಜನೆಗೆ ಯಾವುದಾದರೂ ಇತರೆ ಯೋಜನೆಗಳಿಂದ ಧಕ್ಕೆಯಾದ್ದಲ್ಲಿ ಯಾವುದೇ ಪರಿಹಾರವನ್ನು ಅಭಿವೃದ್ಧಿದಾರರು ನಿರೀಕ್ಷಿಸುವಂತಿಲ್ಲ.

9. ಸ್ಥಳೀಯವಾಗಿ ಉದ್ಭವಿಸುವ ಯಾವುದಾದರೂ ಆಕ್ಷೇಪಣೆಗಳಿಗೆ ಅಭಿವೃದ್ಧಿದಾರರೇ ಸಂಪೂರ್ಣವಾಗಿ ಹೊಣೆಗಾರರಾಗಿರುತ್ತಾರೆ.

10. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ಯಾವುದೇ ಯೋಜನೆಗಳಿಂದಾಗಿ ಸದರಿ ಯೋಜನೆಯು ಮುಳುಗಡೆಯಾದಲ್ಲಿ, ಒದಗಬಹುದಾದ ಸಂಪೂರ್ಣ ತೊಂದರೆಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.

11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

12. ಡಿ.ಪಿ.ಆರ್. ತಯಾರು ಮಾಡಿದ ಮೇಲೆ ಕ್ರೆಡಲ್ ಸಂಸ್ಥೆಯು ಪರಿಶೀಲಿಸಿದ ನಂತರ ಇತರ ಸಂಬಂಧಿಸಿದ ಇಲಾಖೆಗಳಿಗೆ ಡಿ.ಪಿ.ಆರ್. ಸಲ್ಲಿಸುವುದು ಹಾಗೂ ತದನಂತರ ತಾಂತ್ರಿಕ ಅನುಮೋದನೆಗಾಗಿ ಕ್ರೆಡಲ್‌ಗೆ ಅರ್ಜಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.488

(ಎಸ್. ಜೆ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ

ENERGY SECRETARIAT

Sub : Change of company name from M/s Ranka-N-Ranka to M/s Ranka-N-Ranka Infrastructure Private Limited-reg.

Read : 1) Government Order No. EN 111 NCE 2007 dated : 22-3-2007.

2) Letter No. KRED/08/RNR-ARC/2009/4202 dated 22-12-2009 received from the Managing Director, Karnataka Renewable Energy Development Limited, Bangalore.

Preamble:

In the Government Order read at (1) above, approval has been accorded for transfer of 5.00 MW wind power capacity in favour of M/s Ranka-N-Ranka from M/s ARC Power Generation Limited at Ganjikatte and Jogimatti villages of Chitradurga District.

The Registrar of Companies, Karnataka, Bangalore has issued a certificate of incorporation vide CIN No. U45201 KA2008 PTC045724 dated 24.3.2008 to M/s Ranka-N-Ranka Infrastructure Private Limited.

In the letter read at (2) above, the Managing Director, Karnataka Renewable Energy Development Limited, Bangalore has sent proposal to Government for change of name of the company from M/s Ranka-N-Ranka to M/s Ranka-N-Ranka Infrastructure Private Limited.

The proposal has been examined in detail and issued the following Order:-

Government Order No. EN 2 NCE 2010, Bangalore, Dated : 16th February 2010

Government accords approval for the change of company's name from M/s Ranka-N-Ranka to M/s Ranka-N-Ranka Infrastructure Private Limited.

The Government has reserved the power to Cancel/modify this Order.

By Order and in the name of the Governor of Karnataka,

PR. 489

(S.J.SAMPATH KUMAR)

Under Secretary to Government,

Energy Department

ENERGY SECRETARIAT

Sub : Furnishing Government Guarantee to HESCOM to obtain loan of Rs. 150 crores from Banks – Reg.

Read : 1) HESCOM letter No. HESCOM/DCA(F)/F-13/08-09 dated 02-11-2009.

2) HESCOM letter No. HESCOM/DCA(F)/F-33 16/09-10 dated 23-12-2009.

3) HESCOM letter No. HESCOM/DCA(F)/F-13/09-10/CYS 76 dated 06-01-2010.

4) Proceedings of Cabinet meeting held on 28-01-2010.

Preamble:

1. Hubli Electricity Supply Company Limited [HESCOM] is one of the five Electricity Distribution Companies in the State looking after the functions of purchase of power, distribution and retails supply of

electricity to its consumers in its area of supply in the districts of Dharwad, Gadag, Haveri, Karwar, Belgaum, Bijapur and Bagalkot except Hukeri taluk in Belgaum District.

2. The company is committed to social obligation of energisation of rural water supply schemes, energisation of individual IP sets and also electrification of unelectrified households etc. Duing the year 2009-10 the Company has proposed to take up the Capex programme with a mandate to reduce Distribution losses by taking up the re-conductring work, providing meters to unmetered installations, DTCs and other works including systemic improvements to cater the rapidly growing demand in urban and rural areas among industrial and other users in North Karnataka region. The company is also taking up the Programme of Niranthara Jyothi works for providing 24 hours power supply to rural areas.

3. In letter read at (1) above, Managing Director, HESCOM has stated that the Company has taken Reform measures as under informing that these initiatives would definitely take forward the Company in meeting the goals set by it.

a) Setting up of Inventory management System, Transformer Management System, IT implementation Advisory Committee.
b) Massive awareness compaign on Consumer Awareness, theft and pilferage, Energy Auditing.
c) A comprehensive HRD policy to train and upgrade the skill of all employees.
d) To put in place a system of delegation of powers to field level officers to bring in more accountability and implementing speeding-up of consumer complaint redressal system.
e) Nirantara Jyothi works initially in 3 Taluks as pilot projects and proposed to take-up Nirantara Jyothi works in 20 Taluks in 2nd phase and in other remaining Taluks in 3rd phase, with an approximate cost of the project as Rs. 500 crores.

4. Managing Director, HESCOM vide letters read at (2) and (3) above has stated that, though the billing efficiency has been increased to 99% and collection efficiency is maintained at more than 105% in receivable categories, the average monthly revenue collection of HESCOM is less then the monthly revenue expenditure of HESCOM. The company is finding difficulty to meet the expenditure towards power purchase, debt servicing and Capex bills etc., and as such the company with the approval of its Board, has proposed to draw Long term loan of Rs. 500 Crores and Short term loan of Rs. 150 Crores respectively, as under and has requested the Government for furnishing Government Guarantee to ensure smooth carrying out of development activities in HESCOM

(Rs. In crores)

Particulars	Loan		Total
	Existing	Proposed	
Long Term Loan	1472.83	500.00	1972.83
Short Term Loan	375.00	150.00	525.00
Total	**1847.83**	**650.00**	**2497.83**

i) Long Term
   (a) Rs. 200 crores for Capex 2009-10
   (b) Rs. 300 crores for Niranthara Jyothi 1st Phase &

ii) Short Term Loan of Rs. 150 crores for payment of power purchase bills.

iii) Enhancement of LC limits –Rs. 10 crores as required by CGS.

5. HESCOM's request has been examined and matter placed before the Cabinet meeting held on 28-01-2010 Government decided to provide a Government guarantee for a loan amount of Rs. 150 crores to HESCOM, subject to payment of guarantee fee @ 1%" by HESCOM to Government. Hence, this order.

Government Order No. EN 85 PSR 2009, Bangalore, Dated : 16th February 2010

In the circumstances explained above, Government accords approval to provide a Government guarantee for a loan of Rs. 150 crores to be obtained by Hubli Electricity Supply Company Limited from the Banks.

HESCOM shall pay a guarantee fee @ 1% per annum to Government towards the above.

This order issued with the concurrence of Finance Department vide U.O. Note No. FD 2093 Exp-1/2009 dated 02.01.2010.

By Order and in the name of the Governor of Karnataka,
(S.J.SAMPATH KUMAR)
Under Secretary to Government,
Energy Department

PR. 490

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬೀದರ್ ಜಿಲ್ಲೆ, ಬೀದರ್ ತಾಲ್ಲೂಕಿನ ಜಮಿಸ್ತಾನಪೂರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ : 23-03-2005ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಭೂಸ್ವಾಪ್ರ/04-05/1492.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಬೀದರ್ ಜಿಲ್ಲೆ ಹಾಗೂ ತಾಲ್ಲೂಕಿನ ಜಮಿಸ್ತಾನಪೂರ ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮಿಸ್ತಾನಪೂರ ಗ್ರಾಮದ ಸರ್ವೆ ನಂ : 10/2ಗೆ ಸೇರಿದ ಜಮೀನಿಗೆ ಬೀದರ್‌ನ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದ ತೀರ್ಪಿನಲ್ಲಿ ನೀಡಿದ ತೀರ್ಪಿನನುಸಾರ ಹೆಚ್ಚಿನ ಹಣ ಪಾವತಿಸಲು ರೂ. 4,57,366.00ರನ್ನು ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿದ ಜಮೀನಿನ ಭೂಸ್ವಾಧೀನ ಪ್ರಕ್ರಿಯೆ ವಿವರಗಳು ಕೆಳಕಂಡಂತಿದೆ.

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1) ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 27-12-1990.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ : 27-04-1992.

ಭೂಸ್ವಾಧೀನಕ್ಕೊಳಪಟ್ಟ ಜಮೀಸ್ತಾನಪೂರ ಗ್ರಾಮದ ಸರ್ವೆ ನಂ : 10/2ರ 2 ಎಕರೆ 27 ಗುಂಟೆ ಜಮೀನಿನ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಬೀದರ್‌ನ ಹೆಚ್ಚುವರಿ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಾಗಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಹೆಚ್ಚುವರಿ ಪರಿಹಾರ ಧನ ಪಾವತಿಸಲು ಕಂದಾಯ ಇಲಾಖೆಯು ಸಹಮತಿ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿರುವ ಪಕರಣಗಳ ವಿವರ ಕೆಳಕಂಡಂತಿದೆ :

ಕ್ರ.ಸಂ	ಎಲ್.ಎ.ಸಿ. ಸಂಖ್ಯೆ	ಜಮಿಸ್ತಾನಪೂರ ಗ್ರಾಮದ ಸರ್ವೆ ನಂ :	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	344/92	10/2	2-27	4,57,366-00

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 160 ಭೂಸ್ವಾಪ್ರ 2005, ಬೆಂಗಳೂರು, ದಿನಾಂಕ: 18ನೇ ಫೆಬ್ರವರಿ 2010

ಬೀದರ್ ಜಿಲ್ಲೆ ಹಾಗೂ ತಾಲ್ಲೂಕಿನ ಜಮಿಸ್ತಾನಪೂರ ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮಿಸ್ತಾನಪೂರ ಗ್ರಾಮದ ಸರ್ವೆ ನಂ : 10/2ರ 2 ಎಕರೆ 27 ಗುಂಟೆ ಜಮೀನಿಗೆ ಬೀದರ್‌ನ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿನ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರಧನದ ಮೊತ್ತ ರೂ. 4,57,366-00ಗಳನ್ನು (ನಾಲ್ಕು ಲಕ್ಷದ ಐವತ್ತೇಳು ಸಾವಿರದ ಮೂರು ನೂರ ಅರವತ್ತಾರು ರೂ.ಗಳೂ ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00 ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ : 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 491

(ಕೆ. ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನ ಹುಲಿಯಾಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ : 19-08-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/4947.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕು ಹುಲಿಯಾಪುರ ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೋದೂರು ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ.

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1) ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 09-08-2001.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ : 01-12-2003.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಯಲಬುರ್ಗಾ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣಗಳನ್ನು ದಾಖಲಿಸಿದ್ದು, ಈ ಪ್ರಕರಣಗಳಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ. ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯು ಪತ್ರ ಸಂಖ್ಯೆ : ಆರ್‌ಡಿ 1109 ಎಲ್‌ಸಿಜಿ 2008, ದಿನಾಂಕ 06-02-09ರಲ್ಲಿ ಅಭಿಪ್ರಾಯ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ :

ಕ್ರ.ಸಂ	ಎಲ್.ಎ.ಸಿ. ಸಂಖ್ಯೆ	ಬೋದೂರು ಗ್ರಾಮದ ಸರ್ವೆ ನಂ :	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	44/06	32/ಅ	0-26	1,61,276-00
				1,61,276-00

- ಪರಿಹಾರಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 137 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 18ನೇ ಫೆಬ್ರವರಿ 2010

ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ಹುಲಿಯಾಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೋದೂರು ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರಧನದ ಮೊತ್ತ ರೂ. 1,61,276-00ಗಳನ್ನು (ಒಂದು ಲಕ್ಷದ ಅರವತ್ತೊಂದು ಸಾವಿರದ ಇನ್ನೂರ ಎಪ್ಪತ್ತಾರು ರೂ.ಗಳೂ ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00 ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ : 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 492

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ : 07-11-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಭೂಸ್ವಾಪ್ರ/2009-10/6632.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಬಳ್ಳಾರಿ ಜಿಲ್ಲೆ ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೆಣಕಲ್ಲು ಗ್ರಾಮದ ಸರ್ವೆ ನಂ : 621/3ಬಿ ಮತ್ತು 626/ಡಿಗೆ ಸೇರಿದ ಜಮೀನಿಗೆ ಹೊಸಪೇಟೆ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ.ಪ್ರಕರಣದ ತೀರ್ಪಿನಲ್ಲಿ ನೀಡಿದ ತೀರ್ಪಿನನುಸಾರ ಹೆಚ್ಚಿನ ಹಣ ಪಾವತಿಸಲು

ರೂ. 1,29,757-00 ರನ್ನು ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿದ ಜಮೀನಿನ ಭೂಸ್ವಾಧೀನ ಪ್ರಕ್ರಿಯೆಯ ವಿವರಗಳು ಕೆಳಕಂಡಂತಿದೆ.

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1) ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 01-09-1994.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ : 31-01-1996.

ಭೂಸ್ವಾಧೀನಕ್ಕೊಳಪಟ್ಟ ಬೆಣಕಲ್ಲು ಗ್ರಾಮದ ಸರ್ವೆ ನಂ.ಗಳಿಗೆ ಸೇರಿದ ಜಮೀನಿನ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಹೊಸಪೇಟೆಯ ಪ್ರಿನ್ಸಿಪಲ್ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯು ಪತ್ರ ಸಂಖ್ಯೆ : ಲಾ 598 ಎಲ್‌ಎಸ್‌ಪಿ 2006, ದಿನಾಂಕ 05-05-06ರಲ್ಲಿ ಅಭಿಪ್ರಾಯ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ :

ಕ್ರ.ಸಂ	ಎಲ್.ಎ.ಸಿ. ಸಂಖ್ಯೆ	ಬೆಣಕಲ್ಲು ಗ್ರಾಮದ ಸರ್ವೆ ನಂ :	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	49/96	621/ಬಿ	1-30	1,29,757-00
		626/ಡಿ	0-41	

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 168 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 18ನೇ ಫೆಬ್ರವರಿ 2010

ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಪ್ರಸ್ತಾವನೆಯಲ್ಲಿ ತಿಳಿಸಿರುವ ಬೆಣಕಲ್ಲು ಗ್ರಾಮದ ಸರ್ವೆ ನಂ.ಗಳಿಗೆ ಸೇರಿದ ಜಮೀನಿಗೆ ಹೊಸಪೇಟೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿನ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರಧನದ ಮೊತ್ತ ರೂ. 1,29,757-00ಗಳನ್ನು (ಒಂದು ಲಕ್ಷದ ಇಪ್ಪತ್ತೊಂಬತ್ತು ಸಾವಿರದ ಏಳು ನೂರ ಐವತ್ತೇಳು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00 ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಉಪಶೀರ್ಷಿಕೆ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ : 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 493

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ವಿಜಾಪುರ ಜಿಲ್ಲೆ, ಸಿಂದಗಿ ತಾಲ್ಲೂಕಿನ ಬೊಮ್ಮನಜೋಗಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ : 17-12-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಭೂಸ್ವಾಪ್ರ/2009-10/7549.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ವಿಜಾಪುರ ಜಿಲ್ಲೆ ಹಾಗೂ ಸಿಂದಗಿ ತಾಲ್ಲೂಕಿನ ಬೊಮ್ಮನಜೋಗಿ ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೊಮ್ಮನಜೋಗಿ ಗ್ರಾಮದ ಸರ್ವೆ ನಂ : 90/2ಎ ಸೇರಿದ ಜಮೀನಿಗೆ ಬಿಜಾಪುರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದ ತೀರ್ಪಿನಲ್ಲಿ ನೀಡಿದ ತೀರ್ಪಿನನುಸಾರ ಹೆಚ್ಚಿನ ಹಣ ಪಾವತಿಸಲು ರೂ. 2,96,270-00ನ್ನು ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿದ ಜಮೀನಿನ ಭೂಸ್ವಾಧೀನ ಪ್ರಕ್ರಿಯೆಯು ವಿವರಗಳು ಕೆಳಕಂಡಂತಿದೆ.

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1) ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 08-02-1996.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ : 02-01-1999.

ಭೂಸ್ವಾಧೀನಕ್ಕೊಳಪಟ್ಟ ಬೊಮ್ಮನಜೋಗಿ ಗ್ರಾಮದ ಸರ್ವೆ ನಂ.ಗೆ ಸೇರಿದ ಜಮೀನಿನ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಹೊಸಪೇಟೆಯ ಪ್ರಿನ್ಸಿಪಲ್ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ :

ಕ್ರ.ಸಂ	ಎಲ್.ಎ.ಸಿ. ಸಂಖ್ಯೆ	ಬೊಮ್ಮನಜೋಗಿ ಗ್ರಾಮದ ಸರ್ವೆ ನಂ :	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	35/01	90/2ಎ	5-15	2,96,270-00

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ನಿರ್ಧಾರ ಕೈಗೊಂಡು ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 16 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 18ನೇ ಫೆಬ್ರವರಿ 2010

ಬಿಜಾಪುರ ಜಿಲ್ಲೆ, ಸಿಂದಗಿ ತಾಲ್ಲೂಕಿನ ಬೊಮ್ಮನಜೋಗಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಪ್ರಸ್ತಾವನೆಯಲ್ಲಿ ತಿಳಿಸಿರುವ ಬೊಮ್ಮನಜೋಗಿ ಗ್ರಾಮದ ಸರ್ವೆ ನಂ.ಗೆ ಸೇರಿದ ಜಮೀನಿಗೆ ಬಿಜಾಪುರ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿನ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರಧನದ ಮೊತ್ತ ರೂ. 2,96,270-00ಗಳನ್ನು (ಎರಡು ಲಕ್ಷದ ತೊಂಬತ್ತಾರು ಸಾವಿರದ ಎರಡು ನೂರ ಎಪ್ಪತ್ತು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00 ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಉಪಶೀರ್ಷಿಕೆ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ : 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 494

(ಕೆ. ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಆರ್ಥಿಕ ಸಚಿವಾಲಯ

ವಿಷಯ : ಆರ್ಥಿಕ ಇಲಾಖೆಯು ಅನುಮತಿ ನೀಡಿದೆ ಎಂದು ಭಾವಿಸಬಹುದಾದ ಸಂದರ್ಭಗಳು- ಚಿಕಿತ್ಸೆಗಾಗಿ ಮುಂಗಡ ಠೇವಣಿ ಪಾವತಿ ಆದೇಶವನ್ನು ಮಾರ್ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2001, ದಿನಾಂಕ : 2-2-2001.
2. ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 4 ಟಿಎಫ್‌ಪಿ (99)2, ದಿನಾಂಕ : 15-10-1999.
3. ಅಧಿಸೂಚನೆ ಸಂಖ್ಯೆ : ಸಿಆಸುಇ 1 ಎಸ್‌ಎಂಆರ್ 2000 ದಿನಾಂಕ : 22-01-2001.
4. ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 2 ಟಿಎಫ್‌ಪಿ 2001, ದಿನಾಂಕ : 16-4-2001.
5. ಸರ್ಕಾರಿ ಸೇರ್ಪಡೆ ಆದೇಶ ಸಂಖ್ಯೆ : ಎಫ್‌ಡಿ 02 ಟಿಎಫ್‌ಪಿ 01, ದಿನಾಂಕ : 10-7-2001.
6. ಅಧಿಸೂಚನೆ ಸಂಖ್ಯೆ : ಸಿಆಸುಇ 2 ಎಸ್‌ಎಂಆರ್ 2008 ದಿನಾಂಕ : 24-10-2009.
7. ಅನಧಿಕೃತ ಟಿಪ್ಪಣಿ ಸಂಖ್ಯೆ : ಸಿಆಸುಇ 16 ಎಸ್‌ಎಂಆರ್ 2009 ದಿನಾಂಕ : 12-11-2009.

ಪ್ರಸ್ತಾವನೆ :

ಮೇಲಿನ ಕ್ರಮಾಂಕ (1) ಮತ್ತು (2)ರಲ್ಲಿ ಉಲ್ಲೇಖಿಸಲಾದ ಸರ್ಕಾರಿ ಆದೇಶಗಳಲ್ಲಿ ಆರ್ಥಿಕ ಇಲಾಖೆಯು ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳು, 1977ರ ನಿಯಮ 45 ರಲ್ಲಿ ಉದ್ದೇಶಿಸಿದಂತೆ ತನ್ನ ಅನುಮತಿಯನ್ನು ನೀಡಲಾಗಿದೆ ಎಂದು ಭಾವಿಸಬಹುದಾದ ಪ್ರಕರಣಗಳನ್ನು ಆದೇಶಗಳ ಅನುಬಂಧದಲ್ಲಿ ನಮೂದಿಸಿದಂತೆ ಗೊತ್ತುಪಡಿಸಿದೆ.

ಮೇಲೆ (4) ಮತ್ತು (5) ರಲ್ಲಿ ಓದಲಾದ ಆದೇಶಗಳಲ್ಲಿ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963ರಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಪೂರೈಸುವುದರ ನಿಬಂಧನೆಗಳಿಗೆ ಒಳಪಟ್ಟು ಗ್ರೂಪ್ 'ಸಿ' ಮತ್ತು 'ಡಿ' ದರ್ಜೆಯ ಅಧಿಕಾರಿಗಳು ಸರ್ಕಾರಿ ಆದೇಶ ಸಂಖ್ಯೆ : ಡಿಪಿಎಆರ್ 1 ಎಸ್‌ಎಂಆರ್ 2000 ದಿನಾಂಕ : 22-1-2001ರ ಷೆಡ್ಯೂಲ್-1 ರಲ್ಲಿ ಸೂಚಿಸಿರುವ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಷೆಡ್ಯೂಲ್ 2 ಮತ್ತು 3 ರಲ್ಲಿ ಸೂಚಿಸಿದ ದರಗಳಂತೆ ಪಡೆಯುವ ಚಿಕಿತ್ಸೆಗಾಗಿ ಮುಂಗಡ ಠೇವಣಿ ಪಾವತಿ ಮಂಜೂರು ಮಾಡಲು ಇಲಾಖಾ ಮುಖ್ಯಸ್ಥರುಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿತ್ತು.

ಮೇಲೆ ಕ್ರಮಾಂಕ (6) ರಲ್ಲಿನ ಅಧಿಸೂಚನೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ಕ್ಕೆ ಮಾಡಿರುವ ತಿದ್ದುಪಡಿಗಳಲ್ಲಿ ನಿಯಮ 14ಕ್ಕೆ ಸಂಬಂಧಪಟ್ಟಂತೆ ಅನುಸೂಚಿ-2 ಹಾಗೂ ಅನುಸೂಚಿ-3ನ್ನು ಕೈಬಿಡಲಾಗಿದ್ದು ಸಿ.ಜಿ.ಹೆಚ್.ಎಸ್. ದರಗಳನ್ನು ಅಳವಡಿಸಿಕೊಂಡಿರುವುದರಿಂದ ಮುಂಗಡ ಠೇವಣಿ ಮಂಜೂರಾತಿಯ ಆದೇಶಗಳನ್ನು ಸೂಕ್ತವಾಗಿ ಪರಿಷ್ಕರಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿರವರು ದಿನಾಂಕ : 12-11-2009ರ ಅನಧಿಕೃತ ಟಿಪ್ಪಣಿಯಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಇ 9 ಟಿಎಫ್‌ಪಿ 2009,(2) ಬೆಂಗಳೂರು, ದಿನಾಂಕ: 21ನೇ ಜನವರಿ 2010

ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ 2 ಟಿಎಫ್‌ಪಿ 2001 ದಿನಾಂಕ : 16-4-2001 ಮತ್ತು ದಿನಾಂಕ : 10-7-2001ರ ಸೇರ್ಪಡೆ ಆದೇಶವನ್ನು ಈ ಕೆಳಗಿನಂತೆ ಮಾರ್ಪಡಿಸಲಾಗಿದೆ.

ಕ್ರಮಾಂಕ : (1)ರಲ್ಲಿ ಓದಲಾದ ದಿನಾಂಕ : 2-1-2001ರ ಸರ್ಕಾರಿ ಆದೇಶದ ಅನುಬಂಧದ ಕ್ರಮ ಸಂಖ್ಯೆ 55ರ ನಂತರ ಈ ಕೆಳಕಂಡ ಅಂಶವನ್ನು 55 (1) ಎಂದು ಸೇರಿಸಿ ಓದಿಕೊಳ್ಳತಕ್ಕದ್ದು.

"ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963 ರಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಪೂರೈಸುವುದರ ನಿಬಂಧನೆಗಳಿಗೆ ಒಳಪಟ್ಟು ಗ್ರೂಪ್ 'ಸಿ' ಮತ್ತು 'ಡಿ' ದರ್ಜೆಯ ಅಧಿಕಾರಿಗಳು ಸದರಿ ನಿಯಮಗಳ ಷೆಡ್ಯೂಲ್ 1ರಲ್ಲಿ ಸೂಚಿಸಿರುವ ಆಸ್ಪತ್ರೆಗಳಲ್ಲಿ, ಚಿಕಿತ್ಸೆ ಪಡೆಯಲು ಸರ್ಕಾರಿ ಅಧಿಸೂಚನೆ ಸಂಖ್ಯೆ : ಸಿಆಸುಇ 2 ಎಸ್ಎಂಆರ್ 2008 ದಿನಾಂಕ : 24-10-2009ರ ಕಂಡಿಕೆ 5(ii) (3) ರಲ್ಲಿ ವಿವರಿಸಿರುವಂತೆ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳಡಿಯಲ್ಲಿ (CGHS) ಕಾಲಕಾಲಕ್ಕೆ ವಿವಿಧ ರೋಗ ನಿರ್ಣಯ ವಿಧಾನಗಳಿಗೆ ಮತ್ತು ಚಿಕಿತ್ಸೆಗಳಿಗೆ ನಿಗದಿಪಡಿಸುವ ದರಗಳಂತೆ ಪಡೆಯುವ ಚಿಕಿತ್ಸೆಗಾಗಿ ಮುಂಗಡ ರೇವಣಿ ಪಾವತಿ ಮಾಡಲು ಮಂಜೂರಾತಿ"

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 495

(ಪಿ. ಶ್ಯಾಮರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
(ಆರ್ಥಿಕ ನಿಯಮಗಳು, ಆಯವ್ಯಯ ಸಂಕಲನ ಮತ್ತು ಸಮಿತಿ ಶಾಖೆ)
ಆರ್ಥಿಕ ಇಲಾಖೆ

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಜಮಿಸ್ತಾನಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 03-08-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/4574.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಜಮಿಸ್ತಾನಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 26-06-1997.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 31-03-2001.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರ ಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಬೀದರ್ ಸಿವಿಲ್ ನ್ಯಾಯಾಲಯದಲ್ಲಿ (ಹಿರಿಯ ಶ್ರೇಣಿ) ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ. ಪ್ರಕರಣದ ವಿವರ ಕೆಳಕಂಡಂತಿದೆ.

ಕ್ರ.ಸಂ.	ಎಲ್ಎಸಿ ಪ್ರಕರಣ ಸಂ.	ಜಮಿಸ್ತಾನಪುರ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	21/01	10/1	5-21	11,55,379-00
2	23/01	10/3	0-17	92,869-00
3	61/01	9/2	0-19	99,328-00
			ಒಟ್ಟು	13,47,576-00

- ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಅಭಿಪ್ರಾಯ ನೀಡಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 86 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2010.

ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಜಮಿಸ್ತಾನಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮಿಸ್ತಾನಪುರ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರಧನ ಮೊತ್ತ ರೂ. 13,47,576-00 ಗಳನ್ನು (ಹದಿಮೂರು ಲಕ್ಷದ ನಲವತ್ತೇಳು ಸಾವಿರದ ಐದು ನೂರ ಎಪ್ಪತ್ತಾರು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು..

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ.ಆರ್. 536

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಗಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು, ಹಸರಗುಂಡಗಿ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 25-09-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/5709.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಗಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು, ಹಸರಗುಂಡಗಿ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.61,424-00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ಐತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 10-12-1981.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 22-05-1984.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಸೇಡಂ ಸಿವಿಲ್ ನ್ಯಾಯಾಲಯದಲ್ಲಿ

(ಹಿರಿಯ ಶ್ರೇಣಿ) ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ಐತೀರ್ಪು ನೀಡಿದೆ. ಪ್ರಕರಣದ ವಿವರ ಕೆಳಕಂಡಂತಿದೆ.

ಕ್ರ.ಸಂ.	ಎಲ್‌ಎಸಿ ಪ್ರಕರಣ ಸಂ.	ಹಸರಗುಂಡಗಿ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	168/03	14/1	1-10	61,420-00

• ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯು ಪತ್ರ ಸಂಖ್ಯೆ : ಲಾ 2718 ಎಲ್‌ಎಸ್‌ಪಿ 2005 ದಿನಾಂಕ : 20-01-2006ರಲ್ಲಿ ಅಭಿಪ್ರಾಯ ನೀಡಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 148 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2010.

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು, ಹಸರ್‌ಗುಂಡಗಿ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಹಸರ್‌ಗುಂಡಗಿ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ನ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಧನ ಮೊತ್ತ ರೂ. 61,420-00 ಗಳನ್ನು (ಅರವತ್ತೊಂದು ಸಾವಿರದ ನಾಲ್ಕು ನೂರ ಇಪ್ಪತ್ತು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ.ಆರ್. 537

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು, ಹುಲಿಯಾಪುರ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಶಿಡ್ಲಬಾವಿ ಗ್ರಾಮದಲ್ಲಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 19-08-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/4948.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು, ಹುಲಿಯಾಪುರ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಶಿಡ್ಲಬಾವಿ ಗ್ರಾಮದ ಜಮೀನುಗಳಿಗೆ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.5,59,137-00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 23-08-2001.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 11-02-2005.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಕೊಪ್ಪಳ ಸಿವಿಲ್ ನ್ಯಾಯಾಲಯದಲ್ಲಿ (ಹಿರಿಯ ಶ್ರೇಣಿ) ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ. ಪ್ರಕರಣದ ವಿವರ ಕೆಳಕಂಡಂತಿದೆ.

ಕ್ರ.ಸಂ.	ಎಲ್ಎಸಿ ಪ್ರಕರಣ ಸಂ.	ಶಿಡ್ಲಬಾವಿ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	45/06	26/ಕೆ	2-00	5,59,137-00

- ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಪತ್ರ ಸಂಖ್ಯೆ : ಆರ್‌ಡಿ 1109 ಎಲ್‌ಸಿಜೆ 2008 ದಿನಾಂಕ : 06-02-2009ರಲ್ಲಿ ಅಭಿಪ್ರಾಯ ನೀಡಿದೆ. ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 136 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2010.

ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು, ಹುಲಿಯಾಪುರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಶಿಡ್ಲಬಾವಿ ಗ್ರಾಮದ ಮೇಲ್ಕಂಡ ಸರ್ವೆ ನಂಬರ್‌ನ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರ ಧನ ಮೊತ್ತ ರೂ. 5,59,137-00 ಗಳನ್ನು (ಐದು ಲಕ್ಷದ ಐವತ್ತೊಂಬತ್ತು ಸಾವಿರದ ಒಂದು ನೂರ ಮೂವತ್ತೇಳು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 538

(ಕೆ. ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಐತೀರ್ಪಿನಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 07-11-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಭೂಸ್ವಾಪ್ರ/2009-10/6636.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೆಣಕಲ್ಲು ಗ್ರಾಮದ ಸರ್ವೆ ನಂ : 651/ಎ1 ಮತ್ತು 651/ಬಿ1 ಸೇರಿದ ಜಮೀನಿಗೆ ಹೊಸಪೇಟೆ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದ ತೀರ್ಪಿನಲ್ಲಿ ನೀಡಿದ ಐತೀರ್ಪಿನನುಸಾರ ಹೆಚ್ಚಿನ ಹಣ ಪಾವತಿಸಲು ರೂ.4,05,822-00ನ್ನು ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನಿನ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 05-12-1996.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 06-11-1998.

ಭೂಸ್ವಾಧೀನಕ್ಕೊಳಪಟ್ಟ ಬೆಣಕಲ್ಲು ಗ್ರಾಮದ ಸರ್ವೆ ನಂಬರ್‌ಗಳಿಗೆ ಸೇರಿದ ಜಮೀನಿನ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು ಹೆಚ್ಚಿನ ಪರಿಹಾರ ಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಹೊಸಪೇಟೆಯ ಪ್ರಿನ್ಸಿಪಲ್ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ಐತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯು ಪತ್ರ ಸಂಖ್ಯೆ : ಲಾ 723 ಎಲ್‌ಎಸ್‌ಪಿ 2007 ದಿನಾಂಕ : 01-06-2007ರಲ್ಲಿ ಅಭಿಪ್ರಾಯ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ :

ಕ್ರ.ಸಂ.	ಎಲ್‌ಎಸಿ ಪ್ರಕರಣ ಸಂ.	ಬೆಣಕಲ್ಲು ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	12/2000	651/ಎ1 651/ಬಿ1	4-17 1-52	4,05,822-00

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 165 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2010.

ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಬೆಣಕಲ್ಲು ಸಣ್ಣ ನೀರಾವರಿ ಕೆರೆಯ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಪ್ರಸ್ತಾವನೆಯಲ್ಲಿ ತಿಳಿಸಿರುವ ಬೆಣಕಲ್ಲು ಗ್ರಾಮದ ಸರ್ವೆ ನಂಬರ್‌ಗಳಿಗೆ ಸೇರಿದ ಜಮೀನಿಗೆ ಹೊಸಪೇಟೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿನ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರ ಧನದ ಮೊತ್ತ ರೂ. 4,05,822-00 ಗಳನ್ನು (ನಾಲ್ಕು ಲಕ್ಷದ ಐದು ಸಾವಿರದ ಎಂಟು ನೂರಾ ಇಪ್ಪತ್ತೆರಡು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಕೆ. ಸುಧಾಕರ ಶೆಟ್ಟಿ)

ಪಿ.ಆರ್. 539

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ತಾಲ್ಲೂಕು, ನವನಿಹಾಳ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 28-10-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/6378.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರದಲ್ಲಿ ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ತಾಲ್ಲೂಕು, ನವನಿಹಾಳ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.59,579-00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರಧನಕ್ಕೆ ಐತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 30-09-1993.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 12-03-1996.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಗುಲ್ಬರ್ಗಾ ಸಿವಿಲ್ ನ್ಯಾಯಾಲಯದಲ್ಲಿ (ಹಿರಿಯ ಶ್ರೇಣಿ) ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ. ಪ್ರಕರಣದ ವಿವರ ಕೆಳಕಂಡಂತಿದೆ:

ಕ್ರ.ಸಂ.	ಎಲ್‌ಎಸಿ ಪ್ರಕರಣ ಸಂ.	ನವನೀಹಾಳ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	447/99	119/3	0-15	59,579-00

- ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರುವ ನಿರ್ಧಾರ ಕೈಗೊಂಡು ಪ್ರಕರಣಕ್ಕೆ ಮುಖ್ಯ ಅಭಿಯಂತರರ ಪ್ರಸ್ತಾವನೆಯಂತೆ ಹಣ ಪಾವತಿಸಲು ತೀರ್ಮಾನಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 160 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2010.

ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ತಾಲ್ಲೂಕು, ನವೀನಿಹಾಳ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ನವೀನಹಾಳ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್‌ನ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಚಾರಿಸಿದ ಧನ ಒಟ್ಟು ರೂ. 59,579–00 ಗಳನ್ನು (ಐವತ್ತೊಂಬತ್ತು ಸಾವಿರದ ಐದು ನೂರಾ ಎಪ್ಪತ್ತೊಂಬತ್ತು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗಿರುವುದಿಲ್ಲ. ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16–0[illegible]–200[illegible] ರಂದು ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 540

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

WATER RESOURCES SECRETARIAT

Sub : Constitution of State Level Committee for re-estimation of Ground Water Resources & Estimation of Annual Replenishable Ground Water Resources-reg.

Read : Letter No. T-25/CGWB/SWR-2009-181 dated 8-2-2010 of the Regional Director, Central Ground Water Board, Bangalore.

Preamble:

The Regional Director, Central Ground Water Board, Bangalore in his letter read above has informed that the last assessment of State-wise Annual Replenishable Ground Water Resources for the entire country was made in the year 2004 based on the Methodology adopted by the Ground Water Resources Estimation Committee-1997. Since then, changes in ground water scenario in many parts of the State is observed. The National Water Policy, 2002 has also recommended that the ground water resources of the country should be re-assessed periodically. With a view to re-estimate Ground Water Resources as in 2008-09 to estimate annual replenishable Ground Water Resources of Karnataka State he has requested to constitute the State Level Committee in accordance with the Ground Water Resources Estimation Methodology.

Hence the following Order.

Government Order No. MID 05 AaJaAa 2010, Bangalore, Dated The 22nd February 2010

In view of the above, Govenrment is pleased to constitute the State Level Committee for re-estimation of Ground Water Resources with the composition of following members with immediate effect and until further Orders :

1.	Secretary to Govenrment, Water Resources Department (Minor Irrigation)	Chairman
2.	Chief Engineer, Minor Irrigation, South Zone, Bangalore	Member
3.	Chief Engineer, Minor Irrigation, North Zone, Bijapur	Member
4.	Director, Mines & Geology Department (Ground Water)	Member
5.	Chief Engineer, Karnataka Urban Water Supply and Drainage Board	Member
6.	Director, Department of Agriculture	Member
7.	Chief Engineer, Water Resources Development Organisation	Member
8.	Chief Engineer, Rural Development Engineering Department	Member
9.	Commissioner/Director for department of Industries	Member
10.	General Manager, NABARD	Member
11.	Regional Director, Central Ground Water Board, Government of India, Bangalore	Member Secretary

Committee may co-operate any other member/special invitee if necessary.

2. **Terms of Reference :** The broad terms of reference of the Committee would be as follows :

(i) To estimate annual replenishable Ground Water Resources of Karnataka State in accordance with the Ground Water Resource Estimation Methodology ;

(ii) To estimate the status of utilization of annual replenishable gound water resource.

3. **Time Frame :** The Committee shall submit its report at the earliest from the date of its constitution.

4. **Expenditure :** Expenditure on account of TA/DA to official Members of the Committee will be met from the source from which they draw their salaries.

By Order and in the name of the Governor of Karnataka,

PR. 546

(K. Sudhakara Shetty)
Under Secretary to Government,
Water Resources Department. (Minor Irrigation)

ಶಿಕ್ಷಣ ಸಚಿವಾಲಯ

ವಿಷಯ : ಜಮಖಂಡಿ ತಾಲ್ಲೂಕಿನ ಹುನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಿಸಲು, ಆ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಸೇರಿದ ಜಮೀನಿನಲ್ಲಿ 1.05 ಎಕರೆ ಜಮೀನನ್ನು ಹಸ್ತಾಂತರ ಮಾಡುವ ಬಗ್ಗೆ

ಓದಲಾಗಿದೆ: ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ : ಯೋ 7 ಸಪ್ರದ ಕಾ. ನಿವೇಶನ 34/2007-08, ದಿನಾಂಕ 14-9-2009.

ಪ್ರಸ್ತಾವನೆ :

1) ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುನ್ನೂರು, ಜಮಖಂಡಿ ತಾಲ್ಲೂಕು ಇಲ್ಲಿ ಕಟ್ಟಡ ನಿರ್ಮಿಸಲು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುನ್ನೂರು ಈ ಕಾಲೇಜಿಗೆ ಸೇರಿದ ಸರ್ವೆ ಸಂಖ್ಯೆ 1017/ಎ/1 ರಲ್ಲಿನ 6.20 ಎಕರೆ ಜಮೀನಿನಲ್ಲಿ 3.05 ಎಕರೆ ಜಮೀನನ್ನು ಹಸ್ತಾಂತರ ಮಾಡಬಹುದೆಂದು

ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಶಿಫಾರಸ್ಸು ಮಾಡಿದ್ದು, ಅದರಂತೆ ಜಮೀನು ಹಸ್ತಾಂತರದ ಬಗ್ಗೆ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

2) ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 273 ಯೋಸಕ 2009, ಬೆಂಗಳೂರು, ದಿನಾಂಕ: 10-2-2010.
(ಇಡಿ 16 ಸ್ವೀಮರ (ಯುನಿಕ್) 2010, ದಿನಾಂಕ : 10-2-2010

ಜಮಖಂಡಿ ತಾಲ್ಲೂಕಿನ ಹುನ್ನೂರು ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಸೇರಿದ ಸರ್ವೆ ಸಂಖ್ಯೆ : 1017/ಎ/1 ರಲ್ಲಿನ 6.20 ಎಕರೆ ಜಮೀನಿನಲ್ಲಿ ಒಂದು ಎಕರೆ ಜಮೀನನ್ನು ಹುನ್ನೂರು ಗ್ರಾಮದಲ್ಲಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು, ಕಾಲೇಜು ಶಿಕ್ಷಣ ಇಲಾಖೆಗೆ ನಿಯಮಾನುಸಾರ ಹಸ್ತಾಂತರಿಸಲು, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಅನುಮತಿ ನೀಡಿದೆ.

ಪಿ.ಆರ್. 547

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಐ.ಎಫ್. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಯೋಜನೆ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಕರ್ನಾಟಕ ಸರ್ಕಾರ ಸಚಿವಾಲಯದ ವಸತಿ ಇಲಾಖೆಯಲ್ಲಿನ ಕಾರ್ಯದರ್ಶಿ ಹುದ್ದೆಯನ್ನು ಪೂರಕ ಸಿಬ್ಬಂದಿ ಹುದ್ದೆಗಳೊಂದಿಗೆ ಮುಂದುವರಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 205 ಸಅಸೇ 2009, ದಿನಾಂಕ : 20-4-2009
2. ಸರ್ಕಾರದ ಕಾರ್ಯದರ್ಶಿ, ವಸತಿ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ : ವಇ/597/ಕಾರ್ಯದರ್ಶಿ/2010, ದಿನಾಂಕ: 30-1-2010

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಕರ್ನಾಟಕ ಸರ್ಕಾರ ಸಚಿವಾಲಯದ ವಸತಿ ಇಲಾಖೆಯಲ್ಲಿ ಸೃಜಿಸಲಾಗಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಹಾಗೂ ಪೂರಕ ಸಿಬ್ಬಂದಿ ಹುದ್ದೆಗಳನ್ನು ತಾತ್ಕಾಲಿಕವಾಗಿ ದಿನಾಂಕ : 1-4-2009 ರಿಂದ 31-3-2010 ರವರೆಗೆ ಮುಂದುವರಿಸಲಾಗಿತ್ತು. ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಅನಧಿಕೃತ ಟಿಪ್ಪಣಿಯಲ್ಲಿ ಸರ್ಕಾರದ ಕಾರ್ಯದರ್ಶಿ ವಸತಿ ಇಲಾಖೆ ಹಾಗೂ ಪೂರಕ ಹುದ್ದೆಗಳನ್ನು 2010-2011 ನೇ ವರ್ಷದ ಸಾಲಿಗೆ ಮುಂದುವರಿಸುವಂತೆ ಕೋರಲಾಗಿದೆ.

ಕ್ರಮ ಸಂಖ್ಯೆ	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ಆಪ್ತ ಕಾರ್ಯದರ್ಶಿ (ಆಪ್ತ ಕಾರ್ಯದರ್ಶಿ ಗ್ರೇಡ್-2)	01 ಹುದ್ದೆ
2.	ಶೀಘ್ರಲಿಪಿಗಾರರು/ ಹಿರಿಯ ಶೀಘ್ರಲಿಪಿಗಾರರು/ ಪತ್ರಾಂಕಿತ ಆಪ್ತ ಸಹಾಯಕರು	02 ಹುದ್ದೆಗಳು
3.	ಕಿರಿಯ ಸಹಾಯಕರು/ಸಹಾಯಕ	01 ಹುದ್ದೆ
4.	ವಾಹನ ಚಾಲಕರು	01 ಹುದ್ದೆ
5.	ದಲಾಯತ್	02 ಹುದ್ದೆಗಳು
	ಒಟ್ಟು	07 ಹುದ್ದೆಗಳು

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 50 ಸಆಸೇ 2010, ಬೆಂಗಳೂರು, ದಿನಾಂಕ: 20ನೇ ಫೆಬ್ರವರಿ, 2010.

ಕರ್ನಾಟಕ ಸಚಿವಾಲಯದ ವಸತಿ ಇಲಾಖೆಯಲ್ಲಿ ತಾತ್ಕಾಲಿಕವಾಗಿ ಸೃಜಿಸಲಾಗಿರುವ ಸರ್ಕಾರದ ಕಾರ್ಯದರ್ಶಿ ಹಾಗೂ ಕೆಳಕಂಡ ಪೂರಕ ಹುದ್ದೆಗಳನ್ನು ದಿನಾಂಕ : 1-4-2010 ರಿಂದ 31-3-2011 ರವರೆಗೆ ತಾತ್ಕಾಲಿಕವಾಗಿ ಮುಂದುವರಿಸಲು ಆದೇಶಿಸಿದೆ.

	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ಆಪ್ತ ಕಾರ್ಯದರ್ಶಿ (ಆಪ್ತ ಕಾರ್ಯದರ್ಶಿ ಗ್ರೇಡ್-2)	01 ಹುದ್ದೆ
2.	ಶೀಘ್ರಲಿಪಿಗಾರರು/ ಹಿರಿಯ ಶೀಘ್ರಲಿಪಿಗಾರರು/ ಪತ್ರಾಂಕಿತ ಆಪ್ತ ಸಹಾಯಕರು	02 ಹುದ್ದೆಗಳು
3.	ಕಿರಿಯ ಸಹಾಯಕರು/ಸಹಾಯಕ	01 ಹುದ್ದೆ
4.	ವಾಹನ ಚಾಲಕರು..	01 ಹುದ್ದೆ
5.	ದಲಾಯತ್	02 ಹುದ್ದೆಗಳು
	ಒಟ್ಟು	07 ಹುದ್ದೆಗಳು

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10-7-1996 ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಆರ್ಥಿಕ ಇಲಾಖೆ ಸಹಮತಿ ನೀಡಿದೆ ಎಂದು ಪರಿಭಾವಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಿ.ಆರ್. 548

(ಎಂ.ಎಸ್. ಶಿವರಾಮ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ. (ಸೇವೆಗಳು-3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿಗಾಗಿ ಕಾರ್ಯಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಉನ್ನತ ಮಟ್ಟದ ಸಮಿತಿ ರಚಿಸುವ ಬಗ್ಗೆ.

ದಿನಾಂಕ: 08.07.2008ರಂದು ರಾತ್ರಿ 7.30 ಗಂಟೆಯ ಸಮಯದಲ್ಲಿ ಅಬಕಾರಿ ಉಪ ನಿರೀಕ್ಷಕರು-2, ನಂಜನಗೂಡು ವಲಯ, ನಂಜನಗೂಡು ಇವರು ನಂಜನಗೂಡು ತಾಲ್ಲೂಕು, ಬಿಳಿಗೆರೆ ಹೋಬಳಿ, ಸುತ್ತೂರು-ಹೊಸಕೋಟೆ ರಸ್ತೆ, ಆಲತ್ತೂರು ಸರ್ಕಲ್ ಬಳಿ ಕೆಎ-09/ಕ್ಯೂ-5977 ನೋಂದಣಿ ಸಂಖ್ಯೆಯ ಟಿವಿಎಸ್-50 ವಾಹನದಲ್ಲಿ ಅಕ್ರಮವಾಗಿ 17.280 ಲೀ.ನಕಲಿ ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಮಾಡಿ, ಪ್ರಕರಣ ಸಂಖ್ಯೆ:01/2008-09ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ನಿಯಮ 11, 13(1)(ಎ), 14ರ ರೀತ್ಯಾ ಅಪರಾಧವಾಗಿದ್ದು, ಇದೇ ಕಾಯಿದೆ ನಿಯಮ 32, 34, 38(ಎ)ರ ಪ್ರಕಾರ ಶಿಕ್ಷಾರ್ಹವಾದ್ದರಿಂದ ಆರೋಪಿ ಪರಾರಿಯಾಗಿರುವುದಾಗಿ ಮೊಕದ್ದಮೆ ದಾಖಲಿಸಿ, ಸಂಬಂಧಪಟ್ಟ ದಾಖಲಾತಿಗಳನ್ನು ಮುಂದಿನ ಕ್ರಮಕ್ಕಾಗಿ ಈ ಪ್ರಾಧಿಕಾರಕ್ಕೆ ಸಲ್ಲಿಸುತ್ತಾರೆ.

ವಾಹನದ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಈ ಪ್ರಾಧಿಕಾರದಿಂದ ದಿನಾಂಕ:02.09.2008 ರಂದು ಪತ್ರ ಬರೆಯಲಾಗಿದ್ದು, ಇದಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಕಾರಣ ದಿನಾಂಕ:05.11.2008ರಂದು ಮತ್ತೊಮ್ಮೆ ಪತ್ರ ವ್ಯವಹಾರ ನಡೆಸಲಾಗಿರುತ್ತದೆ.

ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು, ಪ್ರಕರಣದ ಪೂರ್ಣ ದಾಖಲಾತಿಗಳನ್ನು ಮತ್ತು ಸದರಿ ವಾಹನದ 'ಬಿ' ವಹಿಯ ಪ್ರತಿಯನ್ನು ಪಡೆದು, ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಅದನ್ನು ಪರಿಶೀಲಿಸಲಾಗಿ ಎಂ.ಎನ್. ರಾಮು ಬಿನ್ ನಂಜಪ್ಪ, ನಂ.4461, 7ನೇ ಕ್ರಾಸ್, ಸೆಂಟ್ ಮೆರೀಸ್ ರಸ್ತೆ, ಎನ್.ಆರ್. ಮೊಹಲ್ಲಾ, ಮೈಸೂರು ಇವರ ಒಡೆತನದಲ್ಲಿದ್ದು, ಸದರಿ ವಾಹನ ಮಾಲೀಕರಿಗೆ ಈ ಪ್ರಾಧಿಕಾರದಿಂದ ದಿನಾಂಕ:29.11.2008 ರಂದು ವಾಹನ ಮತ್ತು ಮದ್ಯವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದೆಂದು ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸ್‌ನ್ನು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿದ್ದು, ಸದರಿ ನೋಟಿಸ್‌ನ್ನು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು ದಿನಾಂಕ:20.01.2009 ರಂದು ಜಾರಿಗೊಳಿಸಿ, ಅಗತ್ಯ ಸ್ವೀಕೃತಿ ಪಡೆದು, ಈ ಪ್ರಾಧಿಕಾರಕ್ಕೆ ವರದಿ ಮಾಡಿರುತ್ತಾರೆ. ಎಂ.ಎನ್. ರಾಮು ಇವರು ದಿನಾಂಕ:23.01.2009 ರಂದು ಅರ್ಜಿಯನ್ನು ಸಲ್ಲಿಸಿ, ನಕಲಿ ಮದ್ಯಕ್ಕೂ ಈ ವಾಹನಕ್ಕೂ ಯಾವುದೇ ಸಂಬಂಧ ಇರುವುದಿಲ್ಲವೆಂದು ವಾಹನವನ್ನು ಮಾರಾಟ (Delivery Note) ಮಾಡಿರುವ ಬಗ್ಗೆ ಅಗತ್ಯ ದಾಖಲೆಯನ್ನು ಹಾಜರುಪಡಿಸಿರುತ್ತಾರೆ. ಅದರಂತೆ ಕುಮಾರ್‌ನಾಯ್ಕ್ ಬಿನ್ ಕುಳ್ಳೇನಾಯಕ, ನಂ.2551, 3ನೇ ಕ್ರಾಸ್, ಕಾಳಿದಾಸ ರಸ್ತೆ, ಮೈಸೂರು ಇವರಿಗೂ ಸಹ ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸನ್ನು ದಿನಾಂಕ:26.05.2009ರಂದು ಜಾರಿಗೊಳಿಸಲಾಗಿರುತ್ತದೆ.

ಈ ಪ್ರಕರಣದಲ್ಲಿ ವಶಪಡಿಸಿಕೊಂಡ ಮಾದಕ ದ್ರವ್ಯಗಳ ಪೈಕಿ ಮಾದರಿ ತೆಗೆಯಲಾಗದ ಮದ್ಯವನ್ನು ಕೇಂದ್ರ ರಾಸಾಯನಿಕ ಪ್ರಾಯೋಗಾಲಯಕ್ಕೆ ಒಳಪಡಿಸಿ, ದಿನಾಂಕ:11.08.2008ರ ವರದಿಯಲ್ಲಿ ಈಥೈಲ್ ಆಲ್ಕೋಹಾಲ್ ಕಂಡುಬಂದಿದ್ದು, ಭಾರತ ಮಾನಕ ಬ್ಯೂರೋದ ಮಾನಕಕ್ಕೆ ಅನುಗುಣವಾಗಿಲ್ಲದಿರುವುದರಿಂದ ಇವು ನಕಲಿ ಮದ್ಯವಾಗಿರುತ್ತವೆಂದು ದೃಢಪಡಿಸಿರುತ್ತಾರೆ. ಅಕ್ರಮವಾಗಿ ನಕಲಿ ಮದ್ಯವನ್ನು ತಯಾರಿಸಿ, ಸಾಗಾಣಿಕೆ, ಮಾರಾಟ ಇತ್ಯಾದಿ ಚಟುವಟಿಕೆಗಳಲ್ಲಿ ತೊಡಗಿಕೊಂಡು, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟುಮಾಡುವುದಲ್ಲದೇ, ಸರ್ಕಾರದ ಉದ್ದೇಶವನ್ನು ವಿಫಲಗೊಳಿಸುವಲ್ಲಿ ಕಾರ್ಯಪ್ರವೃತ್ತವಾಗಿರುವುದು ಕಂಡುಬಂದಿರುತ್ತದೆ.

ಕಡತ ಪರಿಶೀಲಿಸಲಾಯಿತು. ದಿನಾಂಕ:08.07.2008ರಂದು ನಂಜನಗೂಡು ತಾಲ್ಲೂಕು, ಬಿಳಿಗೆರೆ ಹೋಬಳಿ, ಸುತ್ತೂರು-ಹೊಸಕೋಟೆ ರಸ್ತೆ, ಆಲತ್ತೂರು ಸರ್ಕಲ್ ಬಳಿ ಕೆಎ-09/ಕ್ಯೂ-5977 ನೋಂದಣಿ ಸಂಖ್ಯೆಯ ಟಿವಿಎಸ್-50 ವಾಹನದಲ್ಲಿ ಅಕ್ರಮವಾಗಿ 17.280 ಲೀ. ನಕಲಿ ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಸಂದರ್ಭದಲ್ಲಿ ಆರೋಪಿ ತಲೆ ಮರೆಸಿಕೊಂಡಿರುತ್ತಾನೆ. 'ಬಿ' ವಹಿರನ್ವಯ ಸದರಿ ವಾಹನ ಮಾಲೀಕರಾದ ಎಂ.ಎಸ್. ರಾಮು, ಕುಮಾರ್‌ನಾಯ್ಕ್ ಇವರುಗಳಿಗೆ ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದರೂ ಸಹ ಈ ವಾಹನಕ್ಕೆ ಸಂಬಂಧಪಟ್ಟ ಆರೋಪಿಯಾಗಲೀ/ ವಾಹನ ಮಾಲೀಕರಾಗಲೀ ಈ ಪ್ರಾಧಿಕಾರದ ಮುಂದೆ ತಮ್ಮ ನಿಲುವು ಏನೆಂಬುದನ್ನು ಮತ್ತು ತಮ್ಮ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಪ್ರಥಮ ಮಾಹಿತಿ ವರದಿಯಲ್ಲಿ ಆರೋಪಿಯು ತಲೆ ಮರೆಸಿಕೊಂಡಿರುವುದಾಗಿ ಮೊಕದ್ದಮೆಯನ್ನು ದಾಖಲಿಸಿ, ಸುಮಾರು (10) ತಿಂಗಳಿಗೂ ಹೆಚ್ಚು ಕಾಲ ಕಳೆದಿರುತ್ತದೆ. ಇಂತಹ ಪ್ರಕರಣಗಳಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ರ ಅಡಿಯಲ್ಲಿ ಮೊಕದ್ದಮೆ ದಾಖಲಾದ ದಿನದಿಂದ ಒಂದು ತಿಂಗಳೊಳಗಾಗಿ ವಾಹನ ಮತ್ತು ಮಾದಕ ದ್ರವ್ಯಗಳು ತನ್ನದೆಂದು ಮಾಲೀಕತ್ವ ನಿರೂಪಿಸಲು ಮುಂದೆ ಬಾರದಿದ್ದ ಪಕ್ಷದಲ್ಲಿ ಅಂತಹ ವಾಹನ ಮತ್ತು ಮಾದಕ ದ್ರವ್ಯಗಳನ್ನು ಕಲಂ 43(ಸಿ) ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅವಕಾಶವಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (10) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೇ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:04/2008-09, ದಿನಾಂಕ:4ನೇ ಜೂನ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ಉಪ ನಿರೀಕ್ಷಕರು-2, ನಂಜನಗೂಡು ವಲಯ, ನಂಜನಗೂಡು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:01/2008-09, ದಿನಾಂಕ:08.07.2008ರಂದು ವಶಪಡಿಸಿಕೊಂಡ ಕೆಎ-09/ಕ್ಯೂ-5977 ನೋಂದಣಿ ಸಂಖ್ಯೆಯ ಟಿವಿಎಸ್-50 ವಾಹನ ಮತ್ತು 17.280 ಲೀ. ನಕಲಿ ಮದ್ಯವನ್ನು (ಮಾದರಿ ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಜೂನ್ ತಿಂಗಳ 4ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-608

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:196(ಪೊಲೀಸ್)/2009-10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ನಿರೀಕ್ಷಕರು, ವಿಶೇಷ ಪೊಲೀಸ್ ಠಾಣೆ, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ, ಮೈಸೂರು ಜಿಲ್ಲೆ.		ಗುರು ಬಿನ್ ಲಿಂಗಯ್ಯ, ಲೋಕೇಶ್ ಬಿನ್ ಶಿವಲಿಂಗೇಗೌಡ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:12.06.2009ರಂದು ಸಂಜೆ 5.30 ಗಂಟೆ ಸಮಯದಲ್ಲಿ ಆರಕ್ಷಕ ನಿರೀಕ್ಷಕರು, ವಿಶೇಷ ಪೊಲೀಸ್ ಠಾಣೆ, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ, ಮೈಸೂರು ಜಿಲ್ಲೆ ಇವರು ಕೆ.ಆರ್.ನಗರ ತಾಲ್ಲೂಕು, ಗರುಡಗಂಬದ ವೃತ್ತ, ಹೊಳೆನರಸೀಪುರ ರಸ್ತೆಯಲ್ಲಿ ಅಕ್ರಮವಾಗಿ 457.920 ಲೀ. ಮದ್ಯವನ್ನು ಕೆಎ-05-/ಬಿ-2486 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:12/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಗಳನ್ನು ದಸ್ತಗಿರಿ ಮಾಡಿ, ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:15.06.2009ರಂದು ಈ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:18.06.2009ರಂದು ಕೆ.ಆರ್.ನಗರ ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:17.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:12.04.2009ರಂದು ಕೆ.ಆರ್.ನಗರ ತಾಲ್ಲೂಕು, ಗರುಡಗಂಬದ ವೃತ್ತ, ಹೊಳೆನರಸೀಪುರ ರಸ್ತೆಯಲ್ಲಿ ಅಕ್ರಮವಾಗಿ 457.920 ಲೀ.ಮದ್ಯವನ್ನು ಕೆಎ-05/ಬಿ-2486 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ವಾಹನಕ್ಕೆ ಸಂಬಂಧಪಟ್ಟ ಆರೋಪಿಯಾಗಲೀ, ವಾಹನ ಮಾಲೀಕರಾಗಲೀ ತಮ್ಮ ನಿಲುವು ಏನೆಂಬುದನ್ನು ಮತ್ತು ಮಾಲೀಕರ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:196(ಪೊಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕರ ನಿರೀಕ್ಷಕರು, ವಿಶೇಷ ಪೊಲೀಸ್ ಠಾಣೆ, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:12/2009, ದಿನಾಂಕ:12.06.2009 ರಂದು ವಶಪಡಿಸಿಕೊಂಡ ಕೆಎ–05–/ಬಿ–2486 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನವನ್ನು (457.920 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 8ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್–1166

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:26(ಪೊಲೀಸ್)/2009–10, ದಿನಾಂಕ:15ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	ವಿರುದ್ಧ	ಪ್ರತಿವಾದಿ/ ಆರೋಪಿ
ಆರಕ್ಷಕ ಉಪ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ನಗರ		ಶಿವಕುಮಾರ್ ಬಿನ್ ರಾಮಯ್ಯ ಬಿಡದಿ ಹೋ: ರಾಮನಗರ ಜಿಲ್ಲೆ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:22.07.2009ರಂದು ಮಧ್ಯಾಹ್ನ 12.45 ಗಂಟೆ ಸಮಯದಲ್ಲಿ ಆರಕ್ಷಕ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ನಗರ ಇವರು ಮೈಸೂರು ನಗರ, ಉದಯಗಿರಿ–ಮಹದೇವಪುರ ರಸ್ತೆ, ಸಾತಗಳ್ಳಿ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋ ಮುಂಭಾಗದಲ್ಲಿ ಅಕ್ರಮವಾಗಿ 32.400 ಲೀ. ಮದ್ಯ ಮತ್ತು 3.300 ಲೀ. ಬಿಯರ್‌ನ್ನು ಕೆಎ–09/ಇಕೆ–8400 ನೋಂದಣಿ ಸಂಖ್ಯೆಯ ಟಿವಿಎಸ್ ಸ್ಕೂಟಿ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:05/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಯನ್ನು ದಸ್ತಗಿರಿ ಮಾಡಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:23.07.2009ರಂದು ಈ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:28.07.2009ರಂದು ಮೈಸೂರು ವಲಯ–2 ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:24.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:22.07.2009ರಂದು ಮೈಸೂರು ನಗರ, ಉದಯಗಿರಿ–ಮಹದೇವಪುರ ರಸ್ತೆ, ಸಾತಗಳ್ಳಿ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋ ಮುಂಭಾಗದಲ್ಲಿ ಅಕ್ರಮವಾಗಿ 32.400 ಲೀ ಮದ್ಯ ಮತ್ತು 3.300 ಲೀ. ಬಿಯರ್‌ನ್ನು ಕೆಎ–09/ಇಕೆ–8400 ನೋಂದಣಿ ಸಂಖ್ಯೆಯ ಟಿವಿಎಸ್ ಸ್ಕೂಟಿ ವಾಹನದಲ್ಲಿ

ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಬಗ್ಗೆ ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (3) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:26(ಪೊಲೀಸ್)/2009-10, ದಿನಾಂಕ:15ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕರ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ನಗರ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:05/2009, ದಿನಾಂಕ:22.07.2009 ರಂದು ವಶಪಡಿಸಿಕೊಂಡ ಕೆಎ-09-/ಇಕೆ-8400 ನೋಂದಣಿ ಸಂಖ್ಯೆಯ ಟಿವಿಎಸ್ ಸ್ಕೂಟಿ ವಾಹನವನ್ನು (32.400 ಲೀ. ಮದ್ಯ ಮತ್ತು 3.300 ಲೀ. ಬಿಯರ್‌ನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 15ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1167

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:04(ಪೊಲೀಸ್)/2009-10, ದಿನಾಂಕ:15ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ.		ಗೋವಿಂದ ಬಿನ್ ಪುಟ್ಟಬಳೇಗೌಡ, ಗೊದ್ದನಪುರ, ನಂಜನಗೂಡು ತಾ:

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:29.06.2009ರಂದು ರಾತ್ರಿ 10.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ ಇವರು ಗೊದ್ದನಪುರ-ಬ್ಯಾತನಳ್ಳಿಗೆ ಹೋಗುವ ಕೂಡು

ರಸ್ತೆ, ಟಾಟಾ ಮೈನ್ಸ್, ದೊಡ್ಡಕಾನ್ಯ, ಮೈಸೂರು ತಾ: ಬಳಿ ಅಕ್ರಮವಾಗಿ 17.280 ಲೀ. ನಕಲಿ ಮದ್ಯವನ್ನು ಸಿಎಜೆಡ್-1363 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ: 20/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಯನ್ನು ದಸ್ತಗಿರಿ ಮಾಡಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:01.07.2009ರಂದು ವರದಿಯೊಂದನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:13.07.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ಕೇಂದ್ರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:24.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:29.06.2009ರಂದು ಗೊದ್ದನಪುರ-ಬ್ಯಾತನಳ್ಳಿಗೆ ಹೋಗುವ ಕೂಡು ರಸ್ತೆ, ಟಾಟಾ ಮೈನ್ಸ್, ದೊಡ್ಡಕಾನ್ಯ, ಮೈಸೂರು ತಾ: ಬಳಿ ಅಕ್ರಮವಾಗಿ 17.280 ಲೀ. ನಕಲಿ ಮದ್ಯವನ್ನು ಸಿಎಜೆಡ್-1363 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (3) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:04(ಪೊಲೀಸ್)/2009-10, ದಿನಾಂಕ:15ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕರ ನಿರೀಕ್ಷಕರು, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ವಿಭಾಗ, ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:20/2009, ದಿನಾಂಕ:29.06.2009 ರಂದು ವಶಪಡಿಸಿಕೊಂಡ ಸಿಎಜೆಡ್-1363 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ವಾಹನವನ್ನು (17.280 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 15ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1168

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:197(ಪೊಲೀಸ್)/2009-10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ, ಕೆ.ಆರ್.ನಗರ ತಾಲ್ಲೂಕು.		ಮಾದನಾಯ್ಕ ಬಿನ್ ಮಾದನಾಯ್ಕ, ಹೊಸೂರುಕಲ್ಲಹಳ್ಳಿ, ಕೆ.ಆರ್.ನಗರ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:10.05.2009ರಂದು ಬೆಳಿಗ್ಗೆ 10.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ ಇವರು ಕೆ.ಆರ್.ನಗರ ತಾಲ್ಲೂಕು, ಕಗ್ಗೇರಿ ಗ್ರಾಮದ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಂಭಾಗದಲ್ಲಿ ಅಕ್ರಮವಾಗಿ 18 ಲೀ. ಮದ್ಯವನ್ನು ಕೆಎ-0/ವಿ-9334 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:134/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14, 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಯನ್ನು ದಸ್ತಗಿರಿ ಮಾಡಿ, ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:19.06.2009ರಂದು ವರದಿಯೊಂದನ್ನು ಸಲ್ಲಿಸಿ, ಮುಂದಿನ ಕ್ರಮಕ್ಕಾಗಿ + ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:24.06.2009ರಂದು ಕೆ.ಆರ್.ನಗರ ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:17.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:10.05.2009ರಂದು ಕೆ.ಆರ್.ನಗರ ತಾಲ್ಲೂಕು, ಕಗ್ಗೇರಿ ಗ್ರಾಮದ ರಸ್ತೆಯ ಬಳಿ ಅಕ್ರಮವಾಗಿ 18 ಲೀ. ಮದ್ಯವನ್ನು ಕೆಎ-0/ವಿ-9334 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ವಾಹನಕ್ಕೆ ಸಂಬಂಧಪಟ್ಟ ಆರೋಪಿಯಾಗಲೀ/ ವಾಹನ ಮಾಲೀಕರಾಗಲೀ ತಮ್ಮ ನಿಲುವು ಏನೆಂಬುದನ್ನು ಮತ್ತು ಮಾಲೀಕರ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (4) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:197(ಪೊಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕರ ಉಪ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:134/2009, ದಿನಾಂಕ:10.05.2009 ರಂದು ವಶಪಡಿಸಿಕೊಂಡ ಕೆಎ–0/ಎನ್–9334 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನವನ್ನು (18 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 8ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್–1169

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:198(ಪೊಲೀಸ್)/2009–10, ದಿನಾಂಕ:15ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ, ಕೆ.ಆರ್.ನಗರ ತಾಲ್ಲೂಕು.		ಕುಮಾರ್ ಬಿನ್ ಲೇ: ಮಲ್ಲೇಗೌಡ, ಗಂಧನಹಳ್ಳಿ, ಕೆ.ಆರ್.ನಗರ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:12.04.2009ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ ಇವರು ಕೆ.ಆರ್.ನಗರ ತಾಲ್ಲೂಕು, ಮಂಚನಹಳ್ಳಿ ಗ್ರಾಮ, ಮಂಚನಹಳ್ಳಿ–ಗಂಧನಹಳ್ಳಿ ರಸ್ತೆಯ ಬಳಿ ಅಕ್ರಮವಾಗಿ 5.760 ಲೀ. ಮದ್ಯವನ್ನು ಕೆಎ–05–/ಆರ್–8554 ನೋಂದಣಿ ಸಂಖ್ಯೆಯ ಬಜಾಜ್ ಸ್ಕೂಟರ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:108/ 2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14, 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಯನ್ನು ದಸ್ತಗಿರಿ ಮಾಡಿ, ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:19.06.2009ರಂದು ಈ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:24.06.2009ರಂದು ಕೆ.ಆರ್.ನಗರ ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:17.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:12.04.2009ರಂದು ಕೆ.ಆರ್.ನಗರ ತಾಲ್ಲೂಕು, ಮಂಚನಹಳ್ಳಿ ಗ್ರಾಮ, ಮಂಚನಹಳ್ಳಿ–ಗಂಧನಹಳ್ಳಿ ರಸ್ತೆಯ ಬಳಿ ಅಕ್ರಮವಾಗಿ 5.760 ಲೀ. ಮದ್ಯವನ್ನು ಕೆಎ–05/ಆರ್–8554 ನೋಂದಣಿ ಸಂಖ್ಯೆಯ ಬಜಾಜ್ ಸ್ಕೂಟರ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:198(ಪೊಲೀಸ್)/2009-10, ದಿನಾಂಕ:15ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕರ ನಿರೀಕ್ಷಕರು, ಕೆ.ಆರ್.ನಗರ ಪೊಲೀಸ್ ಠಾಣೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:108/2009, ದಿನಾಂಕ:12.04.2009 ರಂದು ವಶಪಡಿಸಿಕೊಂಡ ಕೆಎ-05/ಆರ್-8554 ನೋಂದಣಿ ಸಂಖ್ಯೆಯ ಬಜಾಜ್ ಸ್ಕೂಟರ್ ವಾಹನವನ್ನು (5.760 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 15ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1170

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:23/2008-09, ದಿನಾಂಕ:4ನೇ ಜೂನ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಅಬಕಾರಿ ನಿರೀಕ್ಷಕರು, ನಂಜನಗೂಡು ವಲಯ, ನಂಜನಗೂಡು.		ನಾಗರಾಜು ಬಿನ್ ಶಿವಣ್ಣ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:23.07.2008ರಂದು ಸಂಜೆ 5.00 ಗಂಟೆ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ನಂಜನಗೂಡು ವಲಯ, ನಂಜನಗೂಡು ಇವರು ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಹೋಬಳಿ, ಹುಲ್ಲಹಳ್ಳಿ-ಹುರಾ ಮುಖ್ಯ ರಸ್ತೆಯ ಮಲ್ಲುಂಡಿ ಬಸ್ ನಿಲ್ದಾಣದ ಬಳಿ ಅಕ್ರಮವಾಗಿ 7.200 ಲೀ. ನಕಲಿ ಮದ್ಯವನ್ನು ಕೆಎ-09/ಆರ್-5695 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸ್‌ಎಲ್ ಸೂಪರ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:03/2008-09ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 13 (1)(ಎ) ಮತ್ತು 14ರ ರೀತ್ಯಾ ಅಪರಾಧವಾಗಿದ್ದು, ಕಲಂ 32, 34, 38(ಎ) ಮತ್ತು 43ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಯನ್ನು ದಸ್ತಗಿರಿ ಮಾಡಿ, ನ್ಯಾಯಾಂಗ ಬಂಧನಕ್ಕೆ ಹಾಜರುಪಡಿಸಿರುವುದಾಗಿ ಮೊಕದ್ದಮೆ ದಾಖಲಿಸಿ, ಸಂಬಂಧಪಟ್ಟ ದಾಖಲಾತಿಗಳನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ನಂಜನಗೂಡು ವಲಯದ ಅಬಕಾರಿ ಉಪ ನಿರೀಕ್ಷಕರು, ದಿನಾಂಕ:30.07.2008ರ ಪತ್ರದಲ್ಲಿ ವಾಹನ ಮತ್ತು ಮದ್ಯವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ವರದಿ ಮಾಡಿರುತ್ತಾರೆ. ಹಾಗೆಯೇ ವಶಪಡಿಸಿಕೊಂಡ ವಾಹನದ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:02.09.2008ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದ್ದು, ಇದಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಕಾರಣ, ದಿನಾಂಕ:05.11.2008ರಂದು ಮತ್ತೊಮ್ಮೆ ಪತ್ರ ವ್ಯವಹಾರ ನಡೆಸಲಾಗಿರುತ್ತದೆ. ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರು, ಸದರಿ ವಾಹನದ 'ಬಿ' ವಹಿಯ ಪ್ರತಿಯನ್ನು ಪಡೆದು, ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಇದನ್ನು ಪರಿಶೀಲಿಸಲಾಗಿ, ಎನ್.ಲಕ್ಷ್ಮೀಕಾಂತ್ ರಾವ್ ಬಿನ್ ಹೆಚ್.ಪಿ. ನಾಗರಾಜರಾವ್, ನಂ.742, ಶ್ರೀನಿವಾಸ ನಿಲಯ, 24ನೇ ಕ್ರಾಸ್, 4ನೇ ಮೈನ್, ವಿದ್ಯಾರಣ್ಯಪುರಂ, ಮೈಸೂರು ಇವರ ಮಾಲೀಕತ್ವದಲ್ಲಿರುವುದು ಕಂಡುಬಂದಿರುತ್ತದೆ. ಸದರಿಯವರಿಗೆ ಈ ಪ್ರಾಧಿಕಾರದಿಂದ ದಿನಾಂಕ:29.11.2008ರಂದು ವಾಹನ ಮತ್ತು ನಕಲಿ ಮದ್ಯವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದೆಂದು ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸಿಗೆ ಪ್ರತಿಕ್ರಿಯಿಸಿ, ಮೇಲ್ಕಂಡ ವಾಹನವನ್ನು ದೊರೆಸ್ವಾಮಿ ಬಿನ್ ಶಿವಪ್ಪ, ಮೆಲ್ಲಹಳ್ಳಿ ಗ್ರಾಮ, ಹುಲ್ಲಹಳ್ಳಿ ಹೋಬಳಿ, ಹುರಾ ಅಂಚೆ, ನಂಜನಗೂಡು ತಾಲ್ಲೂಕು, ಇವರಿಗೆ ಖರೀದಿಗೆ ನೀಡಿರುವುದಾಗಿ, ದಿನಾಂಕ:12.01.2009ರಂದು ಲಿಖಿತ ಮೂಲಕ ತಿಳಿಸಿರುತ್ತಾರೆ. ಅಂತೆಯೇ ಇವರಿಗೂ ಸಹ ದಿನಾಂಕ:23.04.2009ರಂದು ಕಲಂ 43(ಬಿ)ರ ಅಡಿಯಲ್ಲಿ ನೀಡಲಾದ ಕಾರಣ ಕೇಳುವ ನೋಟೀಸ್‌ನ್ನು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿದ್ದು, ದೊರೆಸ್ವಾಮಿ ಇವರು ಇದಕ್ಕೆ ಪ್ರತಿಕ್ರಿಯಿಸಿ, ವಾಹನವನ್ನು ಮುಟ್ಟುಗೋಲು ಹಾಕಿಕೊಳ್ಳುವುದಕ್ಕೆ ನನ್ನ ಯಾವುದೇ ಅಭ್ಯಂತರವಿಲ್ಲವೆಂದು ಲಿಖಿತ ಮೂಲಕ ತಿಳಿಸಿರುತ್ತಾರೆ.

ಈ ಪ್ರಕರಣದಲ್ಲಿ ವಶಪಡಿಸಿಕೊಂಡ ಮಾದಕ ದ್ರವ್ಯಗಳ ಪೈಕಿ ಮಾದರಿ ತೆಗೆಯಲಾಗದ ಮದ್ಯವನ್ನು ಕೇಂದ್ರ ರಾಸಾಯನಿಕ ಪ್ರಾಯೋಗಾಲಯಕ್ಕೆ ಒಳಪಡಿಸಿ, ದಿನಾಂಕ:11.08.2008ರ ವರದಿಯಲ್ಲಿ ಈಥೈಲ್ ಆಲ್ಕೋಹಾಲ್ ಕಂಡುಬಂದಿದ್ದು, ಭಾರತ ಮಾನಕ ಬ್ಯೂರೋದ ಮಾನಕಕ್ಕೆ ಅನುಗುಣವಾಗಿಲ್ಲದಿರುವುದರಿಂದ ಇವು ನಕಲಿ ಮದ್ಯವಾಗಿರುತ್ತವೆಂದು ದೃಢಪಡಿಸಿರುತ್ತಾರೆ ಅಕ್ರಮವಾಗಿ ನಕಲಿ ಮದ್ಯವನ್ನು ತಯಾರಿಸಿ, ಸಾಗಾಣಿಕೆ, ಮಾರಾಟ ಇತ್ಯಾದಿ ಚಟುವಟಿಕೆಗಳಲ್ಲಿ ತೊಡಗಿಕೊಂಡು, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟುಮಾಡುವುದಲ್ಲದೇ, ಸರ್ಕಾರದ ಉದ್ದೇಶವನ್ನು ವಿಫಲಗೊಳಿಸುವಲ್ಲಿ ಕಾರ್ಯಪ್ರವೃತ್ತರಾಗಿರುವುದು ಕಂಡುಬಂದಿರುತ್ತದೆ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:23.07.2008ರಂದು ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಹೋಬಳಿ, ಹುಲ್ಲಹಳ್ಳಿ-ಹುರ ಮುಖ್ಯರಸ್ತೆಯ ಮಲ್ಕುಂಡಿ ಬಸ್ ನಿಲ್ದಾಣದ ಬಳಿ ಅಕ್ರಮವಾಗಿ 7.200 ಲೀ.ನಕಲಿ ಮದ್ಯವನ್ನು ಕೆಎ-09/ಆರ್-5695 ನೋಂದಣಿ ಸಂಖ್ಯೆ ಟಿವಿಎಸ್ ಎಕ್ಸ್‌ಎಲ್ ಸೂಪರ್ ವಾಹನದಲ್ಲಿ ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಸಂದರ್ಭದಲ್ಲಿ ನಾಗರಾಜ ಬಿನ್ ಶಿವಣ್ಣ ಇವರನ್ನು ದಸ್ತಗಿರಿಗೊಳಿಸಲಾಗಿರುತ್ತದೆ. ಅಲ್ಲದೇ ದೊರೆಸ್ವಾಮಿ ಮತ್ತು ಇವರಿಗೆ ಈ ಪ್ರಾಧಿಕಾರದಿಂದ ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳುವ ನೋಟೀಸ್ ನೀಡಲಾಗಿದ್ದು, ಈ ವಾಹನಕ್ಕೆ ಸಂಬಂಧಪಟ್ಟ ಆರೋಪಿಯಾಗಲೀ/ ವಾಹನ ಮಾಲೀಕರಾಗಲೀ ತಮ್ಮ ನಿಲುವು ಏನೆಂಬುದನ್ನು ವಾಹನ ಬಿಡುಗಡೆಗಾಗಿ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (10) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:23/2008-09, ದಿನಾಂಕ:4ನೇ ಜೂನ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಬಿ) ರ ಪ್ರಕಾರ ಅನುಸರಿಸಬೇಕಾದ ಕ್ರಮಗಳನ್ನೆಲ್ಲಾ ಅನುಸರಿಸಿದ ನಂತರ ಕಲಂ 43(ಎ) (2) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ನಿರೀಕ್ಷಕರು, ನಂಜನಗೂಡು ವಲಯ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:03/2008-09, ದಿನಾಂಕ:23.07.2008 ರಂದು ವಶಪಡಿಸಿಕೊಂಡ ಕೆಎ-09/ಆರ್-5695 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸ್‌ಎಲ್ ಸೂಪರ್ ವಾಹನ ಮತ್ತು 7.200 ಲೀ. ನಕಲಿ ಮದ್ಯವನ್ನು (ಮಾದರಿ ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಜೂನ್ ತಿಂಗಳ 4ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ|| ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-600

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:71(ಪೊಲೀಸ್)/2008-09, ದಿನಾಂಕ:22ನೇ ಅಕ್ಟೋಬರ್, 2009

ಉಪಸ್ಥಿತರು: ಡಾ|| ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಅ.ಜಾ. ಮತ್ತು ಲಾ.ನಿ.ದ. ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ.		ಮಹದೇವು ಅ ಕುಂಡ ಬಿನ್ ನಿಂಗಶೆಟ್ಟಿ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:31.08.2009ರಂದು ಮಧ್ಯಾಹ್ನ 3.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಅ.ಜಾ. ಮತ್ತು ಲಾ.ನಿ.ದ. ವಿಶೇಷ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ ಇವರು ನಂಜನಗೂಡು ತಾಲ್ಲೂಕು, ಬಸವನಪುರ ಗೇಟ್ ಬಳಿ ಹತ್ತಿರ ಅಕ್ರಮವಾಗಿ 10.800 ಲೀ. ಮದ್ಯವನ್ನು ಕೆಎ-09/ಇಬಿ-186 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ಸೂಪರ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:30/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಗಳನ್ನು ದಸ್ತಗಿರಿ ಮಾಡಿ, ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:10.09.2009ರಂದು ಈ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:11.09.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:24.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:31.08.2009ರಂದು ನಂಜನಗೂಡು ತಾಲ್ಲೂಕು, ಬಸವನಪುರ ಗೇಟ್ ಬಳಿ ಹತ್ತಿರ ಅಕ್ರಮವಾಗಿ 10.800 ಲೀ. ಮದ್ಯವನ್ನು ಕೆಎ-09/ಇಬಿ-186 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ಸೂಪರ್ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ಬಗ್ಗೆ ವಾಹನದ

ಮಾಲೀಕರು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (2) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:71(ಪೊಲೀಸ್)/2008-09, ದಿನಾಂಕ:22ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ನಿರೀಕ್ಷಕರು, ವಿಶೇಷ ಪೊಲೀಸ್ ಠಾಣೆ, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:30/2009 ದಿನಾಂಕ:31.08.2009 ರಂದು ವಶಪಡಿಸಿಕೊಂಡ ಕೆಎ-09/ಇಬಿ-186 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ಸೂಪರ್ ವಾಹನವನ್ನು (10.880 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 22ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1195

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:172(ಪೊಲೀಸ್)/2008-09, ದಿನಾಂಕ:22ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ಹೆಚ್.ಡಿ.ಕೋಟೆ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ.		ಎಂ.ಡಿ. ರಾಜು ಬಿನ್ ಕೆ.ದಾಸಪ್ಪ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:11.05.2009ರಂದು ರಾತ್ರಿ 11.00 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಹೆಚ್.ಡಿ. ಕೋಟೆ ಪೊಲೀಸ್ ಠಾಣೆ, ಇವರು ಹೆಚ್.ಡಿ. ಕೋಟೆ ತಾಲ್ಲೂಕು, ನಾಗನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಹತ್ತಿರ ಅಕ್ರಮವಾಗಿ 11.880 ಲೀ. ಮದ್ಯವನ್ನು ಕೆಎಲ್-11/ಜೆ-9914 ನೋಂದಣಿ ಸಂಖ್ಯೆಯ ಆಟೋ ರಿಕ್ಷಾ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:138/2009ರಲ್ಲಿ ಕರ್ನಾಟಕ

ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿಗಳನ್ನು ದಸ್ತಗಿರಿ ಮಾಡಿ, ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿ ಮತ್ತು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ದಿನಾಂಕ:11.06.2009ರಂದು ಈ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಮದ್ಯವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಅನುಮತಿಗಾಗಿ ಕೋರಿರುತ್ತಾರೆ. ದಿನಾಂಕ:12.06.2009ರಂದು ಹೆಚ್.ಡಿ. ಕೋಟೆ ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಸಾರಿಗೆ ಆಯುಕ್ತರು, ತಿರುವನಂತಪುರಂ, ಕೇರಳ ಇವರಿಗೆ ದಿನಾಂಕ:17.09.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:11.05.2009ರಂದು ಹೆಚ್.ಡಿ. ಕೋಟೆ ಪೊಲೀಸ್ ಠಾಣೆ, ಇವರು ಹೆಚ್.ಡಿ. ಕೋಟೆ ತಾಲ್ಲೂಕು, ನಾಗನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಹತ್ತಿರ ಅಕ್ರಮವಾಗಿ 11.880 ಲೀ. ಮದ್ಯವನ್ನು ಕೆಎಲ್-11/ಜೆ-9914 ನೋಂದಣಿ ಸಂಖ್ಯೆಯ ಆಟೋ ರಿಕ್ಷಾ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಈ ವಾಹನಕ್ಕೆ ಸಂಬಂಧಪಟ್ಟ ಆರೋಪಿಯಾಗಲೀ/ ವಾಹನ ಮಾಲೀಕರಾಗಲೀ ತಮ್ಮ ನಿಲುವು ಏನೆಂಬುದನ್ನು ಮತ್ತು ಮಾಲೀಕರ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಇದುವರೆವಿಗೂ ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಹಾಗೂ ವಾಹನ ಬಿಡುಗಡೆಗಾಗಿ ಪ್ರತಿವಾದಿಗಳ ಕಡೆಯಿಂದ ಯಾವುದೇ ಪ್ರಯತ್ನ ನಡೆಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:172(ಪೊಲೀಸ್)/2008-09, ದಿನಾಂಕ:22ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ)(2)ರ ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ನಿರೀಕ್ಷಕರು, ವಿಶೇಷ ಪೊಲೀಸ್ ಠಾಣೆ, ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:138/2009, ದಿನಾಂಕ:11.05.2009 ರಂದು ವಶಪಡಿಸಿಕೊಂಡ ಕೆಎಲ್-11/ಜೆ-9914 ನೋಂದಣಿ ಸಂಖ್ಯೆಯ ಆಟೋ ರಿಕ್ಷಾ ವಾಹನವನ್ನು (11.880 ಲೀ. ಮದ್ಯವನ್ನು ಮಾದರಿ ಹೊರತುಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 22ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1196

ಆದಾಯ ದೃಢೀಕರಣ ಪತ್ರ, ಇತ್ಯಾದಿ ಹಾಗೂ ತಹಶೀಲ್ದಾರ್ ರವರು ವಹಿಸುವ ಇತರೆ ಆಡಳಿತಾತ್ಮಕ ಕಾರ್ಯನಿರ್ವಹಣೆ.

11. ಗ್ರಾಮಲೆಕ್ಕಿಗರು:- ಗ್ರಾಮ ವೃತ್ತ ಮಟ್ಟದಲ್ಲಿ ಕಾರ್ಯನಿರ್ವಹಣೆ, ರಾಜಸ್ವ ನಿರೀಕ್ಷಕರ ನಿಯಂತ್ರಣದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಕಡತ ತಯಾರಿಕೆ, ಹಕ್ಕು ಬದಲಾವಣೆ, ಪ್ರಕೃತಿ ವಿಕೋಪ, ಭೂ ಕಂದಾಯ ವಸೂಲಾತಿ, ಸರ್ಕಾರಿ ಬಾಕಿ ವಸೂಲಾತಿ, ಚುನಾವಣಾ ಕಾರ್ಯನಿರ್ವಹಣೆ, ಭೂ ಮಂಜೂರಾತಿ, ಭೂ ಸ್ವಾಧೀನ, ಭೂ ಪರಿವರ್ತನೆ, ಜಾತಿ ಮತ್ತು ಆದಾಯ ದೃಢೀಕರಣ ಪತ್ರ, ಇತ್ಯಾದಿ ಕಾರ್ಯನಿರ್ವಹಣೆ.

12. ಧಪ್ತರ್ ಬಂದ್:- ಅಭಿಲೇಖಾಲಯದಲ್ಲಿ ಕಡತಗಳ ನಿರ್ವಹಣೆ, ಹಾಗೂ ಜೋಡಣೆ ಕಾರ್ಯನಿರ್ವಹಿಸುವುದು ಮತ್ತು ತಹಶೀಲ್ದಾರ್ ರವರು ವಹಿಸುವ ಕಾರ್ಯ ನಿರ್ವಹಣೆ.

13. ಡಿ-ದರ್ಜೆ ನೌಕರರು:- ಕಛೇರಿಯ ಸ್ವಚ್ಛತೆ, ಕಡತ ಹಾಗೂ ಟಪಾಲುಗಳ ಜಾರಿ ಮಾಡುವುದು ಹಾಗೂ ರಾಜಸ್ವ ನಿರೀಕ್ಷಕರು ನೀಡುವ ನೋಟೀಸ್ ಜಾರಿ ಮಾಡುವುದು.

14. ವಾಹನ ಚಾಲಕರು:- ಕಛೇರಿ ವಾಹನದ ಸುರಕ್ಷತೆಯ ಚಾಲನೆ ಸ್ವಚ್ಛತೆ ಹಾಗೂ ನಿರ್ವಹಣೆ.

ಹಕ್ಕು ದಾಖಲಾತಿ ಶಿರಸ್ತೇದಾರರು:- ಹಕ್ಕು ದಾಖಲಾತಿ ಶಾಖೆಯ ಸಂಪೂರ್ಣ ಮೇಲ್ವಿಚಾರಣೆ ನಡೆಸುತ್ತಾರೆ. ಇವರ ಮೇಲ್ವಿಚಾರಣೆಯಲ್ಲಿ ಗಣಕ ಶಾಖೆ, ತಾಲ್ಲೂಕು ಸರ್ವೇಯರ್ ರವರ ಕಾರ್ಯನಿರ್ವಹಣೆಯ ಮೇಲ್ವಿಚಾರಣೆ, ಕಂದಾಯ ತನಿಖಾಧಿಕಾರಿಗಳು ಮತ್ತು ಗ್ರಾಮ ಲೆಕ್ಕಿಗರ ದಪ್ತರ್ ತನಿಖೆಗಳು, ಪೋಡಿ ಶಾಖೆ, ನೆಮ್ಮದಿ ಕೇಂದ್ರಗಳು, ಕಂದಾಯ ಲೆಕ್ಕಪತ್ರಗಳ ಪರಿಶೋಧನೆ, ಕಛೇರಿ ತಪಾಸಣೆಗಳಿಗೆ ಅನುವರ್ತನಾ ವರದಿ ಸಲ್ಲಿಸುವುದು, ಹಾಗೂ ಇತ್ಯಾದಿ ಶಾಖೆಗಳ ಮೇಲ್ವಿಚಾರಣೆ ನಡೆಸಿ ತಹಶೀಲ್ದಾರ್ ರವರಿಗೆ ಕಡತ ಸಲ್ಲಿಸುವ ಕಾರ್ಯನಿರ್ವಹಿಸುತ್ತಾರೆ.

1. ದ್ವಿ.ದ.ಸ-1:- ಹಕ್ಕು ದಾಖಲಾತಿ ಶಾಖೆಯ ಕಾರ್ಯನಿರ್ವಹಣೆ, ವಿವಾದಾತ್ಮಕ ಪ್ರಕರಣಗಳ ಕಡತ ನಿರ್ವಹಣೆ, ಪಹಣಿ ತಿದ್ದುಪಡಿ ಪ್ರಕರಣಗಳ ಕಾರ್ಯನಿರ್ವಹಣೆ,
2. ದ್ವಿ.ದ.ಸ-2:- ಪೋಡಿ ಶಾಖೆ, ನೆಮ್ಮದಿ ಕೇಂದ್ರಗಳ ಕಾರ್ಯನಿರ್ವಹಣೆ.
3. ಆರ್.ಆರ್. ಅಟೆಂಡರ್:- ಹಕ್ಕು ದಾಖಲಾತಿ ಶಾಖೆಯಲ್ಲಿ ಕಡತಗಳ ಜೋಡಣೆ, ಸ್ವಚ್ಛತೆ, ಹಾಗೂ ನಿರ್ವಹಣೆ ಕಾರ್ಯ ನಿರ್ವಹಿಸುವುದು.

ಚುನಾವಣಾ ಶಿರಸ್ತೇದಾರರು:- ಚುನಾವಣೆಗೆ ಸಂಬಂಧಪಟ್ಟ ವಿಶಿಷ್ಟ ಕಾರ್ಯನಿರ್ವಹಣೆ, ಮತದಾರರ ಪಟ್ಟಿ ಪರಿಷ್ಕರಣೆ, ಇತ್ಯಾದಿ ಕಾರ್ಯನಿರ್ವಹಣೆ ಮಾಡಿ ತಹಶೀಲ್ದಾರ್ ರವರಿಗೆ ಕಡತ ಸಲ್ಲಿಸುವ ಕಾರ್ಯನಿರ್ವಹಿಸುತ್ತಾರೆ.

ಪ್ರ.ದ.ಸ.1:- ಕೇಂದ್ರ ಚುನಾವಣಾ ಆಯೋಗದ ಚುನಾವಣಾ ಕಾರ್ಯಗಳ ನಿರ್ವಹಣೆ,

ಪ್ರ.ದ.ಸ.2:- ರಾಜ್ಯ ಚುನಾವಣಾ ಆಯೋಗದ ಚುನಾವಣಾ ಕಾರ್ಯಗಳ ನಿರ್ವಹಣೆ.

ದ್ವಿ.ದ.ಸ.1:- ರಾಜ್ಯ ಚುನಾವಣಾ ಆಯೋಗದ ಚುನಾವಣಾ ಕಾರ್ಯಗಳ ನಿರ್ವಹಣೆ.

ಉಪ ತಹಶೀಲ್ದಾರ್:- ನಾಡ ಕಛೇರಿಯ ಮುಖ್ಯಸ್ಥರಾಗಿದ್ದು, ಹೋಬಳಿ ಮಟ್ಟದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳಾದ ಓ.ಎ.ಪಿ. ಪಿ.ಹೆಚ್.ಪಿ., ಡಿ.ಡಬ್ಲ್ಯೂ.ಪಿ, ಸಂಧ್ಯಾ ಸುರಕ್ಷಾ ಯೋಜನೆ. ಹಕ್ಕುದಾಖಲಾತಿ ಪ್ರಕರಣಗಳ ವಿಚಾರಣೆ ನಡೆಸುವುದು, ಕಂದಾಯ ತನಿಖಾಧಿಕಾರಿಗಳು ಹಾಗೂ ಗ್ರಾಮ ಲೆಕ್ಕಿಗರ ದಪ್ತರ್ ತನಿಖೆ, ಇತ್ಯಾದಿ ಶಾಖೆಗಳ ಮೇಲ್ವಿಚಾರಣೆ ನಡೆಸಿ ತಹಶೀಲ್ದಾರ್ ರವರಿಗೆ ಕಡತ ಸಲ್ಲಿಸುವ ಕಾರ್ಯನಿರ್ವಹಿಸುತ್ತಾರೆ.

1. ದ್ವಿ.ದ.ಸ.:- ನಾಡ ಕಛೇರಿಯ ವ್ಯಾಪ್ತಿಯಲ್ಲಿ ಹಕ್ಕು ದಾಖಲಾತಿ ಪತ್ರಗಳು, ಸಾಮಾಜಿಕ ಭದ್ರತಾ ಯೋಜನೆಯ ಪ್ರಕರಣಗಳು, ವಿವಾದಾಸ್ಪದ ಪ್ರಕರಣಗಳ ನಿರ್ವಹಣೆ,
2. ಡಿ-ಗ್ರೂಪ್ ನೌಕರ:- ಕಛೇರಿಯ ಸ್ವಚ್ಛತೆ, ಕಡತ ಹಾಗೂ ಟಪಾಲುಗಳ ಜಾರಿ ಮಾಡುವುದು ಹಾಗೂ ಉಪ ತಹಶೀಲ್ದಾರ್ ನೀಡುವ ನೋಟೀಸ್ ಜಾರಿ ಮಾಡುವುದು.

ಭೂ ದಾಖಲೆಗಳ ಪರ್ಯಾವೇಕ್ಷಕರು:- ಭೂ ದಾಖಲೆಗಳಿಗೆ ಸಂಬಂಧಪಟ್ಟ ಪೋಡಿ, ಸರ್ವೇ ನಕ್ಷೆ, ಹದ್ದುಬಸ್ತು ಕಡತಗಳ ನಿರ್ವಹಣೆ, ಭೂ ಮೋಜಣಿ, ಸಂಯೋಜಿತ ಪೋಡಿ, 11 ಇ ನಕ್ಷೆ, ಆಕಾರ್ ಬಂದ್. ದರಖಾಸ್ತು ಕಡತಗಳ ದುರಸ್ತಿ ಕಾರ್ಯ, ಸರ್ಕಾರಿ ಮತ್ತು ಪರವಾನಗಿ ಭೂಮಾಪಕರ ಕಾರ್ಯವೈಖರಿ ಮೇಲ್ವಿಚಾರಣೆ, ಮುಂಗಡ ಪ್ರವಾಸ ಕಾರ್ಯಕ್ರಮ ಹಾಗೂ ದಿನಚರಿಗಳ ಪರಿಶೀಲನೆ ನಡೆಸುವುದು.

1. ಪ್ರ.ದ.ಸ.:- ಭೂಮಾಪನ ಶಾಖೆಯ ಸಿಬ್ಬಂದಿ ಕಡತಗಳ ನಿರ್ವಹಣೆ,
2. ದ್ವಿದಸ:- ಭೂಮಾಪನ ಶಾಖೆಯ ಅಭಿಲೇಖಾಲಯದಲ್ಲಿ ಕಡತ ಜೋಡಣೆ ಮತ್ತು ನಿರ್ವಹಣೆ,

ಪ್ರಥಮ ದರ್ಜೆ ಭೂ ಮಾಪಕರು:- ಸರ್ಕಾರಿ ಜಮೀನಿನ ಸರ್ವೆ ಕಾರ್ಯನಿರ್ವಹಣೆ, ಹದ್ದುಬಸ್ತು ಕಾರ್ಯನಿರ್ವಹಿಸುವುದು, ತತ್ಕಲ್ ಪೋಡಿ ಕಾರ್ಯ, ದುರಸ್ತಿ ಕಾರ್ಯ ನಿರ್ವಹಣೆ.

1. ದ್ವಿ.ದ.ಭೂ ಮಾಪಕರು:- ಸರ್ಕಾರಿ ಜಮೀನಿನ ಸರ್ವೆ ಕಾರ್ಯನಿರ್ವಹಣೆ, ಹದ್ದುಬಸ್ತು ಕಾರ್ಯನಿರ್ವಹಿಸುವುದು, ತತ್ಕಲ್ ಪೋಡಿ ಕಾರ್ಯ, ದುರಸ್ತಿ ಕಾರ್ಯ ನಿರ್ವಹಣೆ.
2. ಬಾಂದು ಜವಾನರು:- ಅಳತೆ ಕಾರ್ಯದಲ್ಲಿ ಭೂಮಾಪಕರಿಗೆ ಸಹಾಯಕರಾಗಿ ಕಾರ್ಯನಿರ್ವಹಿಸುವುದು.
3. ಡಿ-ದರ್ಜೆ ನೌಕರರು:- ಕಛೇರಿಯ ಸ್ವಚ್ಛತೆ, ಕಡತ ಹಾಗೂ ಟಪಾಲುಗಳ ಜಾರಿ ಮಾಡುವುದು ಹಾಗೂ ಪರ್ಯಾವೇಕ್ಷಕರು ನೀಡುವ ನೋಟೀಸ್ ಜಾರಿ ಮಾಡುವುದು.

ಆಹಾರ ಶಿರಸ್ತೇದಾರರು:- ಅಗತ್ಯ ವಸ್ತುಗಳ ಕಾಯ್ದೆ ಹಾಗೂ ನಾಗರೀಕ ಸರಬರಾಜು ಹಾಗೂ ಪೂರೈಕೆ ನಿಯಮದಡಿಯಲ್ಲಿ ಕಾರ್ಯನಿರ್ವಹಿಸುವುದು. ನ್ಯಾಯ ಬೆಲೆಅಂಗಡಿಗಳ ತಪಾಸಣೆ, ನ್ಯಾಯ ಬೆಲೆ ಅಂಗಡಿಗಳ ಪರವಾನಗಿ ನವೀಕರಣ, ಪಡಿತರ ಚೀಟಿ ವಿತರಣೆ, ಆಹಾರ ಧಾನ್ಯಗಳು, ಸೀಮೆ ಎಣ್ಣೆ, ವಿತರಣೆಯ ಕಾರ್ಯನಿರ್ವಹಿಸುವುದು.

1. ಆಹಾರ ನಿರೀಕ್ಷಕರು:- ನಿಗದಿಪಡಿಸಿದ ವ್ಯಾಪ್ತಿಯಲ್ಲಿ ಅಗತ್ಯ ವಸ್ತುಗಳ ಕಾಯ್ದೆ ಹಾಗೂ ನಾಗರೀಕ ಸರಬರಾಜು ಹಾಗೂ ಪೂರೈಕೆ ನಿಯಮದಡಿಯಲ್ಲಿ ಕಾರ್ಯನಿರ್ವಹಿಸುವುದು. ನ್ಯಾಯ ಬೆಲೆಅಂಗಡಿಗಳ ತಪಾಸಣೆ, ಪಡಿತರ ಚೀಟಿ ವಿತರಣೆ, ಆಹಾರ ಧಾನ್ಯಗಳು, ಸೀಮೆ ಎಣ್ಣೆ, ವಿತರಣೆಯ ಕಾರ್ಯನಿರ್ವಹಿಸುವುದು
2. ದ್ವಿ.ದ.ಸ.:- ಕಛೇರಿ ಕಡತಗಳ ನಿರ್ವಹಣೆ, ಹಾಗೂ ಆಹಾರ ಶಿರಸ್ತೇದಾರರು ವಹಿಸುವ ಇತರೆ ಕಾರ್ಯಗಳ ನಿರ್ವಹಣೆ.

(ಸೆಕ್ಷನ್ 4(1)(ಬಿ) (iii)]

ತೀರ್ಮಾನ ತೆಗೆದುಕೊಳ್ಳಲು ಅನುಸರಿಸಬೇಕಾದ ಕಾರ್ಯವಿಧಾನ, ವಿವಿಧ ತೆರನಾದ ಮೇಲ್ವಿಚಾರಣೆ, ಜವಾಬ್ದಾರಿ ಮತ್ತು ನಿಯಂತ್ರಣ

1. ತಹಶೀಲ್ದಾರ್ ರವರಿಂದ ಪ್ರಸ್ತಾವವು ಸ್ವೀಕೃತಿಯಾದೊಡನೆ ದ್ವಿ.ದ.ಸ. / ಪ್ರ.ದ.ಸ. ಇವರು ಹೊಸ ಕಡತವನ್ನು ತೆರೆದು ಅಥವಾ ವಿಷಯದ ಬಗ್ಗೆ ಲಭ್ಯವಿದ್ದ ಹಿಂದಿನ ಕಡತದಲ್ಲಿ ಅವುಗಳ ಪ್ರಾಮುಖ್ಯತೆಗೆ ತಕ್ಕಂತೆ ಸಂಬಂಧಪಟ್ಟ ನಿಯಮಗಳ ಅಡಿಯಲ್ಲಿ ಟಿಪ್ಪಣಿಯನ್ನು ಪ್ರಾರಂಭಿಸುತ್ತಾರೆ. ಪ್ರ.ದ.ಸ./ ದ್ವಿ.ದ.ಸ. ಸಲ್ಲಿಸಿದ ಟಿಪ್ಪಣಿಗಳನ್ನು ಶಿರಸ್ತೇದಾರ್‌ರವರು ಪರಿಶೀಲಿಸಿ ತಹಶೀಲ್ದಾರ್ ರವರಿಗೆ ಮಂಡಿಸುತ್ತಾರೆ. ಶಿರಸ್ತೇದಾರ್‌ರವರು ವಿಷಯಗಳ ಪ್ರಾಮುಖ್ಯತೆಗೆ ತಕ್ಕಂತೆ ಸಂಬಂಧಪಟ್ಟ ನಿಯಮಗಳಡಿಯಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಮುಂದಿನ ಕ್ರಮ ಜರುಗಿಸಲು ಸಾಧ್ಯವಿದ್ದಲ್ಲಿ ತಮ್ಮ ಹಂತದಲ್ಲಿಯೇ ಜರುಗಿಸುತ್ತಾರೆ. ಅಥವಾ ಮುಂದಿನ ಆದೇಶಕ್ಕಾಗಿ ತಹಶೀಲ್ದಾರ್‌ರವರಿಗೆ ಕಡತವನ್ನು ಮಂಡಿಸುತ್ತಾರೆ. ತಹಶೀಲ್ದಾರ್ ರವರು ಶಿರಸ್ತೇದಾರರಿಂದ ಸಲ್ಲಿಸಲ್ಪಟ್ಟ ಕಡತಗಳನ್ನು ಸಮಗ್ರವಾಗಿ ಪರಿಶೀಲಿಸಿ, ಮುಂದಿನ ಆದೇಶಕ್ಕಾಗಿ ಜಿಲ್ಲಾಧಿಕಾರಿ/ ಉಪ ವಿಭಾಗಾಧಿಕಾರಿಯವರಿಗೆ ಕಡತವನ್ನು ಮಂಡಿಸುತ್ತಾರೆ. ಅಥವಾ ತಮ್ಮ ಹಂತದಲ್ಲಿಯೇ ಕ್ರಮ ಜರುಗಿಸಲು ಸಾಧ್ಯವಿದ್ದಲ್ಲಿ ಕ್ರಮ ಜರುಗಿಸುತ್ತಾರೆ.
2. ಸಾರ್ವಜನಿಕರಿಂದ, ಅಧೀನ ಕಛೇರಿಗಳಿಂದ ಮತ್ತು ಸರ್ಕಾರ ಹಾಗೂ ಮೇಲಾಧಿಕಾರಿಗಳಿಂದ ಬರುವಂತಹ ಎಲ್ಲಾ ಕಾಗದ ಪತ್ರಗಳನ್ನು/ ಕಡತಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಸ್ವೀಕರಿಸಿ ಸಾರ್ವಜನಿಕರ ಮನವಿ ಬಗ್ಗೆ ಸ್ಥಳದಲ್ಲೇ ಸ್ವೀಕೃತಿ ಪತ್ರವನ್ನು ನೀಡಿದ ನಂತರ ಕಛೇರಿಯ ಉಪ ತಹಶೀಲ್ದಾರರ ಮುಖಾಂತರ ತಹಶೀಲ್ದಾರರ ಗಮನಕ್ಕೆ ತಂದು ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ ಪ್ರತಿ ಕಡತ/ ಕಾಗದ ಪತ್ರಗಳನ್ನು ಶಾಖಾವಾರು ಗುರುತಿಸುವಂತೆ ಹಾಕಿದ ನಂತರ ಅಗತ್ಯ ಕ್ರಮ ಕೈಗೊಳ್ಳಲು ನೀಡಲಾಗುತ್ತದೆ. ಉದಾಹರಣೆಗೆ: 1. ಭೂ ಮಂಜೂರಾತಿ, ಭೂ ಸುಧಾರಣೆ, ಭೂ ಸ್ವಾಧೀನ, ಲೆಕ್ಕ ಶಾಖೆ, ಪ್ರಕೃತಿ ವಿಕೋಪ, ಹಕ್ಕು ದಾಖಲೆ, ಸಿಬ್ಬಂದಿ ಶಾಖೆ, ಅಭಿಲೇಖಾಲಯ, ಭೂ ಪರಿವರ್ತನೆ, ಚುನಾವಣೆ, ಆಡಳಿತ, ಮೆಜಿಸ್ಟೀರಿಯಲ್, ಕರ್ನಾಟಕ ಪರಿಶಿಷ್ಟ ಜಾತಿ, ಸೀಲಾವರಿ, ಅರಣ್ಯ, ಸಾಲ್ವೆನ್ಸಿ, ಮಿಸಲೇನಿಯಸ್, ಸಾರ್ವಜನಿಕ ಕುಂದುಕೊರತೆ, ಇತ್ಯಾದಿ.

ನಿರ್ಣಯ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸುವ ವಿಧಾನ

(ಸೆಕ್ಷನ್ 4(1)(ಬಿ) (iv)]

4.1 ಸಾರ್ವಜನಿಕ ಪ್ರಾಧಿಕಾರವು ನಿರ್ಣಯ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸುವ ವಿಧಾನದ ಬಗ್ಗೆ ವಿವರ:-

1. ತಾಲ್ಲೂಕು ಕಛೇರಿಯಲ್ಲಿ ಸ್ವೀಕರಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿ ವಿಷಯ ನಿರ್ವಾಹಕರಿಗೆ ನೀಡುವ ವ್ಯವಸ್ಥೆ ಕಲ್ಪಿಸಲಾಗಿದೆ.

2. ಸಾರ್ವಜನಿಕರ ಕುಂದು ಕೊರತೆಗಳ ನಿವಾರಣೆಗೆ ಸ್ವೀಕರಿಸಲಾಗುವ ಎಲ್ಲಾ ಮನವಿಗಳನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ಕ್ಲಿಪ್ತ ಕಾಲದಲ್ಲಿ ನೀಡುವುದು.
3. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲನೆಯ ಬಗ್ಗೆ ಪ್ರತಿ ಮಾಹೆಯಲ್ಲೂ ಕಂದಾಯ ನಿರೀಕ್ಷಕರ ಹಾಗೂ ಗ್ರಾಮ ಲೆಕ್ಕಿಗರ ಸಭೆ ನಡೆಸಲಾಗುವುದು.
4. ಕಛೇರಿ ಕೈಪಿಡಿ ನಿಯಮಾವಳಿಯ ರೀತ್ಯಾ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರು ಸ್ವೀಕರಿಸಿ ಗರಿಷ್ಠ 5 ದಿನಗಳೊಳಗಾಗಿ ಸ್ವೀಕರಿಸಿದ ಎಲ್ಲಾ ಕಾಗದ ಪತ್ರಗಳನ್ನು ದಿನಚರಿ ವಹಿಯಲ್ಲಿ ನಮೂದಿಸಿಕೊಂಡು ನಂತರ ವಿಷಯ ವಹಿಯಲ್ಲಿ ಅನುಕ್ರಮವಾಗಿ ದಾಖಲಿಸಿಕೊಂಡು ಕಡತ ನಿರ್ಮಾಣ ಮಾಡುತ್ತಾರೆ ಹಾಗೂ ಕಛೇರಿ ಕಾರ್ಯವಿಧಾನದ ರೀತ್ಯಾ 5 ಕಟ್ಟು (five bundles system) ವಿಧಾನ ಅನುಸರಿಸಿ ಕಾರ್ಯನಿರ್ವಹಿಸುತ್ತಾರೆ.
5. ವಿಷಯ ನಿರ್ವಾಹಕರಿಂದ ಬಂದಂತಹ ಎಲ್ಲಾ ಕಡತಗಳ ಪರಿಶೀಲನೆ ಮಾಡಿ ಶಿರಸ್ತೇದಾರ್ ರವರು ವಿಳಂಬವಾಗದ ರೀತಿ ಕಡತದಲ್ಲಿ ವಿಷಯವಾರು ತೀರ್ಮಾನ ಕೈಗೊಳ್ಳುವ ನಿಟ್ಟಿನಲ್ಲಿ ಸೂಕ್ತ ಅಭಿಪ್ರಾಯದೊಂದಿಗೆ ತಹಶೀಲ್ದಾರ್ ರವರಿಗೆ ಕಡತ ಸಲ್ಲಿಸುತ್ತಾರೆ. ಕಡತಗಳಲ್ಲಿ ತೀರ್ಮಾನ ಕೈಗೊಳ್ಳುವ ಬಗ್ಗೆ ಅನುಸರಿಸುವ ಕಾರ್ಯವಿಧಾನ ಕಛೇರಿ ಕೈಪಿಡಿ ನಿಯಮಾವಳಿ ರೀತ್ಯಾ ಕ್ರಮ ವಹಿಸಲಾಗುತ್ತದೆ.
6. ಸಾರ್ವಜನಿಕರಿಂದ ಸ್ವೀಕರಿಸಲಾಗುವ ಕಾಗದ ಪತ್ರಗಳಿಗೆ ಸ್ವೀಕೃತಿ ನೀಡುವುದಲ್ಲದೆ ಕಾರ್ಯಗತ ಅವಧಿ ನಿಗದಿಪಡಿಸಿ ತಿಳಿಸಲಾಗುತ್ತದೆ. ವಿವರ ಕೆಳಕಂಡಂತಿದೆ:

ಕ್ರ. ಸಂ.	ಪಡೆಯಬೇಕಾದ ದಾಖಲಾತಿ/ ಪ್ರಮಾಣ ಪತ್ರ	ಅರ್ಜಿ ಸಲ್ಲಿಸಬೇಕಾದ ವಿಧಾನ ಮತ್ತು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು	ಯಾರಿಗೆ ಅರ್ಜಿ ಸಲ್ಲಿಸಬೇಕು	ಕಾಲಮಿತಿ
1	ಜಾತಿ/ ಆದಾಯ ಪ್ರಮಾಣ ಪತ್ರ	ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಹೋಬಳಿ ಮಟ್ಟದ ನೆಮ್ಮದಿ ಕೇಂದ್ರದಲ್ಲಿ ಸಲ್ಲಿಸಬೇಕು 1. ವಾಸ ಮತ್ತು ವಿಳಾಸದ ದೃಢೀಕರಣ. 2. ರೇಷನ್ ಕಾರ್ಡ್ / ಟೆಲಿಫೋನ್ ಬಿಲ್/ ಡ್ರೈವಿಂಗ್ ಲೈಸೆನ್ಸ್/ ಚುನಾವಣಾ ಗುರುತಿನ ಚೀಟಿ/ ಮತದಾರರ ಪಟ್ಟಿಯ ಪ್ರತಿ. 3. ಜಮೀನಿನ ವಿವರ/ ವೇತನ ದೃಢೀಕರಣ ಪತ್ರ	ತಹಶೀಲ್ದಾರ್/ ನೆಮ್ಮದಿ ಕೇಂದ್ರ	10 ದಿನಗಳು
2	ಉತ್ತರ ಜೀವಿತ ಪತ್ರ/ ಕುಟುಂಬದ ಜೀವಂತ ಸದಸ್ಯರ ದೃಢೀಕರಣ ಪತ್ರ	ವ್ಯಕ್ತಿಯು ಮೃತಪಟ್ಟ 1 ವರ್ಷದೊಳಗೆ ನೆಮ್ಮದಿ ಕೇಂದ್ರದ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. 1. ಮರಣ ಸಮರ್ಥನಾ ಪತ್ರ. 2. ಅಫಿಡವಿಟ್ (ಪ್ರಮಾಣ ಪತ್ರ)	ತಹಶೀಲ್ದಾರ್/ ನೆಮ್ಮದಿ ಕೇಂದ್ರ	45 ದಿನಗಳು
3	ಭೂ ಹಿಡುವಳಿ/ ಬೋನಾಫೈಡ್/ ಸಣ್ಣ ಹಿಡುವಳಿ/ ಅತಿ ಸಣ್ಣ ಹಿಡುವಳಿ/ ವ್ಯವಸಾಯಗಾರರ ಕುಟುಂಬದ ಸದಸ್ಯರ/ ಭೂ ರಹಿತ/ ಕೃಷಿ ಕಾರ್ಮಿಕರ / ಭೂ ಮೌಲ್ಯ/ ಯೋಜನಾ ನಿರಾಶ್ರಿತರ/ ಗಡಿನಾಡ ಕನ್ನಡಿಗರ/ ಹೊರನಾಡ ಕನ್ನಡಿಗರ/ ಸಾಲ ತೀರುವಳಿ/ ವಾಸಸ್ಥಳದ ದೃಢೀಕರಣದ ಪತ್ರಗಳು	ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಹೋಬಳಿ ಮಟ್ಟದ ನೆಮ್ಮದಿ ಕೇಂದ್ರದಲ್ಲಿ ಸಲ್ಲಿಸಬೇಕು 1. ವಾಸ ಮತ್ತು ವಿಳಾಸದ ದೃಢೀಕರಣ. 2. ರೇಷನ್ ಕಾರ್ಡ್ / ಟೆಲಿಫೋನ್ ಬಿಲ್/ ಡ್ರೈವಿಂಗ್ ಲೈಸೆನ್ಸ್/ ಚುನಾವಣಾ ಗುರುತಿನ ಚೀಟಿ/ ಮತದಾರರ ಪಟ್ಟಿಯ ಪ್ರತಿ. 3. ಜಮೀನಿನ ವಿವರ/ ವೇತನ ದೃಢೀಕರಣ ಪತ್ರ 4. ಜಮೀನು ಹೊಂದಿರುವ ಬಗ್ಗೆ ದಾಖಲಾತಿ.	ತಹಶೀಲ್ದಾರ್/ ನೆಮ್ಮದಿ ಕೇಂದ್ರ	10 ದಿನಗಳು

ಕ್ರ. ಸಂ.	ಪಡೆಯಬೇಕಾದ ದಾಖಲಾತಿ/ ಪ್ರಮಾಣ ಪತ್ರ	ಅರ್ಜಿ ಸಲ್ಲಿಸಬೇಕಾದ ವಿಧಾನ ಮತ್ತು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು	ಯಾರಿಗೆ ಅರ್ಜಿ ಸಲ್ಲಿಸಬೇಕು	ಕಾಲಮಿತಿ
4	ಸಾಮಾಜಿಕ ಭದ್ರತಾ ಯೋಜನೆಗಳು 1. ವೃದ್ಧಾಪ್ಯ ವೇತನ. 2. ಅಂಗವಿಕಲರ ವೇತನ. 3. ವಿಧವಾ ವೇತನ. 4. ಸಂಧ್ಯಾ ಸುರಕ್ಷಾ ಯೋಜನೆ. 5. ಅಂತ್ಯ ಸಂಸ್ಕಾರ. 6. ರಾಷ್ಟ್ರೀಯ ಕುಟುಂಬ ನೆರವು ಯೋಜನೆ	ನಿಗದಿತ ನಮೂನೆಯಲ್ಲಿ ನೆಮ್ಮದಿ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು. ಪಡಿತರ ಚೀಟಿ/ ಮತದಾರರ ಗುರುತಿನ ಚೀಟಿ/ ವೈದ್ಯಕೀಯ ಪ್ರಮಾಣ ಪತ್ರ/ ಜಮೀನಿನ ದಾಖಲಾತಿ/ ಬ್ಯಾಂಕಿನಲ್ಲಿ ಖಾತೆ ತೆರೆದಿರುವ ದಾಖಲೆ/ ಮರಣ ಸಮರ್ಥನಾ ಪತ್ರ/ ಅಫಿಡವಿಟ್ (ಪ್ರಮಾಣ ಪತ್ರ)/ ವಾಸಸ್ಥಳದ ದೃಢೀಕರಣ/ ಜಾತಿ ಮತ್ತು ಆದಾಯದ ದೃಢೀಕರಣ/ ಬ್ಯಾಂಕಿನಲ್ಲಿ ಠೇವಣಿ ಹೊಂದಿಲ್ಲದ ಬಗ್ಗೆ ನಿರಾಕ್ಷೇಪಣಾ ಪತ್ರ,/ 5 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರಗಳು, ಇತ್ಯಾದಿ.	ತಹಶೀಲ್ದಾರ್/ ಉಪ ತಹಶೀಲ್ದಾರ್, ನಾಡ ಕಛೇರಿ	1. 30 ದಿನ 2. 60 3. 30 4. 30 5. 03 6. 30
5	ಹಕ್ಕು ದಾಖಲಾತಿ ಪ್ರಕರಣ 1. ಪೌತಿ ವಾರಸು ಖಾತೆ ಬದಲಾವಣೆ. 2. ವಿಭಾಗ ಪತ್ರದಂತೆ. 3. ಪಂಚಾಯಿತಿ ಪಾರಿಖತ್ 4. ಕ್ರಯ/ ದಾನ ಕ್ರಯ/ ಮರಣ ಶಾಸನ (ವಿಲ್)/ 5. ಕೋರ್ಟ್ ಆದೇಶ 6. ಹಕ್ಕು ನಿವೃತ್ತಿ (ರಿಲೀಸ್) 7. ಆಧಾರ 8. ಭೋಗ್ಯ, 9. ಭೂ ಮಂಜೂರಾತಿ 10. ಭೂ ಪರಿವರ್ತನೆ 11. ಭೂ ಸ್ವಾಧೀನ, ವಗೈರೆ	ತಾಲ್ಲೂಕು ಕಛೇರಿಯ ಭೂಮಿ ಕೇಂದ್ರದಲ್ಲಿ ಅರ್ಜಿ ಸಲ್ಲಿಸುವುದು. 1. ಮರಣ ಸಮರ್ಥನಾ ಪತ್ರ/ ಕ್ರಯ ಪತ್ರ/ ದಾನ ಕ್ರಯ ಪತ್ರ/ ಮರಣ ಶಾಸನ ಪತ್ರ (ವಿಲ್)/ ಪಹಣಿ ಪತ್ರಿಕೆ/ ಮ್ಯುಟೇಷನ್ ದಾಖಲೆ/ ಸಾಗುವಳಿ ಚೀಟಿ/ ಭೂ ಮಂಜೂರಾತಿ ಆದೇಶ/ ಭೂ ಸ್ವಾಧೀನ ಆದೇಶ/ ನ್ಯಾಯಾಲಯದ ಆದೇಶ/ ಸರ್ವೇ ನಕ್ಷೆ/ ಅಹವಾಲು ತ:ಖ್ತೆ/ ವಂಶವೃಕ್ಷ, ವಗೈರೆ	ತಹಶೀಲ್ದಾರ್/ ಭೂಮಿ ಶಾಖೆ	45 ದಿನಗಳು

ಕ್ರ. ಸಂ.	ಪಡೆಯಬೇಕಾದ ದಾಖಲಾತಿ/ ಪ್ರಮಾಣ ಪತ್ರ	ಅರ್ಜಿ ಸಲ್ಲಿಸಬೇಕಾದ ವಿಧಾನ ಮತ್ತು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು	ಯಾರಿಗೆ ಅರ್ಜಿ ಸಲ್ಲಿಸಬೇಕು	ಕಾಲಮಿತಿ
6	ಪ್ರಕೃತಿ ವಿಕೋಪ 1. ಬೆಂಕಿ ಆಕಸ್ಮಿಕ 2. ಮಳೆ/ ಗಾಳಿ ಅನಾಹುತ 3. ಪ್ರವಾಹ ಆಕಸ್ಮಿಕ 4. ಇತರೆ ಪ್ರಕೃತಿ ವಿಕೋಪ	ತಾಲ್ಲೂಕು ಕಛೇರಿಯಲ್ಲಿ ಅರ್ಜಿ ಸಲ್ಲಿಸುವುದು. 1. ಆರಕ್ಷಕ ಠಾಣೆಯಿಂದ ಪಡೆದ ಪ್ರಾಥಮಿಕ ವರದಿ. 2. ಪಹಣಿ ದಾಖಲೆ. 3. ಗ್ರಾಮ ಪಂಚಾಯಿತಿ/ ನಗರ/ ಪುರಸಭೆ, ಇತ್ಯಾದಿಯಿಂದ ಪಡೆದ ಖಾತಾ ದಾಖಲಾತಿ.. 4. ವೈದ್ಯಕೀಯ ದೃಢೀಕರಣ ಪತ್ರ. 5. ತೋಟಗಾರಿಕಾ/ ಕೃಷಿ ಇಲಾಖೆಯಿಂದ ಪಡೆದ ಬೆಳೆ ನಷ್ಟದ ದೃಢೀಕರಣ ಪತ್ರ. 6. ನಷ್ಟಕ್ಕೆ ಸಂಬಂಧಿಸಿದ ಛಾಯಾಚಿತ್ರ (ಫೋಟೋ)	ತಹಶೀಲ್ದಾರ್	7 ದಿನಗಳು
7	ಪಡಿತರ ಚೀಟಿ	ನೆಮ್ಮದಿ ಕೇಂದ್ರದಲ್ಲಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು. 1. ವಾಸಸ್ಥಳ ದೃಢೀಕರಣ ಪತ್ರ. 2. ಸರಂಡರ್ ಸರ್ಟಿಫಿಕೆಟ್ 3. ಅಫಿಡವಿಟ್ (ಪ್ರಮಾಣ ಪತ್ರ) 4. ಆದಾಯ ಪ್ರಮಾಣ ಪತ್ರ	ತಹಶೀಲ್ದಾರ್	
8	ಬಂದೂಕು/ ಆಯುಧ ಪರವಾನಗಿ ಮಂಜೂರಿ ಮತ್ತು ನವೀಕರಣ	ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು. 1. ಜಮೀನಿನ ದಾಖಲೆ 2. ಭಾವಚಿತ್ರ 3. ವೈದ್ಯಕೀಯ ಪ್ರಮಾಣ ಪತ್ರ 4. ಆರಕ್ಷಕ ಇಲಾಖೆಯ ನಿರಾಪೇಕ್ಷಣಾ ಪತ್ರ 5. ಮರಣ ಸಮರ್ಥನಾ ಪತ್ರ, ಇತ್ಯಾದಿ	ತಹಶೀಲ್ದಾರ್	30 ದಿನಗಳು
9	ಭೂ ಪರಿವರ್ತನೆ	ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು. 1. ಜಮೀನಿನ ದಾಖಲಾತಿಗಳಾದ ಪಹಣಿ, ಖಾತಾ ನಕಲು, ಕ್ರಯ ಪತ್ರ, ಮುಟೇಷನ್ ನಕಲು ವಿವಿಧ ಇಲಾಖೆಗಳ ನಿರಾಪೇಕ್ಷಣಾ ಪತ್ರ,, ಋಣ ತ:ಖ್ತೆ (ಇ.ಸಿ), ಗೇಣಿ ರಹಿತ ದೃಢೀಕರಣ ಪತ್ರ,. ಇತ್ಯಾದಿ	ತಹಶೀಲ್ದಾರ್	45 ದಿನಗಳು

ಕ್ರ. ಸಂ.	ಪಡೆಯಬೇಕಾದ ದಾಖಲಾತಿ/ ಪ್ರಮಾಣ ಪತ್ರ	ಅರ್ಜಿ ಸಲ್ಲಿಸಬೇಕಾದ ವಿಧಾನ ಮತ್ತು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು	ಯಾರಿಗೆ ಅರ್ಜಿ ಸಲ್ಲಿಸಬೇಕು	ಕಾಲಮಿತಿ
10	ಭೂ ಮಾಪನ ದಾಖಲೆಗಳು/ 11 ಇ ನಕ್ಷೆಗಳು/ ಪೋಡಿ/ ಹದ್ದುಬಸ್ತು, ಇತ್ಯಾದಿ	ನೆಮ್ಮದಿ ಕೇಂದ್ರದಲ್ಲಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು. 1. ಪಹಣಿ ದಾಖಲೆ, ಮುಟೇಷನ್ ನಕಲು , ಕ್ರಯ ಪತ್ರ, ವಿಭಾಗ ಪತ್ರ,, ಪಂಚಾಯಿತಿ ಪಾರಿಖತ್ , ನಿಗದಿತ ಶುಲ್ಕ ಪಾವತಿಸಿದ ರಸೀದಿ, ಇತ್ಯಾದಿ	ತಹಶೀಲ್ದಾರ್	15 30 45 ದಿನಗಳು

(ಸೆಕ್ಷನ್ 4(1)(ಬಿ) (v))

ತಹಶೀಲ್ದಾರ್ ರವರ ನಿಯಂತ್ರಣದಲ್ಲಿ ದಸ್ತಾವೇಜುಗಳ ಪ್ರವರ್ಗಗಳು:-

